ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 22, ಸಂಚಿಕೆ: 29, ಪುಟಗಳು: 8, ಶುಕ್ರವಾರ, 8 ನವೆಂಬರ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...

ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines

ಸುಭಾಷಿತ

ಅಧ್ಯಕ್ಷನೋ ಸೇನಾನಿಯೋ, ಕಮ್ಮಾರನೋ ಚಮ್ಮಾರನೋ, ಎಲ್ಲರ ಕಾಯಕವೆಲ್ಲವೂ ಪೂಜ್ಯ.

। ಕುವೆಂಪು

## ಪಂಚಾಂಗ

(ಶುಕ್ರವಾರ 8, ನವೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಶರದೃತು,
- ಕಾರ್ತಿಕ ಮಾಸ, ಶುಕ್ಲ ಪಕ್ಷ,
- ಸಪ್ತಮಿ, ಶುಕ್ರವಾರ,
- ಉತ್ತರಾಷಾಡ ನಕ್ಷತ್ರ / ಶ್ರವಣ ನಕ್ಷತ್ರ.
- ರಾಹುಕಾಲ: 10:40 ರಿಂದ 12:07
- ಗುಳಿಕಕಾಲ: 07:46 ರಿಂದ 09:13
- ಯಮಗಂಡಕಾಲ: 03:01 ರಿಂದ 04:48

## ಸಂಕ್ಷಿಪ್ತ ಸುದ್ದಿ

### ಸಿದ್ದರಾಮಯ್ಯ ಮುಸ್ಲಿಮರ ಸಾಮ್ರಾಟನಾಗಲು ಯತ್ನ

**ಶ್ರೀರಂಗಪಟ್ಟಣ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಟಿಪ್ಪು ಮಾದರಿಯಾಗಿದ್ದು, ಮತಾಂಧ ಮುಸ್ಲಿಮರನ್ನು ಓಲೈಸಲು ವಕ್ಫ್ ಮಂಡಳಿ ಹೆಸರಿನಲ್ಲಿ ಕಾಂಗ್ರೆಸ್ ಲೂಟಿ ನಡೆಸಲು ಮುಂದಾಗಿದೆ. ಆ ಮೂಲಕ ಸಿದ್ದರಾಮಯ್ಯ ಮುಸ್ಲಿಮರ ಸಾಮ್ರಾಟ್ ಆಗಲು ಯತ್ನಿಸುತ್ತಿದ್ದಾರೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಟೀಕಿಸಿದರು.



ಶ್ರೀರಂಗಪಟ್ಟಣ ತಾಲೂಕಿನ ಮಹದೇವಪುರ ಮತ್ತು ಚಂದಗಾಲು ಗ್ರಾಮಗಳಲ್ಲಿ ಮಾತನಾಡಿ, ಭೂ ಕಬಳಿಕೆಯ ಕ್ಯಾನ್ಸರ್ ತಡೆಗಟ್ಟದಿದ್ದರೆ ರೈತರು, ದಲಿತರ ಜಮೀನು ಉಳಿಯುವುದಿಲ್ಲ. ಸ್ವಾತಂತ್ರ್ಯ ಚಳವಳಿ ಮಾಡಿದಂತೆಯೇ ಈಗ ನಾವು ಹೋರಾಟ ಮಾಡಿ ವಕ್ಫ್ ಬೋರ್ಡ್ ರದ್ದು ಮಾಡಬೇಕಿದೆ. ಪಹಣಿಯಲ್ಲಿ ಬರೆದ ವಕ್ಫ್ ಬೋರ್ಡ್ ಎಂಬ ಹೆಸರು ಪುಟ 2

### ಸರ್ಕಾರಿ ಶಾಲೆಯನ್ನು 5 ವರ್ಷದಿಂದ ಮನೆ ಮಾಡಿಕೊಂಡ ಕುಟುಂಬ



**ಕೋಲಾರ:** ಶ್ರೀನಿವಾಸಪುರ ತಾಲೂಕಿನ ಕೋಡಿಹಳ್ಳಿ ಪಂಚಾಯತಿ ವ್ಯಾಪ್ತಿಯ ಗಾಂಧಿನಗರ ಸರ್ಕಾರಿ ಶಾಲೆಯನ್ನು ವ್ಯಕ್ತಿಯೋರ್ವ ಮನೆ ಮಾಡಿಕೊಂಡಿದ್ದಾನೆ. ಗೌನಿಪಲ್ಲಿ ಗ್ರಾಮದ ನಿವಾಸಿ ಕುಮಾರ್ ಕುಟುಂಬ ಸಮೇತ ಶಾಲೆಯಲ್ಲಿ ವಾಸವಾಗಿದ್ದಾನೆ. ಗಾಂಧಿನಗರ ಸರ್ಕಾರಿ ಶಾಲೆ ಐದು ವರ್ಷಗಳ ಹಿಂದೆ ಮುಚ್ಚಿದೆ. ಈ ವಿಚಾರ ತಿಳಿದ ಕುಮಾರ್ , ಕಳೆದ ಐದು ವರ್ಷಗಳಿಂದ ಬಂದ್ ಆದ ಸರ್ಕಾರಿ ಶಾಲೆಯಲ್ಲೇ ಕುಟುಂಬ ಸಮೇತ ವಾಸವಾಗಿದ್ದಾನೆ. ಶಾಲೆಯ ಅಡುಗೆ ಮನೆ, ಗೋಡೌನ್ ಮತ್ತು ಕೊಠಡಿ ಉಪಯೋಗಿಸುತ್ತಿದ್ದಾನೆ. ಗ್ರಾಮಸ್ಥರು ಹಲವು ಭಾರಿ ದೂರು ನೀಡಿದರೂ ಶಿಕ್ಷಣ ಇಲಾಖೆ ಕ್ರಮ ಕೈಗೊಂಡಿಲ್ಲ. ಪುಟ 2

## ಬೆಂಗಳೂರು ರಾಮೇಶ್ವರಂ ಕೆಫೆ ಸ್ಫೋಟಕ್ಕೆ ಪಾಕಿಸ್ತಾನ ನಂಟು

# ನೆರೆ ದೇಶದಲ್ಲಿ ತಲೆಮರೆಸಿಕೊಂಡ ಶಹೀದ್ ಫೈಸಲ್

**ಬೆಂಗಳೂರು:** ಬೆಂಗಳೂರಿನ ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣ ತನಿಖೆ ಮಾಡಿದ ರಾಷ್ಟ್ರೀಯ ತನಿಖಾ ದಳ ಈಗಾಗಲೇ ಕೋರ್ಟ್‌ಗೆ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದೆ. ಎನ್‌ಐಎ ಚಾರ್ಜ್‌ಶೀಟ್‌ನಲ್ಲಿ ಸ್ಫೋಟಕ ಮಾಹಿತಿ ಉಲ್ಲೇಖವಾಗಿರುವುದು ಈಗ ತಿಳಿದುಬಂದಿದೆ.




ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣಕ್ಕೆ ಪಾಕಿಸ್ತಾನದ ನಂಟಿದ್ದು, ಪಾಕ್ ಮೂಲದ ಶಂಕಿತ ಉಗ್ರ ಎಲ್ ಫೈಸಲ್ ಸದ್ಯ ಪಾಕಿಸ್ತಾನದಲ್ಲಿದ್ದಾನೆ ಎನ್ನಲಾಗಿದೆ. ಮಂಗಳೂರು ಕುಕ್ಕರ್ ಸ್ಫೋಟದ ಬಳಿಕ ತಾಹಾ ಮತ್ತು ಶಾಜಿಬ್ ನಾಪತ್ತೆಯಾಗಿದ್ದರು. ಕೆಲಕಾಲದ ಬಳಿಕ ಮತ್ತೆ ವಾಪಾಸ್ ಬೆಂಗಳೂರಿಗೆ ಬಂದಿದ್ದರು. ಆಗ ಮುಜಾಮಿಲ್ ಷರೀಫ್ ಜೊತೆಗೆ ಪರಿಚಯವಾಗಿತ್ತು. ಮುಜಾಮಿಲ್ ಮೆಜೆಸ್ಟಿಕ್ ಬಳಿಯ ಹೋಟೆಲ್ ಒಂದರಲ್ಲಿ ಕೆಲಸ ಮಾಡುತ್ತಿದ್ದ. ಇದೇ ಮುಜಾಮಿಲ್ ಷರೀಫ್‌ನ ತಾಹಾ ಮತ್ತು ಶಾಜಿಬ್ ಮನಪರಿವರ್ತಿಸಿ ಐಸಿಸ್‌ಗೆ ಸೇರ್ಪಡೆ ಮಾಡಿದ್ದರು. ಮೊದಲ ಹಂತದಲ್ಲಿ ಕೆಲವು ದುಷ್ಕೃತ್ಯ ನಡೆಸಲು ಮುಜಾಮಿಲ್‌ಗೆ ತಾಹಾ ಮತ್ತು ಶಾಜಿಬ್ ಟಾಸ್ಕ್ ನೀಡಿದ್ದರು.

**ಮಲ್ಲೇಶ್ವರ ಬಿಜೆಪಿ ಕಚೇರಿ ಪ್ಲಾನ್ ಠುಸ್:** ಉಗ್ರರು 2023 ಡಿಸೆಂಬರ್‌ನಲ್ಲಿ ಬೆಂಗಳೂರಲ್ಲಿ ಬಾಂಬ್ ಸ್ಫೋಟ ನಡೆಸಲು ಸಂಚು ಹೂಡಿದ್ದರು. ಆನ್ ಲೈನ್ ಹ್ಯಾಂಡ್ಲರ್ ಮೂಲಕ ಈ ಸೂಚನೆ ಬಂದಿತ್ತು. ಜನವರಿ 22, 2024ರಂದು ಆಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಇದೆ. ಅಂದೇ ಸ್ಫೋಟ ನಡೆಸಿ ಎಂಬ ಸೂಚನೆ ಇತ್ತು. ಈ ಹಿನ್ನೆಲೆಯಲ್ಲಿ ಮಲ್ಲೇಶ್ವರಂ ಬಿಜೆಪಿ ಕಚೇರಿ ಟಾರ್ಗೆಟ್ ಮಾಡಿದ್ದ ಶಾಜಿಬ್, ಹೀಗಾಗಿ ಬೆಂಗಳೂರಿನಿಂದ ಚೆನ್ನೈಗೆ ಶಿಫ್ಟ್ ಆಗಿದ್ದ. ಟ್ರಿಪ್ಲಿಕೇನ್ ಎಂಬಲ್ಲಿ ಬಾಡಿಗೆ ಮನೆಯಲ್ಲಿದ್ದುಕೊಂಡೆ ಐಇಡಿ ಬಾಂಬ್ ತಯಾರಿಕೆ ಮಾಡಿದ್ದ. 2024 ಜನವರಿ 22ರಂದು ಬೆಳಗ್ಗೆ ಐಇಡಿ ಬಾಂಬ್ ಹಿಡ್ಕೊಂಡು ಬೆಂಗಳೂರಿಗೆ ಬಂದಿದ್ದ ಶಾಜಿಬ್, ಬಿಜೆಪಿ ಕಚೇರಿ ಮುಂಭಾಗದಲ್ಲಿ ಬಾಂಬ್ ಇಡಲು ಸಂಚು ಹೂಡಿದ್ದ. ಹೆಚ್ಚಿನ ಭದ್ರತೆ ಹಿನ್ನೆಲೆ ಬಿಜೆಪಿ ಕಚೇರಿ ಹಿಂಭಾಗದಲ್ಲಿ ಪುಟ 2

## ಜನಸಾಮಾನ್ಯರಿಗೆ ಬಿಗ್ ಶಾಕ್

# ಈರುಳ್ಳಿ ದರ ಶೀಘ್ರ 100ಕ್ಕೇರಿಕೆ?

**ಬೆಂಗಳೂರು:** ಕಳೆದ 2 ದಿನಗಳಿಂದ ಯಶವಂತಪುರ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಈರುಳ್ಳಿ ಸಗಟು ದರ ಏರಿಕೆಯಾಗುತ್ತಿದ್ದು, ಹೀಗೆ ಮುಂದುವರಿದರೆ ಚಿಲ್ಲರೆ ಮಾರುಕಟ್ಟೆಯಲ್ಲಿ ಕೆಜಿ ಈರುಳ್ಳಿ 100 ರು. ಆಗುವ ಎಲ್ಲ ಸಾಧ್ಯತೆಗಳಿವೆ. ಗುರುವಾರ ನಗರದ ಚಿಲ್ಲರೆ ಮಾರುಕಟ್ಟೆಯಲ್ಲಿ ಉತ್ತಮ ಗುಣಮಟ್ಟದ ಈರುಳ್ಳಿ ಗರಿಷ್ಠ ಕೆಜಿಗೆ 70– 80 ರು. ವರೆಗೆ ಮಾರಾಟವಾಗಿದೆ. ಆದರೆ ಕೆಜಿಗೆ 40 ರು. ಈರುಳ್ಳಿಯೂ ಸಿಗುತ್ತಿದೆ.

ಆದರೆ, ಇದು ತೀರಾ ಕಳಪೆ ಗುಣಮಟ್ಟದಿಂದ ಕೂಡಿವೆ. ಮುಂದಿನ 15 ದಿನಗಳಲ್ಲಿ ಇನ್ನಷ್ಟು ಬೆಲೆ ಹೆಚ್ಚಾಗುವ ಸಾಧ್ಯತೆಗಳಿವೆ ಎಂದು ವ್ಯಾಪಾರಿಗಳು ತಿಳಿಸಿದ್ದಾರೆ. ಎಪಿಎಂಸಿಗೆ 100480 ಚೀಲ ಈರುಳ್ಳಿ ಬಂದಿದೆ. ಮಹಾರಾಷ್ಟ್ರದಿಂದ ಬಂದಿರುವ 8–10 ಲಾರಿ ಹಳೇ ದಾಸ್ತಾನಿನ ಈರುಳ್ಳಿ ಗುಣಮಟ್ಟದಿಂದ ಕೂಡಿದೆ. ಕ್ವಿಂಟಲ್‌ಗೆ ಗರಿಷ್ಠ 7200 ರು. ರಿಂದ 7500 ರು. ಹಾಗೂ ಕನಿಷ್ಠ 3500 ರು. ರಿಂದ 5000 ರು. ಬೆಲೆಯಲ್ಲಿವೆ. ಕರ್ನಾಟಕದಿಂದ 500 ಕ್ಕೂ ಹೆಚ್ಚು ಲಾರಿಗಳು ಬಂದಿದ್ದರೂ ತೀರಾ ಕಳಪೆಯಾಗಿದ್ದು, ಕ್ವಿಂಟಲ್‌ಗೆ ಕನಿಷ್ಠ 1500 ರು. ರಿಂದ ಗರಿಷ್ಠ 5500 ರು. ಎಂದು ವರ್ತಕರು ತಿಳಿಸಿದ್ದಾರೆ.



ಅಕ್ಟೋಬರ್ ಕೊನೆಯ ವಾರದಲ್ಲಿ ತೀವ್ರ ಮಳೆಯಾದ ಪರಿಣಾಮ ರಾಜ್ಯದ ಈರುಳ್ಳಿ ಸಂಪೂರ್ಣ ನೆಲಕಚ್ಚಿದೆ. ಒಂದೆರಡು ದಿನಗಳಲ್ಲಿ ಬಳಸಬೇಕು, ಇಲ್ಲವಾದರೆ ಕೊಳೆತುಹೋಗುತ್ತವೆ. ಹೀಗಾಗಿ ರಾಜ್ಯದ ಈರುಳ್ಳಿಗೆ ಬೆಲೆ ಕಡಿಮೆಯಿದೆ. ಸದ್ಯ ಚಿತ್ರದುರ್ಗದ ಆಚೆಗೆ ಉತ್ತರ ಕರ್ನಾಟಕದ ಬಾಗಲಕೋಟೆ, ಗದಗ, ಕೊಪ್ಪಳ ಸೇರಿ ಇತರೆಡೆಯಿಂದ ಬೆಂಗಳೂರಿನ ಮಾರುಕಟ್ಟೆಗೆ ಈರುಳ್ಳಿ ಬರುತ್ತಿದೆ ಎಂದು ಯಶವಂತಪುರ ಎಪಿಎಂಸಿಯ ವರ್ತಕ ಬಿ.ರವಿಶಂಕರ್ ಹೇಳಿದರು.

**ತರಕಾರಿ ಬೆಲೆಯಲ್ಲಿ ಭಾರಿ ಹೆಚ್ಚಳ:** ತರಕಾರಿ ಧಾರಣೆ ವಾರದಿಂದ ವಾರಕ್ಕೆ ಹೆಚ್ಚುತ್ತಿದೆ. ತರಕಾರಿ ಮಾರುಕಟ್ಟೆಗೆ ಹೋದ ಗ್ರಾಹಕರು ದರ ಕೇಳಿ ಹೌಹಾರುತ್ತಿದ್ದಾರೆ. ಉತ್ತರ ಕನ್ನಡದಲ್ಲಿ ತರಕಾರಿ ಬೆಳೆ ತುಂಬ ಕಡಿಮೆ. ಅದೂ ಒಂದು ಸೀಜನ್‌ಗೆ ಮಾತ್ರ ಕೆಲವೆಡೆ ಸೀಮಿತವಾಗಿ ಬೆಳೆಯಲಾಗುತ್ತದೆ. ಪುಟ 2

# ಮೂರೂವರೆ ವರ್ಷ ನಾನೇ ಸಿಎಂ

## ಸಿಎಂ ಹೇಳಿಕೆಯಿಂದ ಶುರುವಾಯ್ತು ಹೊಸ ಚರ್ಚೆ

**ಬೆಂಗಳೂರು:** ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಪ್ರಚಾರದ ಭರಾಟೆ ಜೋರಾಗಿರುವ ಹೊತ್ತಿನಲ್ಲೇ ಮತ್ತೆ ಮುಖ್ಯಮಂತ್ರಿ ಹುದ್ದೆ ಕುರಿತ ಚರ್ಚೆ ಮುನ್ನೆಲೆಗೆ ಬಂದಿದೆ. ಸಂಡೂರು ಉಪಚುನಾವಣೆ ಅಖಾಡದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ತುಕಾರಾಂ ಪರ ಗುರುವಾರ ಮತಯಾಚನೆ ಮಾಡಿದ ಸಿಎಂ ಸಿದ್ದರಾಮಯ್ಯ ಮುಂದಿನ ಮೂರುವರೆ ವರ್ಷ ಸಿಎಂ ಆಗಿ ಮುಂದುವರಿಯಲಿದ್ದೇನೆ ಎಂಬರ್ಥದಲ್ಲಿ ಹೇಳಿಕೆ ನೀಡಿದ್ದಾರೆ.



**ಸಿದ್ದರಾಮಯ್ಯ ಹೇಳಿದ್ದೇನು?:** ಸಂಡೂರಿನಲ್ಲಿ ಚುನಾವಣಾ ಪ್ರಚಾರ ಸಮಾವೇಶದಲ್ಲಿ ಮಾತನಾಡಿದ ಸಿದ್ದರಾಮಯ್ಯ, ಮುಂದಿನ ಮೂರುವರೆ ವರ್ಷ ಯಾರು ಅಧಿಕಾರದಲ್ಲಿರುವವರು ಎಂದು ಪ್ರಶ್ನಿಸುತ್ತಾರೆ. ಆಗ ಸಮಾವೇಶದಲ್ಲಿ ನೆರೆದಿದ್ದ ಜನರು, 'ಕಾಂಗ್ರೆಸ್' ಎಂದು ಘೋಷಣೆ ಕೂಗಿದ್ದಾರೆ. ಜನರ ಮಾತಿಗೆ ದನಿಗೂಡಿಸಿ ಮಾತನಾಡಿದ ಸಿಎಂ, 'ಸಿದ್ದರಾಮಯ್ಯ, ಕಾಂಗ್ರೆಸ್' ಎಂದು ಒತ್ತುಕೊಟ್ಟು ಹೇಳಿದ್ದಾರೆ. ಆ ಮೂಲಕ ಮೂರುವರೆ ವರ್ಷ ನಾನೇ ಸಿಎಂ ಎಂಬ ಸಂದೇಶ ಸಾರಿದ್ದಾರೆ.

**ದೇವೇಗೌಡರಿಂದ ತಿರುಗೇಟು:** ಸಿದ್ದರಾಮಯ್ಯ ಹೇಳಿಕೆಗೆ ಅತ್ತ ಚನ್ನಪಟ್ಟಣದಲ್ಲಿ ಪ್ರಚಾರ ನಿರತರಾಗಿರುವ ಜೆಡಿಎಸ್ ವರಿಷ್ಠ ಹೆಚ್?ಡಿ ದೇವೇಗೌಡ ಟಾಂಗ್ ಕೊಟ್ಟಿದ್ದಾರೆ. ಸಿದ್ದರಾಮಯ್ಯ ಹೇಳಿಕೆಗಳನ್ನು ಟಿವಿಗಳಲ್ಲಿ ನೋಡಿದೆ. ನಾನು ನಿನ್ನೆಯೂ ಮುಖ್ಯಮಂತ್ರಿ, ನಾಳೆಯೂ ಮುಖ್ಯಮಂತ್ರಿ, ಪುಟ 2

## ಸುಳ್ಳು ಮಾಹಿತಿ ಹರಡಿದ ಆರೋಪ

# ಸಂಸದ ತೇಜಸ್ವಿ ಸೂರ್ಯ ವಿರುದ್ಧ ಎಫ್‌ಐಆರ್!

**ಹಾವೇರಿ:** ರೈತರೊಬ್ಬರ ಆತ್ಮಹತ್ಯೆ ವಿಚಾರವಾಗಿ ಸುಳ್ಳು ಮಾಹಿತಿ ಹರಡಿದ ಆರೋಪದಲ್ಲಿ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ವಿರುದ್ಧ ಹಾವೇರಿಯ ಸಿಇಎನ್ ಠಾಣೆಯಲ್ಲಿ ಎಫ್ ಐಆರ್ ದಾಖಲಿಸಲಾಗಿದೆ. ವ್ಯಕ್ತಿಯೊಬ್ಬರು ನೀಡಿದ ದೂರಿನ ಆಧಾರದಲ್ಲಿ ಪೊಲೀಸರು ಎಫ್ ಐಆರ್ ದಾಖಲಿಸಿದ್ದಾರೆ. ಕರ್ನಾಟಕದಲ್ಲಿ ವಕ್ಫ್ ವಿವಾದ ತೀವ್ರಗೊಳ್ಳುತ್ತಿರುವ ಸಂದರ್ಭದಲ್ಲೇ, ಹಾವೇರಿಯಲ್ಲಿ ರೈತರೊಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದರು. ಅವರಿಗೆ ವಕ್ಫ್ ನೋಟಿಸ್ ಬಂದಿದ್ದೇ ಆತ್ಮಹತ್ಯೆಗೆ ಕಾರಣ ಎಂದು ತೇಜಸ್ವಿ ಸೂರ್ಯ ಟ್ವೀಟ್ ಮಾಡಿದ್ದರು.

ಹರನಗೇರಿ ರೈತ ರುದ್ರಪ್ಪ ಆತ್ಮಹತ್ಯೆ ಬಗ್ಗೆ ಟ್ವೀಟ್ ಮಾಡಿದ್ದ ತೇಜಸ್ವಿ ಸೂರ್ಯ, ವಕ್ಫ್ ನೋಟಿಸ್‌ಗೆ ಹೆದರಿ ರೈತ ಆತ್ಮಹತ್ಯೆ ಪುಟ 2



## ಹಿಂದೆ ಡಿ.ಕೆ ಸುರೇಶ್ ಅವರೂ ಕಣ್ಣೀರು ಹಾಕಿದ್ರು

# ನಾವು ಕೇಳಿದ್ವಾ?

**ಚನ್ನಪಟ್ಟಣ** ಚುನಾವಣಾ ಪ್ರಚಾರ ವೇಳೆ ನಾನು ಕಣ್ಣೀರು ಹಾಕಿರುವುದು ಉದ್ದೇಶಪೂರ್ವಕವಾಗಿ ಅಲ್ಲ, ನಾನಷ್ಟೇ ಅಲ್ಲ ಸಾಕಷ್ಟು ಜನ ಸಾರ್ವಜನಿಕ ವೇದಿಕೆಯಲ್ಲಿ ಕಣ್ಣೀರು ಹಾಕಿದ್ದಾರೆ. ಕೆಲ ಸನ್ನಿವೇಶಗಳು ಕಣ್ಣಲ್ಲಿ ನೀರು ತರಿಸುತ್ತೆ. ಕಳೆದ ಚುನಾವಣೆಯಲ್ಲಿ ಸಂಸದ ಡಿ.ಕೆ ಸುರೇಶ್ ಅವರೂ ಕಣ್ಣೀರು ಹಾಕಿದ್ದರು, ಅದನ್ನು ನಾವು ಪ್ರಶ್ನೆ ಮಾಡಿದ್ವಾ? ಎಂದು ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಕಾಂಗ್ರೆಸ್ ನಾಯಕರಿಗೆ ತಿರುಗೇಟು ನೀಡಿದರು.



ತಾಲೂಕಿನ ಹುಣಸನಹಳ್ಳಿಯಲ್ಲಿ ಗುರುವಾರ ಪ್ರಚಾರದ ವೇಳೆ ಸುದ್ದಿಗಾರರ ಜತೆ ಮಾತನಾಡಿ, ನಾನು ಕಣ್ಣೀರು ಹಾಕಿ ಮತ ಪಡೆಯಲು ಬಂದಿಲ್ಲ, ಅಭಿವೃದ್ಧಿಗಾಗಿ ಇಲ್ಲಿಗೆ ಬಂದಿದ್ದೇನೆ. ಯುವಕರಿಗೆ ಉದ್ಯೋಗ ಕೊಡಿಸುವ ಮತ್ತು ಚನ್ನಪಟ್ಟಣ ತಾಲೂಕಿನ ಕೆರೆ ತುಂಬಿಸುವ ದೊಡ್ಡ ಜವಾಬ್ದಾರಿ ಇದೆ. ಹೀಗಾಗಿ ನನಗೆ ಈ ಬಾರಿ ಅವಕಾಶ ಕೊಡಿ ಎಂದು ಕೇಳುತ್ತಿದ್ದೇನೆ ಎಂದರು. ಪುಟ 2

## ಮತದಾರರ ಮೇಲೆ ಪ್ರಭಾವ

# ಕೇಂದ್ರ ಸಚಿವ ನಡ್ಡಾ ವಿರುದ್ಧದ ಕೇಸು ವಜಾ

**ಬೆಂಗಳೂರು:** ಕಳೆದ ವಿಧಾನಸಭೆ ಚುನಾವಣೆ ವೇಳೆ ಮತದಾರರ ಮೇಲೆ ಪ್ರಭಾವ ಬೀರಿದ ಆರೋಪ ಸಂಬಂಧ ಹಾವೇರಿ ಜಿಲ್ಲೆಯ ಶಿಗ್ಗಾಂವಿ ಪೊಲೀಸ್ ಠಾಣೆಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಹಾಗೂ ಕೇಂದ್ರ ಸಚಿವ ಜೆ.ಪಿ. ನಡ್ಡಾ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ಗುರುವಾರ ರದ್ದುಪಡಿಸಿದೆ.



ಪ್ರಕರಣ ಸಂಬಂಧ ತಮ್ಮ ವಿರುದ್ಧದ ಎಫ್‌ಐಆರ್ ಮತ್ತು ಹಾವೇರಿ ಪ್ರಧಾನ ಸಿವಿಲ್ ನ್ಯಾಯಾಲಯದ ಮುಂದಿರುವ ವಿಚಾರಣೆ ಪ್ರಕ್ರಿಯೆ ರದ್ದುಪಡಿಸುವಂತೆ ಕೋರಿ ನಡ್ಡಾ ಸಲ್ಲಿಸಿದ್ದ ಅರ್ಜಿ ಪುರಸ್ಕರಿಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠ ಈ ಆದೇಶ ಮಾಡಿದೆ.

## ಜೆಸಿ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ

# ವಾಹನ ಸಂಚಾರ ನಿಷೇಧ

**ಬೆಂಗಳೂರು:** ಹಲಸೂರು ಗೇಟ್ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ಜೆಸಿ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ನಡೆಸಲು ಬಿಬಿಎಂಪಿ ಮುಂದಾಗಿದೆ. ನಾಲಾ ರಸ್ತೆ ಜಂಕ್ಷನ್‌ನಿಂದ ಪುರಭವನ ಜಂಕ್ಷನ್‌ವರೆಗೆ ವೈಟ್ ಟ್ಯಾಪಿಂಗ್ ಕಾಮಗಾರಿ ನಡೆಯಲಿದ್ದು, ಈ ಮಾರ್ಗದಲ್ಲಿ ವಾಹನ ಸಂಚಾರಕ್ಕೆ ಭಾಗಶಃ ನಿಷೇಧ ಹೇರಲಾಗಿದೆ. ಶುಕ್ರವಾರ ಬೆಳಗ್ಗೆ ಕಾಮಗಾರಿ ಶುರುವಾಗಲಿದ್ದು, ಕಾಮಗಾರಿ ಮುಕ್ತಾಯಾಗುವವರೆಗೂ ಮಾರ್ಗದಲ್ಲಿ ವಾಹನ ಸಂಚಾರ ನಿಧಾನಗತಿಯಲ್ಲಿ ಇರಲಿದೆ.

ಕಾಮಗಾರಿ ನಡೆಯುವ ಮಾರ್ಗದಲ್ಲಿ ಸಂಚಾರಕ್ಕೆ ನಿರ್ಬಂಧ ಹೇರಲಾಗುತ್ತಿದ್ದು, ಸಾರ್ವಜನಿಕರು ಸಹಕರಿಸುವಂತೆ ಸಂಚಾರ ಪೊಲೀಸರು, ಬಿಬಿಎಂಪಿ ಕಮಿಷನರ್ ತುಷಾರ್ ಗಿರಿನಾಥ್ ಮನವಿ ಮಾಡಿದ್ದಾರೆ.

**ಪರ್ಯಾಯ ಮಾರ್ಗ ಯಾವುದು?:** ವೈಟ್ ಟ್ಯಾಪಿಂಗ್ ಕಾಮಗಾರಿ ಹಿನ್ನೆಲೆ ಪರ್ಯಾಯ ಮಾರ್ಗ ಬಳಸುವಂತೆ ಸಂಚಾರಿ ಪೊಲೀಸರು ಸೂಚಿಸಿದ್ದಾರೆ. ಹೊಸೂರು ರಸ್ತೆಯಿಂದ ಜೆಸಿ ರಸ್ತೆ ಮೂಲಕ ಮೆಜೆಸ್ಟಿಕ್ ಹಾಗೂ



ಬೆಂಗಳೂರು ಉತ್ತರ ದಿಕ್ಕಿನ ಕಡೆಗೆ ಸಂಚರಿಸುತ್ತಿದ್ದ ವಾಹನಗಳು ಲಾಲ್‌ಬಾಗ್ ಮುಖ್ಯದ್ವಾರದ ಬಳಿ ಬಲಕ್ಕೆ ತಿರುವು ಪಡೆದು ಕೆ.ಎಚ್. ರಸ್ತೆ, ಶಾಂತಿನಗರ, ರಿಚ್ಮಂಡ್ ಆರ್.ಆರ್. ರಸ್ತೆಯ ಮೂಲಕ ಹಡ್ಸನ್ ವೃತ್ತ ತಲುಪಬಹುದಾಗಿದೆ. ಸೌತ್ ಎಂಡ್ ವೃತ್ತದಿಂದ ಜೆ.ಸಿ. ರಸ್ತೆಯ ಮೂಲಕ ಮೆಜೆಸ್ಟಿಕ್ ಹಾಗೂ ಬೆಂಗಳೂರು ಉತ್ತರ ದಿಕ್ಕಿನ ಕಡೆಗೆ ಸಂಚರಿಸುತ್ತಿದ್ದ ವಾಹನಗಳು, ಮಿನರ್ವ ವೃತ್ತದ ಬಳಿ ಎಡಕ್ಕೆ ತಿರುವು ಪಡೆದು ಲಾಲ್‌ಬಾಗ್ ಪೋರ್ಟ್ ರಸ್ತೆ ಹಾಗೂ ಪುಟ 2

## ಬೆಂಗಳೂರಿಗರೇ ಮಕ್ಕಳ ಕಳ್ಳರ ಬಗ್ಗೆ ಹುಷಾರ್!

# ಹಾಡಹಗಲೇ ಮಗು ಕಿಡ್ನ್ಯಾಪ್!

**ಬೆಂಗಳೂರು:** ಬೆಂಗಳೂರಿನಲ್ಲಿ ಮಕ್ಕಳ ಕಳ್ಳತನ ಪ್ರಕರಣಗಳು ಆಗಾಗ ಕೇಳಿ ಬರುತ್ತಲೇ ಇವೆ. ಇದೀಗ ಹಾಡಹಾಗಲೇ ಮನೆ ಮುಂದೆ ಆಟವಾಡುತ್ತಿದ್ದ ಎರಡೂವರೆ ವರ್ಷದ ಮಗವನ್ನು ಕಿಡ್ನ್ಯಾಪ್ ಮಾಡಿರುವ ಘಟನೆ ಮಲ್ಲೇಶ್ವರಂ ಪೈಪ್ ಲೈನ್ ಮಕ್ಕಳ ಮಾರಮ್ಮ ದೇವಸ್ಥಾನದ ಬಳಿ ನಿನ್ನೆ ಬೆಳಗ್ಗೆ 9.20ರ ಸುಮಾರಿಗೆ ನಡೆದಿದೆ. ಸದ್ಯ ಮಗುವನ್ನು ಪೊಲೀಸರು ರಕ್ಷಿಸಿ ಪೋಷಕರಿಗೆ ಒಪ್ಪಿಸಿದ್ದಾರೆ.

**ನಾಪತ್ತೆಯಾಗಿದ್ದ ಮಗು ಪತ್ತೆ!:** ನಾಪತ್ತೆಯಾಗಿದ್ದ ವೈಯ್ಯಾಲಿಕಾವಲ್ ಮಗು ದೇವಯ್ಯಪಾರ್ಕ್ ಬಳಿ ಮಗು ಪತ್ತೆಯಾಗಿದೆ. ಸದ್ಯ ಪೊಲೀಸರು ಮಗುವನ್ನ ರಕ್ಷಿಸಿ ಪೋಷಕರಿಗೆ ನೀಡಿದ್ದಾರೆ. ಮಗುವನ್ನ ಕರೆದೊಯ್ದಿದ್ದ ಸುಜಾತ ಎಂಬ ಮಹಿಳೆ ಮಾನಸಿಕ ಅಸ್ವಸ್ಥೆ ಎಂದು ಹೇಳಲಾಗ್ತಿದೆ. ಸದ್ಯ ಸುಜಾತಳನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.




**ಮನೆ ಮುಂದೆ ಆಟವಾಡುತ್ತಿದ್ದ ಮಗು ನಾಪತ್ತೆ!:** ದಿವ್ಯ ಭಾರತಿ ಹಾಗು ಲೋಕೇಶ್ ದಂಪತಿಯ ಪುತ್ರಿ ನವ್ಯ ಕಿಡ್ನ್ಯಾಪ್ ಆಗಿರುವ ಮಗು, ಮೊದಲ ಮಗುವನ್ನ ಶಾಲೆಗೆ ಕಳಿಸಲು ತಾಯಿ ರೆಡಿ ಮಾಡುತ್ತಿದ್ದಳು. ಈ ವೇಳೆ ಎರಡೂವರೆ ವರ್ಷದ ಮಗು ನವ್ಯ ಹೊರಗೆ ಆಟವಾಡ್ತಿದ್ದು ಮನೆ ಬಳಿ ಬಂದ ಅಪರಿಚಿತ ಮಹಿಳೆಯಿಂದ ಮಗು ಕಿಡ್ನ್ಯಾಪ್ ಆಗಿದೆ ಎಂದು ಹೇಳಲಾಗಿತ್ತು. ಪುಟ 2

## ಟ್ರಂಪ್‌ಗೆ ರಷ್ಯಾ ಅಧ್ಯಕ್ಷ ಪುಟಿನ್ ವಿಶ್

# ಮಾತುಕತೆಗೆ ಸಿದ್ಧ ಎಂದ ನಾಯಕರು

**ಮಾಸ್ಕೋ:** ಎರಡನೇ ಬಾರಿಗೆ ಅಮೆರಿಕದ ಶ್ವೇತಭವನದ ಗದ್ದುಗೆ ಏರಿದ ಡೊನಾಲ್ಡ್ ಟ್ರಂಪ್‌ಗೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಶುಭಾಶಯ ತಿಳಿಸಿದ್ದಾರೆ.



ಮಂಗಳವಾರದ ಅಧ್ಯಕ್ಷೀಯ ಚುನಾವಣೆಯಲ್ಲಿ ಡೆಮಾಕ್ರಟಿಕ್ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರನ್ನು ಟ್ರಂಪ್ ಸೋಲಿಸಿದ ನಂತರ ದಕ್ಷಿಣ ನಗರವಾದ ಸೋಚಿಯಲ್ಲಿ ವಾಲ್ಡೈ ಫೋರಂಗೆ ನೀಡಿದ ಹೇಳಿಕೆಯಲ್ಲಿ, ನಾನು ಅವರನ್ನು ಅಭಿನಂದಿಸುತ್ತೇನೆ ಎಂದು ಪುಟಿನ್ ಹೇಳಿದ್ದಾರೆ.

ಟ್ರಂಪ್ ಅವರೊಂದಿಗೆ ಮಾತುಕತೆ ನಡೆಸಲು ನೀವು ಮುಕ್ತರಾಗಿದ್ದೀರಾ ಎಂಬ ಪ್ರಶ್ನೆಗೆ, ರಷ್ಯಾದ ನಾಯಕ 'ಹೌದು, ನಾನು ಸಿದ್ಧ' ಎಂದು ಉತ್ತರಿಸಿದ್ದಾರೆ.

ಬುಧವಾರ ಬೆಳಗ್ಗೆಯಿಂದ ಬಹುಶಃ 70 ವಿಶ್ವ ನಾಯಕರೊಂದಿಗೆ ಮಾತನಾಡಿದ್ದೇನೆ. ಪುಟ 2

# ಮುಡಾ 50:50 ಅನುಪಾತ ರದ್ದು ಮಾಡಿ ಅಂತಾ ನಾನು ಹೇಳಲ್ಲ



**ಮೈಸೂರು:** ಮುಡಾ 50:50 ಅನುಪಾತ ರದ್ದು ಮಾಡಿ ಎಂದು ನಾನು ಹೇಳಲ್ಲ ಎಂದು ಮುಡಾ ಸಭೆಗೆ ಹೋಗುವ ಮುನ್ನ ಶಾಸಕ ಜಿ.ಟಿ ದೇವೇಗೌಡ ಅಚ್ಚರಿ ಹೇಳಿಕೆ ನೀಡಿದ್ದಾರೆ.

ಈ ಬಗ್ಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಡಾ 50:50 ಅನುಪಾತ ರದ್ದು ಮಾಡಿ ಎಂದು ನಾನು ಹೇಳಲ್ಲ. ಆದರೆ 50:50 ಅನುಪಾತದಲ್ಲಿ ಆಗಿರುವ ಅಕ್ರಮ ಸೈಟ್‌ಗಳನ್ನ ರದ್ದು ಮಾಡಬೇಕು. ಸರ್ಕಾರ ಅಕ್ರಮವಾಗಿ ಪಡೆದಿರುವ ನಿವೇಶನಗಳನ್ನ ವಾಪಸ್ ಪಡೆಯಲಿ ಎಂದು ಆಗ್ರಹಿಸಿದರು.

ಎಲ್ಲಾ ಜಿಲ್ಲೆಗಳಲ್ಲಿ ಕೂಡ 50:50 ಅನುಪಾತದಡಿ ಭೂಮಿ ಕೊಡಲಾಗುತ್ತಿದೆ. ಇಲ್ಲವಾದರೆ ನಾಲ್ಕು ಪಟ್ಟು ಭೂಮಿಯನ್ನು ಕೊಡಬೇಕಾಗುತ್ತದೆ. ಇದರಿಂದ ಪ್ರಾಧಿಕಾರಕ್ಕೆ ಹೆಚ್ಚು ನಷ್ಟ ಆಗುತ್ತದೆ. ಹೀಗಾಗಿ ಎಲ್ಲಾ ಪ್ರಾಧಿಕಾರಿಗಳಲ್ಲಿ 60:40 ಹಾಗೂ 50: 50 ಅನುಪಾತ ಇದೆ. ನಿಯಮಾನುಸಾರ 50:50 ಅನುಪಾದಡಿ ಅರ್ಹರಿಗೆ ನಿವೇಶನ ನೀಡಲಿ. ಕಾನೂನುಬಾಹಿರವಾಗಿ ನೀಡಿದ್ದರೆ ಅದನ್ನ ವಾಪಸ್ ಪಡೆದುಕೊಳ್ಳಲಿ ಎಂದು ಹೇಳಿದರು.

ಮುಡಾದಲ್ಲಿ ಕಳೆದ ಒಂದು ವರ್ಷದಿಂದ ಸಭೆ ನಡೆದಿರಲಿಲ್ಲ. ಹೀಗಾಗಿ ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದರು. ನನಗೆ ಮುಡಾ ಸಭೆ ನೋಟಿಸ್ ಬಂದಾಗ ಡಿಸಿ ಅವರನ್ನ ಕೇಳಿದ್ದೆ. ಕಳೆದ ಸಭೆಯಲ್ಲಿ ನಡೆಸಲಾಗಿರುವ ವಿಚಾರಗಳ ಬಗ್ಗೆ ಚರ್ಚೆ ಮಾಡಲಾಗುತ್ತದೆ. ಕೆಲವೊಂದು ವಿಷಯಗಳಿಗೆ ಸಭೆಯ ಅನುಮೋದನೆ ಬೇಕಾಗಿದೆ. ಈ ವಿಚಾರಗಳನ್ನಷ್ಟೇ ಚರ್ಚೆ ಮಾಡುತ್ತೇವೆ ಎಂದರು.

## ಗೃಹ ಸಚಿವ ಪರಮೇಶ್ವರ್ ಕ್ಷೇತ್ರದಲ್ಲಿ ಅಮಾನವೀಯ ಘಟನೆ



**ತುಮಕೂರು:** ಗೃಹ ಸಚಿವ ಜಿ ಪರಮೇಶ್ವರ ಅವರ ವಿಧಾನಸಭಾ ಕ್ಷೇತ್ರದಲ್ಲೇ ಬರಿಗೈಲಿ ಮಲ ಬಾಚುವ ಪದ್ಧತಿ ಜೀವಂತ ಇರುವುದು ಗೊತ್ತಾಗಿದೆ. ತುಮಕೂರಿನ ಕೊರಟಗೆರೆ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಶೌಚಾಲಯದ ಪಿಟ್‌ನಿಂದ ಹೊರಬಂದಿದ್ದ ಮಲವನ್ನು ಬಾಚಿ ಎತ್ತಿಹಾಕಲು ಹಿಂದುಳಿದ ಸಮುದಾಯದವರ ಬಳಕೆ ಮಾಡಲಾಗಿದೆ. ಬರಿಗೈಯಲ್ಲಿ ಗುದ್ದಲಿ ಹಿಡಿದು ಮಲ ಸ್ವಚ್ಛಗೊಳಿಸುತ್ತಿದ್ದ ಬಾಲಕ ಹಾಗೂ ವ್ಯಕ್ತಿ ಬಳಿ ಆ ಬಗ್ಗೆ ಪ್ರಶ್ನಿಸುತ್ತಿದ್ದಂತೆಯೇ ಕೆಲಸ ಸ್ಥಗಿತಗೊಳಿಸುವಂತೆ ಅಧಿಕಾರಿ, ಸಿಬ್ಬಂದಿ ಸನ್ನೆ ಮೂಲಕ ತಿಳಿಸಿದ್ದಾರೆ. ಕೂಡಲೇ ಕೆಲಸ ಬಿಟ್ಟು ಬಾಲಕ ಹಾಗೂ ವ್ಯಕ್ತಿ ತೆರಳಿದ್ದಾರೆ. ಮಾಧ್ಯಮದವರ ಜೊತೆ ಮಾತನಾಡದಂತೆ ಬಾಲಕನಿಗೆ ಸಿಬ್ಬಂದಿ ಸನ್ನೆ ಮಾಡುತ್ತಿದ್ದರು.

» **ಬರಿಗೈಲಿ ಮಲ ಬಾಚುವ ಪದ್ಧತಿ ಜೀವಂತ**

ಬಸ್ ನಿಲ್ದಾಣದ ಆವರಣದಲ್ಲಿರುವ ಪ್ರಯಾಣಿಕರ ಶೌಚಾಲಯದ ಪಿಟ್ ತುಂಬಿ ಫ್ಲಾಟ್ ಫಾರಂಗೆ ಹರಿದಿತ್ತು. ಪ್ರಯಾಣಿಕರು ದುರ್ನಾತದಲ್ಲೇ ಮೂಗು ಮುಚ್ಚಿಕೊಂಡು ಓಡಾಡುತ್ತಿದ್ದ ಪರಿಸ್ಥಿತಿ ನಿರ್ಮಾಣವಾಗಿತ್ತು. ಹೀಗಾಗಿ ನಿಲ್ದಾಣದ ಫ್ಲಾಟ್ ಫಾರಂಗೆ ಹರಿಯುತ್ತಿದ್ದ ಮಲ ಸ್ವಚ್ಛಗೊಳಿಸಲು ಬಾಲಕನ ಬಳಸಲಾಗಿದೆ. ಆ ಮೂಲಕ ಮಲ ಹೊರುವ ಪದ್ಧತಿ ನಿಷೇಧ ಹಾಗೂ ಬಾಲ ಕಾರ್ಮಿಕ ಪದ್ಧತಿ ನಿಷೇದ ಕಾನೂನು ಉಲ್ಲಂಘನೆಯಾಗಿದೆ.

## ಕೊಲೆ ಆರೋಪಿ ಪವಿತ್ರಾಗೌಡಗೆ ಜೈಲೇ ಗತಿ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎ1 ಆರೋಪಿ ಪವಿತ್ರಾಗೌಡ ಸೇರಿದಂತೆ ಐವರ ಜಾಮೀನು ಅರ್ಜಿ ವಿಚಾರಣೆಯನ್ನು ನ.21 ಕ್ಕೆ ಹೈಕೋರ್ಟ್ ಮುಂದೂಡಿದೆ. ಪವಿತ್ರಾಗೌಡ, ನಾಗರಾಜ್, ಲಕ್ಷ್ಮಣ್, ಅನುಕುಮಾರ್ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಕೋರ್ಟ್‌ಗೆ ಆಗಮಿಸಿದ್ದ ಪವಿತ್ರಾಗೌಡ ತಾಯಿ, ಮಗಳಿಗೆ ಜಾಮೀನು ಸಿಗದ ಹಿನ್ನಲೆಯಲ್ಲಿ ಬೇಸರದಿಂದಲೇ ಹೊರನಡೆದರು. ಕೊಲೆ ಪ್ರಕರಣದಲ್ಲಿ ಎ2 ಆರೋಪಿ ದರ್ಶನ್ ಜಾಮೀನು ಅರ್ಜಿಯೂ 21 ಕ್ಕೆ ವಿಚಾರಣೆಯಲ್ಲಿದೆ. ಸದ್ಯ ಮಧ್ಯಂತರ ಜಾಮೀನು ಪಡೆದು ದರ್ಶನ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದರ್ಶನ್ ಜಾಮೀನು ಅರ್ಜಿ ವಿಚಾರಣೆಗೆ ಎಸ್‌ಪಿಪಿ ಪ್ರಸನ್ನಕುಮಾರ್ ಮನವಿ ಮಾಡಿದರು. ಕೋರ್ಟ್ ನ.21 ರಂದು ಪವಿತ್ರಗೌಡ, ದರ್ಶನ್, ಅನುಕುಮಾರ್, ಲಕ್ಷ್ಮಣ್, ನಾಗರಾಜ್ ಜಾಮೀನು ಅರ್ಜಿ ವಿಚಾರಣೆಗೆ ನಿಗದಿಪಡಿಸಿದೆ.

## ಎಸ್‌ಡಿಎ ರುದ್ರಣ್ಣ ಆತ್ಮಹತ್ಯೆ ಕೇಸ್ ಸಿಬಿಐಗೆ ವಹಿಸಬೇಕು




**ಬೆಳಗಾವಿ:** ಎಸ್‌ಡಿಎ ರುದ್ರಣ್ಣ ಯಡವಣ್ಣವರ್ ಆತ್ಮಹತ್ಯೆ ಪ್ರಕರಣದ ತನಿಖೆಯನ್ನು ಸಿಬಿಐಗೆ ನೀಡಬೇಕೆಂದು ವಿಧಾನಸಭೆಯ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ್ ಆಗ್ರಹಿಸಿದ್ದಾರೆ.

ಲಕ್ಷ್ಮಿ ಹೆಬ್ಬಾಳ್ಕರ್ ತನ್ನ ಪಿಎಗಳನ್ನು ಬಳಸಿ ಮಾಡುತ್ತಿರುವ ಅನ್ಯಾಯ ನೋಡಲಾಗದೇ ರುದ್ರಣ್ಣ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬೆಳಗಾವಿ ಗ್ರಾಮೀಣದಲ್ಲಿ ಜನ ಹೆಚ್ಚಿನ ಲೀಡ್ ನೀಡಿದ್ದರು. ಹೆಬ್ಬಾಳ್ಕರ್ ಬಂದ ಮೇಲೆ ಭ್ರಷ್ಟಾಚಾರ ಹೆಚ್ಚಾಗಿದೆ. ಅಮಾಯಕ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಪ್ರಕರಣ ಸಂಬಂಧ ಇಲ್ಲಿಯವರೆಗೆ ಯಾವುದೇ ಬಂಧನ ಆಗಿಲ್ಲ. ತಹಶೀಲ್ದಾರ್ ಕಚೇರಿ ಸಿಸಿಟಿವಿಯನ್ನು ವಶಕ್ಕೆ ಪಡೆದುಕೊಂಡಿಲ್ಲ. ಸಾಕ್ಷಿ ನಾಶದ ಅನುಮಾನ ವ್ಯಕ್ತವಾಗಿದೆ ಎಂದು ದೂರಿದರು.

ಸಾಕ್ಷಿ ನಾಶ ಮಾಡುವ ಬಗ್ಗೆ ಜನರಿಗೆ ಸಂಶಯವಿದೆ. ಪೊಲೀಸ್ ಇಲಾಖೆ ತನ್ನ ಕೆಲಸವನ್ನು ಸರಿಯಾಗಿ ಮಾಡುತ್ತಿಲ್ಲ. ಸಿಎಂ ಹಾಗೂ ಸಚಿವರ ಒತ್ತಡಕ್ಕೆ ಪೊಲೀಸ್ ಅಧಿಕಾರಿಗಳು ಮಣಿದಿದ್ದಾರೆ. ಪಿಎ ಮಾಡಿರುವ ಕೆಲಸಕ್ಕೆ ಸಚಿವರೇ ಹೊಣೆ ಹೊರಬೇಕು.ಪೊಲೀಸ್ ತನಿಖೆ ಮೇಲೆ ನಮಗೆ ನಂಬಿಕೆ ಇಲ್ಲ. ಸಿಬಿಐಗೆ ಪ್ರಕರಣದ ತನಿಖೆ ವಹಿಸಬೇಕು ಎಂದು ಬೆಲ್ಲದ್ ಆಗ್ರಹಿಸಿದರು.

ರಾಜ್ಯ ಸರ್ಕಾರದ 16 ತಿಂಗಳಲ್ಲಿ ದಿನಕ್ಕೆ ಒಂದೊಂದು ಹಗರಣ ಹೊರಗೆ ಬರುತ್ತಿವೆ. ಭ್ರಷ್ಟಾಚಾರ ಅಂದರೆ ಕಾಂಗ್ರೆಸ್ ಎನ್ನುವಂತೆ ರಾಜ್ಯದಲ್ಲಿ ಆಗಿದೆ. ಯಾವುದೇ ಹಗರಣ ಬಂದರೂ ಅದರಲ್ಲಿ ಹೆಬ್ಬಾಳ್ಕರ್ ಹೆಸರು ಕೇಳಿ ಬರುತ್ತಿದೆ. ವಾಲ್ಮೀಕಿ ಹಗರಣ ಬಗ್ಗೆ ಸತೀಶ್ ಜಾರಕಿಹೊಳಿ ಚಕಾರ ಎತ್ತಿಲ್ಲ. ಮುಡಾ, ವಕ್ಫ್ ಇಲಾಖೆಯಲ್ಲಿ ಹಗರಣ ಮಾಡಿದ್ದಾರೆ. ಪ್ರವಾಸೋದ್ಯಮ, ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದರು.

## ವಿಶೇಷ ಸ್ಥಾನಮಾನ ನಿರ್ಣಯ ಕುರಿತು ಮೂರನೇ ದಿನವೂ ವಿಧಾನಸಭೆಯಲ್ಲಿ ಗದ್ದಲ

**ಜಮ್ಮು-ಕಾಶ್ಮೀರ:** ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯಲ್ಲಿ 370 ನೇ ವಿಧಿ ರದ್ದು ಮತ್ತು ಪ್ರತಿಪಕ್ಷಗಳ ಮರುಸ್ಥಾಪನೆಯ ನಿರ್ಣಯದ ಕುರಿತು ಮೂರನೇ ದಿನವೂ ಗದ್ದಲ ಮುಂದುವರೆದಿದೆ. ಬಿಜೆಪಿ, ಪಿಸಿ, ಪಿಡಿಪಿ ಮತ್ತು ಎಐಪಿಯ ವಿರೋಧ ಪಕ್ಷದ ಶಾಸಕರು ಗುರುವಾರ ಪಿಡಿಪಿ, ಸಜಾದ್ ಲೋನ್ ಮತ್ತು ಖುರ್ಷೀದ್ ಶೇಖ್ ಮಂಡಿಸಿದ ಆರ್ಟಿಕಲ್ 370 ರದ್ದತಿ ಮತ್ತು ಮರುಸ್ಥಾಪನೆಯ ನಿರ್ಣಯದ ಬಗ್ಗೆ ಗದ್ದಲವನ್ನು ಸೃಷ್ಟಿಸಿದರು ಮತ್ತು ಪರಸ್ಪರರ ವಿರುದ್ಧ ಕೂಗಲು ಪ್ರಾರಂಭಿಸಿದರು.

ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯಲ್ಲಿ 370 ನೇ ವಿಧಿ ರದ್ದು ಮತ್ತು ಪ್ರತಿಪಕ್ಷಗಳ ಮರುಸ್ಥಾಪನೆಯ ನಿರ್ಣಯದ ಕುರಿತು ಮೂರನೇ ದಿನವೂ ಗದ್ದಲ ಮುಂದುವರೆದಿದೆ. ಬಿಜೆಪಿ, ಪಿಸಿ, ಪಿಡಿಪಿ ಮತ್ತು ಎಐಪಿಯ ವಿರೋಧ ಪಕ್ಷದ ಶಾಸಕರು ಗುರುವಾರ ಪಿಡಿಪಿ, ಸಜಾದ್ ಲೋನ್ ಮತ್ತು ಖುರ್ಷೀದ್ ಶೇಖ್ ಮಂಡಿಸಿದ ಆರ್ಟಿಕಲ್ 370 ರದ್ದತಿ ಮತ್ತು ಮರುಸ್ಥಾಪನೆಯ ನಿರ್ಣಯದ ಬಗ್ಗೆ ಗದ್ದಲವನ್ನು ಸೃಷ್ಟಿಸಿದರು ಮತ್ತು ಪರಸ್ಪರರ ವಿರುದ್ಧ ಕೂಗಲು ಪ್ರಾರಂಭಿಸಿದರು.

ಅವಾಮಿ ಇತ್ತೆಹಾದ್ ಪಕ್ಷದ ಶಾಸಕ ಖುರ್ಷಿದ್ ಅಹ್ಮದ್ ಶೇಖ್ ಅವರನ್ನು ಮಾರ್ಷಲ್‌ಗಳು ಸದನದಿಂದ ಹೊರಗೆ ಕರೆದೊಯ್ದರು. ವಿಧಾನಸಭೆಯಲ್ಲಿ ಪಿಡಿಪಿ ವಿರುದ್ಧ ಘೋಷಣೆಗಳು ಮೊಳಗಿದವು. ಮೊನ್ನೆ ಗುರುವಾರವೂ ವಿಧಾನಸಭೆಯಲ್ಲಿ ಗದ್ದಲ ಎದ್ದಿತ್ತು. ಶಾಸಕರ ನಡುವೆ ಮಾತಿನ ಚಕಮಕಿ ನಡೆಯಿತು.



## ಇನ್ಶ್ಯೂರೆನ್ಸ್ ಹಣಕ್ಕಾಗಿ ಸಂಬಂಧಿಯ ಹತ್ಯೆ 24 ಗಂಟೆಯಲ್ಲೇ ಆರೋಪಿಗಳು ಅಂದರ್



**ದಾವಣಗೆರೆ:** ಇನ್ಶ್ಯೂರೆನ್ಸ್ ಹಣಕ್ಕಾಗಿ ಸಂಬಂಧಿಯನ್ನೇ ಹತ್ಯೆಗೈದಿದ್ದ ನಾಲ್ವರು ಆರೋಪಿಗಳನ್ನು ಪ್ರಕರಣ ನಡೆದ 24 ಗಂಟೆಗಳಲ್ಲೇ ದಾವಣಗೆರೆಯ ಅಜಾದ್ ನಗರ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಬಂಬೂಬಜಾರ್‌ನ ಗಣೇಶ್ (24), ಹರಳಯ್ಯ ನಗರದ ಅನಿಲ್ (18) ಹಳೆ ಚಿಕ್ಕನಹಳ್ಳಿಯ ಶಿವಕುಮಾರ್ (25) ಮತ್ತು ಭಾರತ್ ಕಾಲೋನಿಯ ಮಾರುತಿ (24) ಎಂದು ಗುರುತಿಸಲಾಗಿದೆ. ಆರೋಪಿಗಳು ದಾವಣಗೆರೆ ಜಿಲ್ಲೆಯ ಇಮಾಂ ನಗರದ ಹಣ್ಣಿನ ವ್ಯಾಪಾರಿ ದುಗ್ಗೇಶಿ ಎಂಬಾತನನ್ನು ಕೊಲೆಗೈದಿದ್ದರು.

ಕೊಲೆಯಾದ ದುಗ್ಗೇಶಿ ಹಾಗೂ ಆರೋಪಿ ಗಣೇಶ್ ಇಬ್ಬರೂ ಸಂಬಂಧಿಕರು. ದುಗ್ಗೇಶಿಯ ಮೇಲೆ ಗಣೇಶ್ ಫೆಬ್ರವರಿಯಲ್ಲಿ 40 ಲಕ್ಷ ರೂ. ಇನ್ಶ್ಯೂರೆನ್ಸ್ ಮಾಡಿಸಿದ್ದ. ಇನ್ನೂ ಜನವರಿ ತಿಂಗಳಲ್ಲಿ ಪ್ರೀಮಿಯಂ ಹಣ ಕಟ್ಟಬೇಕಾಗಿದ್ದರಿಂದ ಮೊದಲೇ ಕೊಲೆಗೆ ಸಂಚು ನಡೆಸಿದ್ದ ಗಣೇಶ್, ದುಗ್ಗೇಶಿ ಹಾಗೂ ಆತನ ತಾಯಿಯ ಸಹಿ ಇರುವ ಚೆಕ್ ಮತ್ತು ಬಾಂಡ್‌ಗಳನ್ನು ಆತನ ಬಳಿಯೇ ಇಟ್ಟುಕೊಂಡಿದ್ದ ಎಂದು ತನಿಖೆ ವೇಳೆ ತಿಳಿದುಬಂದಿದೆ.

ಆರೋಪಿಗಳು ಮಂಗಳವಾರ ದುಗ್ಗೇಶಿಯನ್ನು ಬಸಾಪುರಕ್ಕೆ ಕರೆದುಕೊಂಡು ಹೋಗಿ ಕತ್ತು ಹಿಸುಕಿ ಕೊಲೆ ಮಾಡಿದ್ದರು. ಬಳಿಕ ಅನಾರೋಗ್ಯದಿಂದ ಕುಸಿದು ಬಿದ್ದು ಸಾವನ್ನಪ್ಪಿದ್ದಾನೆ ಎಂದು ಕತೆ ಕಟ್ಟಿದ್ದರು. ಸಾವಿನ ಬಗ್ಗೆ ಕುಟುಂಬಸ್ಥರು ಅನುಮಾನ ವ್ಯಕ್ತಪಡಿಸಿ, ದೂರು ದಾಖಲಿಸಿದ್ದರು. ಪೊಲೀಸರು ತನಿಖೆ ನಡೆಸಿದ ವೇಳೆ ಪ್ರಕರಣ ಬೆಳಕಿಗೆ ಬಂದಿದೆ.

## ಎಟಿಎಂ, ಬ್ಯಾಂಕ್‌ಗಳಿಗೆ ಭದ್ರತಾ ಸಿಬ್ಬಂದಿ ನೇಮಕಕ್ಕೆ ಎಸ್‌ಪಿ ಸೂಚನೆ

**ಶಿವಮೊಗ್ಗ:** ಇತ್ತೀಚೆಗೆ ಹೊನ್ನಾಳ್ಳಿಯಲ್ಲಿ ನಡೆದಿದ್ದ ಬ್ಯಾಂಕ್ ಕಳ್ಳತನದ ಬಳಿಕ ಪೊಲೀಸ್ ಇಲಾಖೆ ಎಚ್ಚೆತ್ತಿದೆ. ಬ್ಯಾಂಕ್ ಹಾಗೂ ಎಟಿಎಂಗಳಿಗೆ ಸಿಸಿ ಕ್ಯಾಮೆರಾ ಅಳವಡಿಸಿ, ನುರಿತ ಭದ್ರತಾ ಸಿಬ್ಬಂದಿಯನ್ನು ನೇಮಿಸುವಂತೆ ಎಸ್‌ಪಿ ಮಿಥುನ್ ಕುಮಾರ್ ಸೂಚನೆ ನೀಡಿದ್ದಾರೆ.



ಶಿವಮೊಗ್ಗದ ಡಿಎಆರ್ ಸಭಾಂಗಣದಲ್ಲಿ 90ಕ್ಕೂ ಹೆಚ್ಚು ಬ್ಯಾಂಕ್‌ಗಳ ಅಧಿಕಾರಿಗಳೊಂದಿಗೆ ಅವರು ಸಭೆ ನಡೆಸಿದರು. ಈ ವೇಳೆ ನ್ಯಾಮತಿಯಲ್ಲಿ ಇತ್ತೀಚೆಗೆ ಬ್ಯಾಂಕ್ ಲೂಟಿಯಾದ ಉದಾಹರಣೆ ನೀಡಿ, ಭದ್ರತಾ ವ್ಯವಸ್ಥೆ ಇಲ್ಲದ ಬ್ಯಾಂಕ್‌ನಲ್ಲಿ ಕಳುವಾಗಿದೆ. ಅದಕ್ಕಾಗಿ ಬ್ಯಾಂಕ್ ಹಾಗೂ ಎಟಿಎಂ ಬಳಿ ಭದ್ರತಾ ಸಿಬ್ಬಂದಿ ನೇಮಿಸಿಕೊಳ್ಳಬೇಕು. ಬ್ಯಾಂಕ್ ಮತ್ತು ಎಟಿಎಂಗೆ ಸಿಸಿಟಿವಿ ಅಳವಡಿಕೆಗೆ ಹಣ ಬರುವುದಿಲ್ಲ ಎಂದರೆ ಅದಕ್ಕೆ ಪೊಲೀಸ್ ಇಲಾಖೆ ಜವಬ್ದಾರಿಯಲ್ಲ ಎಂದು ಎಚ್ಚರಿಸಿದರು.

ಹೆಚ್ಚುವರಿ ಎಸ್‌ಪಿ ಅನಿಲ್ ಕುಮಾರ್ ಭೂಮರೆಡ್ಡಿ ಮಾತನಾಡಿ, ಎಟಿಎಂ ಲೂಟಿಗಳಲ್ಲಿ ಸುರಕ್ಷತೆಯ ಕೊರತೆಗಳು ಎದ್ದು ಕಾಣುತ್ತಿದೆ. ವಿನೋಬ ನಗರದಲ್ಲಿ ಎಟಿಎಂನ್ನು ಜೆಸಿಬಿ ಮೂಲಕ ಲೂಟಿ ಮಾಡಲು ಯತ್ನಿಸಿದ ಪ್ರಕರಣ ಇತ್ತೀಚಿಗೆ ನಡೆದಿತ್ತು. ಅಲ್ಲದೇ ಬ್ಯಾಂಕ್ ನಲ್ಲಿಯೇ ಕಳ್ಳತನ ನಡೆದಿತ್ತು. ಕೆಲ ಬ್ಯಾಂಕ್‌ನವರಿಗೆ ನಮ್ಮ ಬ್ಯಾಂಕ್‌ನಲ್ಲಿ ಇದುವರೆಗೂ ಕಳುವಾಗಿಲ್ಲ ಎಂಬ ಭಾವನೆ ಇದೆ. ಈ ವಿಚಾರದಲ್ಲಿ ನಿರ್ಲಕ್ಷ್ಯ ಮಾಡದೇ ಅರ್ಹ ಭದ್ರತಾ ಸಿಬ್ಬಂದಿಯನ್ನು ನೇಮಿಸಬೇಕು ಎಂದು ತಿಳಿಸಿದ್ದಾರೆ.

ರಜಾದಿನಗಳಲ್ಲಿ ಕೆಲವು ಬ್ಯಾಂಕ್‌ಗಳಲ್ಲಿ ಕಳ್ಳತನ ನಡೆದಿದೆ. ರಜೆ ಇರುವ ಸಂದರ್ಭದಲ್ಲಿ ಸಿಸಿ ಟಿವಿಯನ್ನ ಗಂಟೆಗೆ ಒಮ್ಮೆ ತಪಾಸಣೆ ಮಾಡಿಕೊಳ್ಳುವ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

## ಶಹೀದ್ ಫೈಸಲ್

ಬಾಂಬ್ ಇಟ್ಟಿದ್ದ. 90 ನಿಮಿಷಕ್ಕೆ ಟೈಮರ್ ಸೆಟ್ ಮಾಡಿದ್ದ. ಬಾಂಬ್ ಬ್ಲಾಸ್ಟ್ ಆಗಲಿಲ್ಲ. ಬಾಂಬ್ ಇಟ್ಟವನೇ ಚೆನ್ನೈಗೆ ಎಸ್ಕೇಪ್ ಆಗಿದ್ದ. ಬಾಂಬ್ ಸ್ಫೋಟವಾಗುವುದಿರಲಿ, ಕನಿಷ್ಠಪಕ್ಷ ಆ ಬಾಂಬ್ ಪತ್ತೆಯೂ ಆಗಲಿಲ್ಲ.

**ಒಂದೇ ವಾರದಲ್ಲಿ ಬಾಂಬ್ ತಯಾರಿಸಿ ರಾಮೇಶ್ವರಂ ಬ್ಲಾಸ್ಟ್:** ಬೆಂಗಳೂರಿನ ಮಲ್ಲೇಶ್ವರ ಬಿಜೆಪಿ ಕಚೇರಿಯಲ್ಲಿ ಹಿಂಭಾಗ ಇಟ್ಟಿದ್ದ ಬಾಂಬ್ ಸ್ಫೋಟಗೊಳ್ಳದ ಹಿನ್ನೆಲೆ ಮತ್ತೆ ಜನನಿಬಿಡ ಪ್ರದೇಶದಲ್ಲಿ ಬಾಂಬ್ ಸ್ಫೋಟಕ್ಕೆ ಪ್ಲಾನ್ ಮಾಡಿದ್ದ. ಅಂತಿಮವಾಗಿ ಫೆಬ್ರವರಿ ತಿಂಗಳಲ್ಲಿ ಐಇಡಿ ಬಾಂಬ್ ತಯಾರಿಸಿ, ಫೆಬ್ರವರಿ 29ರಂದು ಶಾಜಿಬ್ ಚೆನ್ನೈನಿಂದ ಬೆಂಗಳೂರಿಗೆ ಬಂದು ಕೆಆರ್ ಪುರಂ ಟಿನ್ ಫ್ಯಾಕ್ಟರಿ ಬಳಿ ಇಳಿದು, ಕುಂದಲಹಳ್ಳಿಗೆ ಬಂದು ರಾಮೇಶ್ವರಂ ಕೆಫೆಯಲ್ಲಿ ಐಇಡಿ ಬಾಂಬ್ ಇಟ್ಟಿದ್ದರ ಬಗ್ಗೆ ಎನ್‌ಐಎ ಎಳೆ ಎಳೆಯಾಗಿ ಚಾರ್ಜ್‌ಶೀಟ್ ನಲ್ಲಿ ಬಿಚ್ಚಿಟ್ಟಿದೆ.

## ಈರುಳ್ಳಿ ದರ ಶೀಘ್ರ 100ಕ್ಕೇರಿಕೆ?

ಜಿಲ್ಲೆಗೆ ಬೆಳಗಾವಿ, ಹಾವೇರಿ, ಧಾರವಾಡ, ಗದಗ ಮತ್ತಿತರ ಜಿಲ್ಲೆಗಳಿಂದ ತರಕಾರಿ ಬರುತ್ತಿದೆ. ಈ ಬಾರಿ ತರಕಾರಿ ಬೆಳೆಯುವಲ್ಲಿ ಭಾರಿ ಮಳೆ. ಈಗಲೂ ಮಳೆ ಮುಂದುವರಿದಿದೆ. ಕಾಯಿಪಲ್ಲೆಗಳು ಮಳೆಗೆ ಸಿಲುಕಿ ಕೊಳೆತುಹೋಗುತ್ತಿವೆ. ಬೇಡಿಕೆ ಇರುವಷ್ಟು ತರಕಾರಿಗಳು ಲಭ್ಯವಿಲ್ಲ. ಹೀಗಾಗಿ ಧಾರಣೆ ವಾರದಿಂದ ವಾರಕ್ಕೆ ಏರುತ್ತಿದೆ.

ದೀಪಾವಳಿ ಹಬ್ಬದಲ್ಲಿ ತರಕಾರಿಗೆ ಬೇಡಿಕೆ ಹೆಚ್ಚು. ಆದರೆ ಇಳುವರಿ ಕಡಿಮೆ. ಮಾರುಕಟ್ಟೆಗೆ ಬಂದ ಗ್ರಾಹಕರು ದರ ಕೇಳಿ ಕಂಗಾಲಾಗಿದ್ದಾರೆ. ಕೆಜಿಯೊಂದಕ್ಕೆ 30, 40ಕ್ಕೆ ಮಾರಾಟವಾಗುತ್ತಿದ್ದ ಕಾಯಿಪಲ್ಲೆಗಳ ದರ 80 ಗಳಿಗೇರಿದೆ. ತಿಂಗಳ ಹಿಂದಿನ ದರಕ್ಕೆ ಹೋಲಿಸಿದರೆ ಡಬಲ್ ಆಗಿದೆ. ನಿಂಬೆಹಣ್ಣಿನ ದರವೂ ಭಾರಿ ಏರಿಕೆಯಾಗಿದೆ. ಒಂದು ಲಿಂಬು 5ಕ್ಕೆ ಒಂದರಂತೆ ಮಾರಾಟವಾಗುತ್ತಿದೆ. ಬೆಳೆಯೇ ಇಲ್ಲ. ಬೆಳೆಗಾರರ ಸಂಖ್ಯೆಯೂ ಕಡಿಮೆಯಾಗುತ್ತಿದೆ. ದರ ಹೆಚ್ಚಳವಾಗದೆ ಮತ್ತೇನು ಎಂದು ಮಾರಾಟಗಾರರು ಹೇಳುತ್ತಿದ್ದಾರೆ.

## ಮೂರೂವರೆ ವರ್ಷ ನಾನೇ ಸಿಎಂ

ನಾಡಿದ್ದೂ ಮುಖ್ಯಮಂತ್ರಿ ಎನ್ನುತ್ತಾರೆ. ಎಂಥಾ ಮಹಾನುಭಾವ ಎಂದು ದೇವೇಗೌಡರು ವ್ಯಂಗ್ಯವಾಡಿದ್ದಾರೆ.

**ಮುಗಿಯದ ಸಿಎಂ ಹುದ್ದೆ ಬದಲಾವಣೆ ಚರ್ಚೆ:** ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ 136 ಶಾಸಕರ ಬಲದೊಂದಿಗೆ ಅಧಿಕಾರಕ್ಕೆ ಬಂದಾಗ ಮುಖ್ಯಮಂತ್ರಿ ಯಾರಾಗುತ್ತಾರೆ ಎಂಬ ವಿಚಾರ ಬಹಳಷ್ಟು ಚರ್ಚೆಗೆ ಗ್ರಾಸವಾಗಿತ್ತು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಮಧ್ಯೆ ಪೈಪೋಟಿ ಏರ್ಪಟ್ಟಿತ್ತು. ನಂತರ ಸಿದ್ದರಾಮಯ್ಯ ಸಿಎಂ ಆದರೂ ಎರಡೂವರೆ ವರ್ಷದ ನಂತರ ಅಧಿಕಾರ ಬಿಟ್ಟುಕೊಡಲಿದ್ದಾರೆ ಎಂಬ ವದಂತಿ ಇತ್ತು. ಆದರೆ, ಆ ಬಗ್ಗೆ ಕಾಂಗ್ರೆಸ್ ಪಕ್ಷ ಅಧಿಕೃತ ಮಾಹಿತಿಯನ್ನಂತೂ ನೀಡಿಲ್ಲ. ಆದರೆ, ನಂತರದ ಅನೇಕ ದಿನಗಳಲ್ಲಿ ಸಿಎಂ ಹುದ್ದೆ ವಿಚಾರವಾಗಿ ಬಹಳಷ್ಟು ಮಾತುಗಳು ಕಾಂಗ್ರೆಸ್ ವಲಯದಲ್ಲಿ ಕೇಳಿಬಂದಿದ್ದವು.

ಡಿಸಿಎಂ ಡಿಕೆ ಶಿವಕುಮಾರ್ ಮುಂದೊಂದು ದಿನ ಸಿಎಂ ಆಗಲಿ, ಸ್ಥಾನ ಬಿಟ್ಟುಕೊಡಿ ಎಂದು ಸ್ವಾಮೀಜಿಯೊಬ್ಬರು ಬಹಿರಂಗ ವೇದಿಕೆಯಲ್ಲಿ ಹೇಳಿದ್ದು ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಬಳಿಕ ದಲಿತ ಸಿಎಂ ಕೂಗು ಸಹ ಕೇಳಿಬಂದಿತ್ತು. ನಂತರ ಹೈಕಮಾಂಡ್ ಮಧ್ಯಪ್ರವೇಶಿಸಿ ರಾಜ್ಯ ಕಾಂಗ್ರೆಸ್ ನಾಯಕರ ಹೇಳಿಕೆಗಳಿಗೆ ಕಡಿವಾಣ ಹಾಕಿತ್ತು. ಇದೀಗ ಸಿಎಂ ಸಿದ್ದರಾಮಯ್ಯ ಮುಂದಿನ ಮೂರುವರೆ ವರ್ಷ ಸಿದ್ದರಾಮಯ್ಯ, ಕಾಂಗ್ರೆಸ್ಸೇ ಅಧಿಕಾರದಲ್ಲಿರಲಿದೆ ಎಂಬ ಹೇಳಿಕೆ ನೀಡಿ ಮತ್ತೆ ಚರ್ಚೆ ಹುಟ್ಟುಹಾಕಿದ್ದಾರೆ.

## ಕೇಸು ವಜಾ

ಕಳೆದ ವಿಧಾನಸಭೆ ಚುನಾವಣೆ ವೇಳೆ ಏ.19ರಂದು ಶಿಗ್ಗಾಂವಿ ತಾಲ್ಲೂಕು ಕ್ರೀಡಾಂಗಣದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಿದ್ದ ಜೆ.ಪಿ. ನಡ್ಡಾ ಅವರು, 'ಕರ್ನಾಟಕದ ಜನತೆ ಬಿಜೆಪಿಗೆ ಮತ ನೀಡಿ, ಪ್ರಧಾನಿ ನರೇಂದ್ರ ಮೋದಿಯವರ ಒಲವು ಗಳಿಸಿರಿ. ಕರ್ನಾಟಕ ಮೋದಿಯವರ ಆಶೀರ್ವಾದ ಹೊಂದಿದೆ. ಅದರಿಂದ ವಂಚಿತವಾಗದಂತೆ ನೋಡಿಕೊಳ್ಳಿ' ಎಂದು ಹೇಳಿಕೆ ನೀಡಿದ್ದರು.

ಈ ಕುರಿತು ಶಿಗ್ಗಾಂವಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದ ಅಂದಿನ ಚುನಾವಣಾಧಿಕಾರಿಯಾಗಿದ್ದ ಲಕ್ಷ್ಮಣ್ ನಂದಿ, 'ಜೆ.ಪಿ. ನಡ್ಡಾ ಅವರು ಮತದಾರರ ಮೇಲೆ ಅನುಚಿತ ಪ್ರಭಾವ ಬೀರುವ ಮೂಲಕ

### ಮೊದಲನೇ ಪುಟದಿಂದ...

ಶಿಕ್ಷಾರ್ಹ ಅಪರಾಧ ಎಸಗಿದ್ದಾರೆ' ಎಂದು ಆರೋಪಿಸಿದ್ದರು. ಈ ಸಂಬಂಧ ಪೊಲೀಸರು ದಾಖಲಿಸಿದ್ದ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ನಡ್ಡಾ ಹೈಕೋರ್ಟ್ ಮೆಟ್ಟಿಲೇರಿದ್ದರು.

## ನಾವು ಕೇಳಿದ್ವಾ?

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರಿಗೂ ಮತ್ತು ರಾಮನಗರ ಜಿಲ್ಲೆಗೆ ಅವಿನೋಭಾವ ಸಂಬಂಧ ಇದೆ. ದೇವೇಗೌಡರು ರಾಮನಗರ ಜಿಲ್ಲೆಗೆ ಪದಾರ್ಪಣೆ ಮಾಡಿದ್ದು 1983ರಲ್ಲಿ, ನಾನು ಜನಿಸಿದ್ದು 1988 ರಲ್ಲಿ. ಅಂದರೆ ದೇವೇಗೌಡರ ಮತ್ತು ರಾಮನಗರ ಜಿಲ್ಲೆಯ ಸಂಬಂಧ ನಾನು ಹುಟ್ಟುವುದಕ್ಕೂ ಮೊದಲೇ ಇದೆ ಎಂದರು.

ಆತ್ಮ ವಿಶ್ವಾಸ ಹೇಗಿದೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಆತ್ಮ ವಿಶ್ವಾಸ ಇದೆ, ಚುನಾವಣೆಗೆ ಇಳಿದಿದೀವಿ ಎರಡು ಪಕ್ಷದ ಕಾರ್ಯಕರ್ತರುಗಳು ನನಗೆ ಧೈರ್ಯ ತುಂಬಿಸುತ್ತಿದ್ದಾರೆ. ಚನ್ನಪಟ್ಟಣ ತಾಲೂಕಿನ ಹೆಣ್ಣು ಮಕ್ಕಳು, ಯುವಕರು, ಹಿರಿಯರ ಆಶೀರ್ವಾದ ಮಾರ್ಗದರ್ಶನದಂದ ನನಗೆ ಆತ್ಮ ಧೈರ್ಯ ಸಿಕ್ಕಿದೆ ಎಂದರು.

## ಎಫ್‌ಐಆರ್!

ಮಾಡಿಕೊಂಡಿದ್ದಾರೆ ಎಂದಿದ್ದರು.

**ತೇಜಸ್ವಿ ಸೂರ್ಯ ಟ್ವೀಟ್ ನಲ್ಲೇನಿತ್ತು? :** ಪಹಣಿಯಲ್ಲಿ ವಕ್ಫ್ ಹೆಸರು ನಮೂದಾಗಿದ್ದರಿಂದ ರೈತ ರುದ್ರಪ್ಪ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಕೆಲವು ಮಾಧ್ಯಮಗಳು ವರದಿ ಮಾಡಿದ್ದವು. ಮಾಧ್ಯಮ ವರದಿಯೊಂದನ್ನು ಟ್ವೀಟ್ ಮಾಡಿದ್ದ ತೇಜಸ್ವಿ ಸೂರ್ಯ, 'ಸಿಎಂ ಸಿದ್ದರಾಮಯ್ಯ ಮತ್ತು ವಕ್ಫ್ ಸಚಿವ ಜಮೀರ್ ಅಹ್ಮದ್ ಅವರ ಅಲ್ಪಸಂಖ್ಯಾತರ ತುಷ್ಟೀಕರಣದಿಂದ ಕರ್ನಾಟಕದಲ್ಲಿ ದುರಂತಗಳು ಸಂಭವಿಸುತ್ತಿವೆ. ಪ್ರತಿ ದಿನ ಇಂಥ ಘಟನೆಗಳು ಸಂಭವಿಸುತ್ತಿವೆ' ಎಂದು ಉಲ್ಲೇಖಿಸಿದ್ದರು. ಇದೀಗ ಈ ಟ್ವೀಟ್ ಅನ್ನು ಅಳಿಸಿಹಾಕಲಾಗಿದೆ.

**ಜಿಲ್ಲಾಡಳಿತ ನೀಡಿದ್ದ ಸ್ಪಷ್ಟನೆ ಏನು?:** ಆಸ್ತಿ ದಾಖಲೆಯಲ್ಲಿ ವಕ್ಫ್ ಹೆಸರು ನಮೂದಾಗಿರುವುದಕ್ಕೆ ರೈತ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ವರದಿಗಳ ಬಗ್ಗೆ ನಂತರ ಹಾವೇರಿ ಜಿಲ್ಲಾಡಳಿತ ಸ್ಪಷ್ಟನೆ ನೀಡಿತ್ತು. ಪಹಣಿಯಲ್ಲಿ ವಕ್ಫ್ ಎಂದು ನಮೂದಾಗಿದ್ದಕ್ಕೆ ರೈತ ಆತ್ಮಹತ್ಯೆಗೆ ಶರಣಾಗಿಲ್ಲ. ಅವರು ಸಾಲಬಾಧೆಯಿಂದ ನೊಂದಿದ್ದರು ಎಂದು ಪೊಲೀಸ್ ಇಲಾಖೆ ಹಾಗೂ ಹಾವೇರಿ ಜಿಲ್ಲಾಡಳಿತ ಸ್ಪಷ್ಟನೆ ನೀಡಿದ್ದವು.

**ಹಾವೇರಿ ಪೊಲೀಸರು ಹೇಳಿದ್ದೇನು? :** ಮೃತನ ಬಗ್ಗೆ ಪಿಎಸ್‌ಐ ಆಡೂರ ಅವರು ತನಿಖೆ ಕೈಗೊಂಡು, ಆತನು ಬೆಳೆ ಹಾನಿಯಾಗಿದ್ದರಿಂದ ಸಾಲ ಮಾಡಿದ್ದಕ್ಕೆ ಮನನೊಂದು ಆತ್ಮಹತ್ಯೆ ಮಾಡಿಕೊಂಡಿರುತ್ತಾನೆ ಅಂತಾ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ, ಅಂತಿಮ ವರದಿಯನ್ನು ತಹಶೀಲ್ದಾರ ಹಾನಗಲ್ ರವರಿಗೆ ಸಲ್ಲಿಸಿರುತ್ತಾರೆ. ಮೃತನ ಕುಟುಂಬಕ್ಕೆ ಸರ್ಕಾರದಿಂದ 05 ಲಕ್ಷ ರೂಪಾಯಿ ಪರಿಹಾರ ಒದಗಿಸಲಾಗಿರುತ್ತದೆ ಎಂದು ಹಾವೇರಿ ಪೊಲೀಸರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದರು.

ಏತನ್ಮಧ್ಯೆ, ರುದ್ರಪ್ಪ ಕುಟುಂಬಸ್ಥರು ಗುರುವಾರ ವಕ್ಫ್ ಜಂಟಿ ಸದನ ಸಮಿತಿಯ ಅಧ್ಯಕ್ಷರಿಗೂ ಮನವಿ ಸಲ್ಲಿಸಿದ್ದರು. ವಕ್ಫ್ ಬೋರ್ಡ್ ನಿಂದಾಗಿ ಅನ್ಯಾಯ ಆಗಿದೆ ಎಂದು ದೂರು ನೀಡಿದ್ದರು.

## ಸಿದ್ಧ ಎಂದ ನಾಯಕರು

ಆದರೆ, ಪುಟಿನ್ ಅವರೊಂದಿಗೆ ಮಾತನಾಡಲಿಲ್ಲ. ಅವರು ಹ್ಯಾರಿಸ್ ಗೆಲ್ಲಲು ಬಯಸುತ್ತಾರೆ ಎಂದು ನಗು ಬೀರುತ್ತಾ ಟ್ರಂಪ್ ಪ್ರತಿಕ್ರಿಯಿಸಿದ್ದರು.

ಅಮೆರಿಕದ ತನಿಖಾ ವರದಿಗಾರ ಬಾಬ್ ವುಡ್‌ವರ್ಡ್ ಅವರ ಹೊಸ ಪುಸ್ತಕದಲ್ಲಿ, ಜೋ ಬೈಡೆನ್ ಅವರ ಅಧ್ಯಕ್ಷತೆಯಲ್ಲಿ ಟ್ರಂಪ್ ಮತ್ತು ಪುಟಿನ್ ಏಳು ಬಾರಿ ಮಾತನಾಡಿರಬಹುದು ಎಂದು ಪ್ರತಿಪಾದಿಸಿದ್ದಾರೆ. ಹಿಲರಿ ಕ್ಲಿಂಟನ್ ವಿರುದ್ಧ ಟ್ರಂಪ್ ಪ್ರಚಾರವನ್ನು ಹೆಚ್ಚಿಸಲು ಮಾಸ್ಕೋ 2016 ರ ಅಧ್ಯಕ್ಷೀಯ ಚುನಾವಣೆಯಲ್ಲಿ ಮಧ್ಯಪ್ರವೇಶಿಸಿತ್ತು ಎಂಬ ಆರೋಪಗಳೂ ಇವೆ.

## ಹಾಡಹಗಲೇ ಮಗು ಕಿಡ್ನ್ಯಾಪ್!

**ಸಿಸಿ ಟಿವಿಯಲ್ಲಿ ಕಿಡ್ನ್ಯಾಪ್ ದೃಶ್ಯ ಸೆರೆ:** ಮನೆ ಮುಂದೆ ಆಟವಾಡುತ್ತಿದ್ದ ನವ್ಯಳನ್ನು ಮಾತನಾಡಿಸುತ್ತಲೇ ಆ ಮಹಿಳೆ ಮಗುವನ್ನ ಕರೆದೊಯ್ದಿದ್ದಾಳೆ, ಈ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ತಕ್ಷಣವೇ ಪೋಷಕರು ವೈಯಾಲಿಕಾವಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿದ್ದಾರೆ. ಮಗುವಿಗಾಗಿ ಪೊಲೀಸರು ಹುಡುಕಾಟ ನಡೆಸಿದರು. ಇದೀಗ ಮಗು ವೈಯ್ಯಾಲಿಕಾವಲ್‌ನ ದೇವಯ್ಯಪಾರ್ಕ್ ಬಳಿ ಮಗು ಪತ್ತೆ ಆಗಿದೆ.

ಘಟನೆ ಕುರಿತು ಮಾತನಾಡಿರುವ ಮಗು ತಾಯಿ ದಿವ್ಯಾ ಭಾರತಿ ಅವರು, ಬೆಳಗ್ಗೆ 9.30 ಕ್ಕೆ ಮಗಳು ಆಟ ಆಡ್ತಿದ್ಳು, ಮನೆ ಮೇಲೆ ಕೂಗಿದೆ , ಬಂದಿದ್ಳು.. ಮತ್ತೆ ಯಾವಾಗ ಕೆಳಗೆ ಹೋದ್ಳೊ ಗೊತ್ತಿಲ್ಲ. ಹೊರಗೆ ಬರುವಷ್ಟರಲ್ಲಿ ಪಾಪು ಮನೆ ಕೆಳಗೆ ಇರ್ಲಿಲ್ಲ. ಮಗುವನ್ನು ಯಾರು ಕರೆದುಕೊಂಡು ಹೋಗಿದ್ರು ಗೊತ್ತಿಲ್ಲ. ನನ್ನ ಪಾಪು ಬೆಳಗ್ಗೆಯಿಂದ ಕಾಣಿಸ್ತಿಲ್ಲ. ಯಾರಿಗಾದ್ರು ಸಿಕ್ಕರೆ ತಂದು ಕೊಡಿ ಎಂದು ಮಗುವಿನ ತಾಯಿ ಕಣ್ಣೀರು ಹಾಕಿ ಮನವಿ ಮಾಡಿಕೊಂಡಿದ್ದಾರೆ.

## ವಾಹನ ಸಂಚಾರ ನಿಷೇಧ

ಕೆ.ಆರ್. ರಸ್ತೆಯ ಮೂಲಕ ಕೆ.ಆರ್. ಮಾರುಕಟ್ಟೆ ತಲುಪಿ ಎಸ್. ಜೆ.ಪಿ. ರಸ್ತೆ, ಪುರಭವನ ಸಂಪರ್ಕ ಪಡೆಯಬಹುದು ಎಂದು ಸಂಚಾರ ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೆಸಿ ರಸ್ತೆಯಲ್ಲಿ ಬೆಳಿಗ್ಗೆ ಹಾಗೂ ಸಾಯಂಕಾಲದ ಸಂದರ್ಭದಲ್ಲಿ ಟ್ರಾಫಿಕ್ ಹೆಚ್ಚಿರುತ್ತದೆ. ಕೆಲಸ ಮುಗಿಸಿ ಮನೆಗೆ ಹೋಗಲು ಒಂದು ಗಂಟೆಗೂ ಅಧಿಕ ಸಮಯ ಬೇಕು. ಈಗ ಪರ್ಯಾಯ ಮಾರ್ಗದಲ್ಲಿ ಹೋಗಬೇಕಾಗಿದೆ. ಮತ್ತಷ್ಟು ಟ್ರಾಫಿಕ್‌ನಿಂದ ಮನೆಗೆ ಹೋಗಲು ಸಮಯ ಹೋಗುತ್ತದೆ. ವೈಟ್ ಟಾಪಿಂಗ್ ಕಾಮಗಾರಿ ಮಾಡುತ್ತಿರುವುದು ಒಳ್ಳೆಯದು. ಆದರೆ ಆದಷ್ಟು ಬೇಗನೆ ಕಾಮಗಾರಿ ಮಾಡುವ ಮೂಲಕ ಸಾರ್ವಜನಿಕರ ಓಡಾಟಕ್ಕೆ ಅನಕೂಲ ಮಾಡಿ ಕೊಡಿ ಅಂತ ವಾಹನ ಸವಾರರು ಆಗ್ರಹಿಸುತ್ತಿದ್ದಾರೆ.

ವೈಟ್ ಟ್ಯಾಪಿಂಗ್ ಕಾಮಗಾರಿ ನಡೆಯುತ್ತಿರುವುದು ಒಳ್ಳೆಯ ವಿಚಾರ. ಆದರೆ ದಿನ ನಿತ್ಯ ಇದೇ ರಸ್ತೆಯಲ್ಲಿ ಓಡಾಡುತ್ತಿದ್ದ ಜನರಿಗೆ ಕಾಮಗಾರಿ ಮುಗಿಯುವ ವರೆಗೂ ಟ್ರಾಫಿಕ್ ಬಿಸಿ ತಟ್ಟಲಿದೆ.

## ಯತ್ನ

ತೆಗೆದುಹಾಕಿ ನಿಜವಾದ ಮಾಲೀಕರಿಗೆ ಆಸ್ತಿ ಸಿಗುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಯಾವುದೇ ಸರ್ಕಾರ ಇದ್ದಾಗಲೂ ಜಮೀನು ಕಬಳಿಕೆ ಮಾಡಿದ್ದರೆ ಆ ಅಧಿಕಾರಿಯನ್ನು ಮುಲಾಜಿಲ್ಲದೆ ಜೈಲಿಗೆ ಹಾಕಲಿ. ಸರ್ಕಾರವನ್ನು ವಂಚಿಸಿದ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಿ ಎಂದ ಅಶೋಕ್, ಕೇವಲ ನೋಟಿಸ್ ರದ್ದಾಗುವುದರಿಂದ ಪ್ರಯೋಜನವಿಲ್ಲ. ಜಿಲ್ಲಾಧಿಕಾರಿ ಮಾಡಿದ ಆದೇಶ ರದ್ದಾಗಬೇಕು. ವಕ್ಫ್ ಮಂಡಳಿ ಹೆಸರಿನಲ್ಲಿ ಕಾಂಗ್ರೆಸ್ ಲೂಟಿ ಮಾಡಲು ಮುಂದಾಗಿದೆ. ರಾಜಕೀಯವಾಗಿ ಇದನ್ನು ನಾವು ಬಳಸಿಕೊಳ್ಳುವುದಿಲ್ಲ. ಕೂಡಲೇ ವಕ್ಫ್ ಬೋರ್ಡ್‌ನ ಆಸ್ತಿ ಸರ್ಕಾರದ ಆಸ್ತಿ ಎಂದು ಘೋಷಣೆ ಮಾಡಿ. ಆಗ ಯಾವುದೇ ಸಮಸ್ಯೆ ಇರುವುದಿಲ್ಲ. ಇದು ಭಾರತಮಾತೆಯ ಜಮೀನು, ಯಾವುದೇ ಸಮುದಾಯದ ಆಸ್ತಿಯಲ್ಲ. ಹಿಂದೂಗಳನ್ನು ಎರಡನೇ ದರ್ಜೆಯ ಪ್ರಜೆಗಳಾಗಿ ನೋಡುವುದನ್ನು ಈ ಸರ್ಕಾರ ನಿಲ್ಲಿಸಬೇಕು ಎಂದು ಕುಟುಕಿದರು.

## ಕುಟುಂಬ

**ಒಂದೇ ಕೊಠಡಿಯಲ್ಲಿ 3 ತರಗತಿ ಮಕ್ಕಳಿಗೆ ಪಾಠ:** ಯಾದಗಿರಿ: ಸುರಪುರ ತಾಲೂಕಿನ ಬೋನಾಳ್ ಗ್ರಾಮದಲ್ಲಿನ ಸರ್ಕಾರಿ ಶಾಲೆಯ ಕಟ್ಟಡ ಚಿಕ್ಕದಾಗಿದ್ದು, ಮಕ್ಕಳು ಹೆಚ್ಚಾಗಿದ್ದಾರೆ. 450ಕ್ಕೂ ಅಧಿಕ ಮಕ್ಕಳಿರುವ ಶಾಲೆಯಲ್ಲಿ ಕೇವಲ ನಾಲ್ಕು ಕೋಣೆಗಳು ಮಾತ್ರ ಇವೆ. ಒಂದು ಕೋಣೆಯಲ್ಲಿ ಎರಡರಿಂದ ಮೂರು ತರಗತಿಯ ಮಕ್ಕಳನ್ನು ಕೂರಿಸಿ ಪಾಠ ಮಾಡಲಾಗುತ್ತಿದೆ. ಹೆಚ್ಚುವರಿ ಕೋಣೆಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಆಗಿದೆ. ಆದರೆ ಗ್ರಾಮದಲ್ಲಿ ಸರ್ಕಾರಿ ಜಾಗ ಇಲ್ಲ.

**ಸರ್ಕಾರಿ ಜಾಗ ಒತ್ತುವರಿ ತೆರವು:** ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ ಸರ್ಕಾರಿ ಜಾಗವನ್ನು ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ ತೆರವು ಮಾಡಿಸಿದ್ದಾರೆ. ಯಾದಗಿರಿ ನಗರದಲ್ಲಿರುವ ಪೂರ್ಣಕಮಲ್ ಶ್ರೇಣಿಕರಾಜ್ ದೋಖಾ ಜೈನ್ ಖಾಸಗಿ ಆಂಗ್ಲ ಮಾಧ್ಯಮ ಶಾಲೆ ಸರ್ಕಾರಿ ಉದ್ಯಾನವನ ಒತ್ತುವರಿ ಮಾಡಿಕೊಂಡಿದೆ. ಒತ್ತುವರಿ ಮಾಡಿದ ಜಾಗದಲ್ಲಿ ಶಾಲೆ ಆಟದ ಮೈದಾನ ನಿರ್ಮಾಣ ಮಾಡಿದೆ. ಅಕ್ರಮ ಒತ್ತುವರಿ ತೆರವಿಗೆ ಮುಂದಾಗುತ್ತಿದ್ದ ಅಧಿಕಾರಿಗಳು ರಾಜಕೀಯ ನಾಯಕರ ಪ್ರಭಾವದಿಂದ ಹಿಂದೆ ಸರೆದಿದ್ದರು.

ಆದರೆ, ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ ಒತ್ತುವರಿ ತೆರವು ಮಾಡಿಸಿದ್ದಾರೆ. ಬಳಿಕ, ಅದೇ ಸ್ಥಳದಲ್ಲಿ ಕಾಂಪೌಂಡ್ ನಿರ್ಮಿಸಿದ್ದಾರೆ. ಇನ್ನು, ಶಾಲೆಯಲ್ಲಿ ಶೌಚಾಲಯ ಹಾಗೂ ಕುಡಿಯಲು ನೀರು ಇರದಿದ್ದಕ್ಕೆ ಶಿಕ್ಷಣ ಇಲಾಖೆ ಶಾಲೆಗೆ ನೋಟೀಸ್ ನೀಡಿದೆ.

## ಜಮಾತ್-ಎ-ಇಸ್ಲಾಮಿ ಬೆಂಬಲದಿಂದ ಪ್ರಿಯಾಂಕಾ ಗಾಂಧಿ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ: ಪಿಣರಾಯಿ ವಿಜಯನ್



**ನವದೆಹಲಿ:** ಲೋಕಸಭೆ ಉಪಚುನಾವಣೆಗೆ ಮುನ್ನ ಕೇರಳದ ವಯನಾಡಿನಲ್ಲಿ ರಾಜಕೀಯದ ಬಿಸಿ ಏರುತ್ತಿದ್ದು, ಜಮಾತ್-ಎ-ಇಸ್ಲಾಮಿ ಬೆಂಬಲದೊಂದಿಗೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಉಪ ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದಾರೆ ಎಂದು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಹೇಳಿದ್ದಾರೆ.

ಪ್ರಿಯಾಂಕಾ ಗಾಂಧಿ ಅವರು ಜಮಾತ್ -ಎ-ಇಸ್ಲಾಮಿ ಬೆಂಬಲದೊಂದಿಗೆ ಅಲ್ಲಿ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದಾರೆ. ಹಾಗಾದರೆ, ಕಾಂಗ್ರೆಸ್‌ನ ನಿಲುವು ನಿಖರವಾಗಿ ಏನು ನಮ್ಮ ದೇಶವು ಜಮಾತ್ -ಎ-ಇಸ್ಲಾಮಿಯ ಬಗ್ಗೆ ತಿಳಿದಿಲ್ಲ. ಆ ಸಂಘಟನೆಯ ಸಿದ್ಧಾಂತವು ಪ್ರಜಾಸತ್ತಾತ್ಮಕ ಮೌಲ್ಯಗಳೊಂದಿಗೆ ಹೊಂದಿಕೆಯಾಗುತ್ತದೆಯೇ ಎಂದು ಕೇಳಿದರು.

ಸಿಪಿಐ(ಎಂ)ನ ಸತ್ಯನ್ ಮೊಕೇರಿ ಮತ್ತು ಬಿಜೆಪಿಯ ನವ್ಯಾ ಹರಿದಾಸ್ ವಿರುದ್ಧ ಸ್ಪರ್ಧಿಸುತ್ತಿರುವ ಪ್ರಿಯಾಂಕಾ ಗಾಂಧಿ ಅವರಿಗೆ ಜಮಾತ್-ಎ-ಇಸ್ಲಾಮಿಗೆ ಸಂಬಂಧಿಸಿದ ರಾಜಕೀಯ ಸಂಘಟನೆಯಾದ ವೆಲ್ಫೇರ್ ಪಾರ್ಟಿ ತನ್ನ ಬೆಂಬಲವನ್ನು ಘೋಷಿಸಿದ ಕೆಲವು ದಿನಗಳ ನಂತರ ಈ ಹೇಳಿಕೆ ನೀಡಿದ್ದಾರೆ.

ಜಮಾತ್ ದೇಶ ಅಥವಾ ಅದರ ಪ್ರಜಾಪ್ರಭುತ್ವವನ್ನು ಮುಖ್ಯವಾಗಿ ನೋಡುವುದಿಲ್ಲ. ದೇಶದ ಆಡಳಿತವನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ ಎಂದರು. ವಿಜಯನ್ ಅವರು ಜಮಾತ್-ಎ-ಇಸ್ಲಾಮಿ ಅಲ್ಲಿ ಮೂರು ಅಥವಾ ನಾಲ್ಕು ಸ್ಥಾನಗಳಲ್ಲಿ ಸ್ಪರ್ಧಿಸಲು ಯೋಜಿಸಿದ್ದಾರೆ, ಆದರೆ ಸಿಪಿಐ(ಎಂ) ನಾಯಕ ಮೊಹಮ್ಮದ್ ಯೂಸುಫ್ ತರಿಗಾಮಿ ಅವರನ್ನು ಸೋಲಿಸುವುದು ಗುರಿಯಾಗಿದೆ ಎಂದು ಆರೋಪಿಸಿದರು.

ರಾಹುಲ್ ಗಾಂಧಿ ಲೋಕಸಭಾ ಚುನಾವಣೆಯಲ್ಲಿ ಅಮೇಥಿ ಹಾಗೂ ವಯನಾಡಿನಿಂದ ಸ್ಪರ್ಧಿಸಿ ಎರಡೂ ಕಡೆ ಗೆಲುವು ಸಾಧಿಸಿದ್ದರು. ಬಳಿಕ ವಯನಾಡನ್ನು ಬಿಟ್ಟುಕೊಟ್ಟು ಅಮೇಥಿಯನ್ನು ಉಳಿಸಿಕೊಂಡರು, ಇದೀಗ ವಯನಾಡಿಗೆ ಉಪ ಚುನಾವಣೆ ನಡೆಯಲಿದ್ದು, ರಾಹುಲ್ ಗಾಂಧಿ ಜಾಗಕ್ಕೆ ಪ್ರಿಯಾಂಕಾ ಗಾಂಧಿ ಸ್ಪರ್ಧಿಸುತ್ತಿದ್ದಾರೆ. ವಯನಾಡ್ ಉಪಚುನಾವಣೆ ನವೆಂಬರ್ 13 ರಂದು ನಡೆಯಲಿದೆ.

## ಗಂಡ್ಸಾಗಿದ್ದರೆ ಪೊಲೀಸ್‌ಗೆ ಹೊಡಿ ಎಂದ ತಾಯಿ, ಹೊಡೆದೇ ಬಿಟ್ಟ ಮಗ



**ನೆಲಮಂಗಲ:** ತಾಯಿಯ ಮಾತಿನಿಂದ ಪ್ರಚೋದನೆಗೊಂಡ ಮಗ ಮಹಿಳಾ ಪಿಎಸ್‌ಐ ಮೇಲೆ ಹಲ್ಲೆ ಮಾಡಿದ್ದಾನೆ. ಮಧಸೂದನ್ ಹಲ್ಲೆ ಮಾಡಿದ ಆರೋಪಿ. ಬಿಇ ಡ್ರಾಪ್ ಔಟ್ ಆಗಿರುವ ಮಧುಸೂದನ್ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದ ಮುಕ್ತಿನಾಥೇಶ್ವರ ಬಡಾವಣೆಯಲ್ಲಿ ವಾಸವಾಗಿದ್ದಾನೆ.

ಮಧುಸೂದನ್ ಕೆಲಸಕ್ಕೆ ಹೋಗದೆ ಮನೆಯಲ್ಲೇ ಕಾಲ ಕಳೆಯುತ್ತಿದ್ದನು. ಈ ವಿಚಾರವಾಗಿ ತಾಯಿ ಸುಶೀಲಮ್ಮ ಮತ್ತು ಮಧುಸೂದನ್ ನಡುವೆ ಗಲಾಟೆ ನಡೆದಿದೆ. ಬಳಿಕ, ತಾಯಿ ಸುಶೀಲಮ್ಮ ಮಗನ ವಿರುದ್ಧ ನೆಲಮಂಗಲ ಟೌನ್ ಠಾಣೆಗೆ ದೂರು ನೀಡಿದ್ದಾರೆ.



ನಂತರ, ಪೊಲೀಸರು ವಿಚಾರಣೆಗೆಂದು ಇಬ್ಬರನ್ನೂ ಠಾಣೆಗೆ ಕರೆಸಿದ್ದಾರೆ. ಪೊಲೀಸ್ ಠಾಣೆಯಲ್ಲೇ ತಾಯಿ ಮತ್ತು ಮಗ ಜಗಳವಾಡಲು ಆರಂಭಿಸಿದ್ದಾರೆ. ಈ ವೇಳೆ ಮಹಿಳಾ ಪಿಎಸ್ ಐ ಜಯಂತಿ, ಮಧುಸೂದನ್ ಗೆ ಗದರಿಸಿ ಒಂದೇಟು ಹೊಡೆದಿದ್ದಾರೆ.

ಸಂದರ್ಭದಲ್ಲಿ ಸುಶೀಲಮ್ಮ, ''ದೂರು ಕೊಟ್ಟು ಪೊಲೀಸರಿಂದ ಹೊಡೆಸಿದರೇ, ಪೊಲೀಸರಿಗೆ ತಿರುಗಿ ಹೊಡೆಯುವೆ ಅಂತ ಹೇಳುತ್ತಿದ್ದಿಯಲ್ಲ. ಈಗ ಹೊಡಿ ನೋಡೋಣ. ನೀನು ಗಂಡಸಾಗಿದ್ದರೆ ಪೊಲೀಸರಿಗೆ ಹೊಡೆದು ತೋರಿಸು. ಹೊಡಿ ಈಗ ಪೊಲೀಸರಿಗೆ ನೋಡೋಣ'' ಎಂದು ಮಗ ಮಧುಸೂದನ್ ನನ್ನು ಪ್ರಚೋದಿಸಿದ್ದಾಳೆ. ಪ್ರಚೋದನೆಗೊಂಡ ಮಧುಸೂದನ್ ಮಹಿಳಾ ಪಿಎಸ್ ಐ ಜಯಂತಿ ಮೇಲೆ ಹಲ್ಲೆ ಮಾಡಿದ್ದಾನೆ. ಮಹಿಳಾ ಪಿಎಸ್ ಐ ಜಯಂತಿ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಗುರುವಾರ ರಾತ್ರಿ 10 ಗಂಟೆ ಸುಮಾರು ನೆಲಮಂಗಲ ಟೌನ್ ಠಾಣೆಯಲ್ಲಿ ಘಟನೆ ನಡೆದಿದೆ. ಮಧುಸೂದನ್ ವಿರುದ್ಧ ನೆಲಮಂಗಲ ಟೌನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿ ಮಧುಸೂದನ್ ನನ್ನು ಪೊಲೀಸರು ಬಂಧಿಸಿದ್ದಾರೆ. ಮಧುಸೂದನ್ ವಿರುದ್ಧ ಕಲಂ-132 ,121(1 ),121(2),352, 54, ಜೊತೆಗೆ 3(5) ಬಿಎನ್‌ಎಸ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

# ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿನ ಮಕ್ಕಳ ಪ್ರೋತ್ಸಾಹ ಧನ 1 ರಿಂದ 2 ಲಕ್ಷಕ್ಕೆ ಹೆಚ್ಚಳ

**ಚಾಮರಾಜನಗರ:** ಐಐಟಿ/ಐಐಎಂ/ಐಐಎಸ್‌ಸಿ/ಎನ್‌ಐಟಿ ಯಂತಹ ರಾಷ್ಟ್ರೀಯ ಸಂಸ್ಥೆಗಳಲ್ಲಿ ಓದುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ (ಎಸ್.ಸಿ/ಎಸ್.ಟಿ) ವಿದ್ಯಾರ್ಥಿಗಳ ಪ್ರೋತ್ಸಾಹ ಧನವನ್ನು 1 ರಿಂದ 2 ಲಕ್ಷಕ್ಕೆ ಹೆಚ್ಚಳ ಮಾಡಿ ಸರ್ಕಾರವು ಆದೇಶ ಹೊರಡಿಸಿದ್ದು ಇದು ಪರಿಶಿಷ್ಟಸಮುದಾಯದ ವಿದ್ಯಾರ್ಥಿಗಳ ಹೆಚ್ಚಿನ ಶೈಕ್ಷಣಿಕ ಸಾಧನೆಗೆ ಕಾರಣವಾಗಲಿದೆ ಎಂದು ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ ಮಹದೇವಪ್ಪ ಅವರು ತಿಳಿಸಿದ್ದಾರೆ.



ಇನ್ನು ಪಿಯುಸಿ ಪರೀಕ್ಷೆಯಲ್ಲಿ 95ಕ್ಕೂ ಹೆಚ್ಚಿನ ಅಂಕಗಳನ್ನು ಪಡೆದು, ನೀಟ್ ಪ್ರವೇಶ ಪರೀಕ್ಷೆಯ ಮೂಲಕ ಸರ್ಕಾರಿ ಕೋಟಾದಡಿ ಪ್ರವೇಶ ದೊರಕದೇ ಮ್ಯಾನೇಜ್‌ಮೆಂಟ್ ಕೋಟಾದಡಿ ಎಂಬಿಬಿಎಸ್ ಕೋರ್ಸ್‌ಗೆ ಸೀಟು ಪಡೆದುಕೊಂಡ ಪರಿಶಿಷ್ಟಜಾತಿಯ ಮಕ್ಕಳಿಗೆ 25 ಲಕ್ಷ ರೂ. ಶುಲ್ಕ ಧನವನ್ನು ಒದಗಿಸಲು ಸರ್ಕಾರ ತೀರ್ಮಾನಿಸಿದೆ.

ಎಂಬಿಬಿಎಸ್ ಪದವಿಯನ್ನು ಪಡೆಯುತ್ತಿರುವ ಪರಿಶಿಷ್ಟಜಾತಿಯ ವಿದ್ಯಾರ್ಥಿಗಳು ಮೊದಲ ವರ್ಷ ಶೇ. 60ಕ್ಕೂ ಹೆಚ್ಚಿನ ಅಂಕಗಳನ್ನು ಪಡೆದು ಉತ್ತೀರ್ಣರಾದರೆ ಅವರಿಗೆ ಮತ್ತೆ 25 ಲಕ್ಷ ರೂ.ಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದು.

ಶಿಕ್ಷಣವೇ ಸಮಾಜವನ್ನು ಬದಲಿಸುವ ಕೀಲಿಕೈ ಎಂಬ ಅಂಶವನ್ನು ಮನಗಂಡು ಈ ಮಹತ್ವದ ಘೋಷಣೆಯನ್ನು ಸರ್ಕಾರವು ಮಾಡಿದ್ದು, ಇದರಿಂದ ಉನ್ನತ ಶಿಕ್ಷಣ ಪಡೆಯಬೇಕೆಂಬ ವಿದ್ಯಾರ್ಥಿಗಳ ಕನಸು ನನಸಾಗಲಿದೆ. ಐಐಟಿ, ಐಐಎಂ ನಂತಹ ಶಿಕ್ಷಣ ಸಂಸ್ಥೆಗಳಲ್ಲಿ ಓದುವಂತಹ ಪರಿಶಿಷ್ಟಜಾತಿ ಮತ್ತು ಪಂಗಡದ ಮಕ್ಕಳು ದೇಶ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಬೇಕು. ಆ ಮೂಲಕ ಸಮೃದ್ಧ ಮತ್ತು ಸಶಕ್ತ ರಾಷ್ಟ್ರದ ನಿರ್ಮಾಣವಾಗಬೇಕು.

ಇನ್ನು ಬಡತನದ ಬೇಗೆಗೆ ಸಿಲುಕಿ ಎಂಬಿಬಿಎಸ್ ಓದುವ ಬಯಕೆ ಇರುವಂತಹ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸರ್ಕಾರಿ ಕೋಟಾದಡಿ ಸೀಟು ಸಿಗದೇ ಅವರು ಖಾಸಗೀ ಸಂಸ್ಥೆಗಳಲ್ಲಿ ಓದುತ್ತಿದ್ದರೆ, ಅಂತಹ ಪ್ರತಿಭಾವಂತ ಮಕ್ಕಳ ಶುಲ್ಕವನ್ನು ಸರ್ಕಾರ ಭರಿಸಲಿದ್ದು, ಇದಕ್ಕಾಗಿ ಆರಂಭಿಕವಾಗಿ 25 ಲಕ್ಷ ರೂ.ಗಳನ್ನು ನೀಡುವ ನಿರ್ಧಾರವನ್ನು ತೆಗೆದುಕೊಂಡಿದೆ.

ಈಗಾಗಲೇ ಪ್ರಬುದ್ಧ ಯೋಜನೆಯಡಿ ವಿದೇಶಿ ವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಿರುವ ಸರ್ಕಾರವು ಇದೀಗ ಮಕ್ಕಳ ಉತ್ತಮ ಶಿಕ್ಷಣವನ್ನು ಗಮನದಲ್ಲಿಟ್ಟುಕೊಂಡು ಮುಖ್ಯ ಘೋಷಣೆಯನ್ನು ಮಾಡಿದೆ. ಹೀಗಾಗಿ ಬಾಬಾ ಸಾಹೇಬರ ಆಶಯದಂತೆ ನಮ್ಮೆಲ್ಲಾ ಪರಿಶಿಷ್ಟಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವ ನಿಟ್ಟಿನಲ್ಲಿ ಹೆಚ್ಚು ಆಸಕ್ತಿ ಹೊಂದಿ, ಪರಿಶ್ರಮ ಹಾಕಿ ಓದಬೇಕೆಂದು ಸಚಿವರು ಆಶಯವನ್ನು ವ್ಯಕ್ತಪಡಿಸಿದ್ದಾರೆ.

## ಸಾರ್ವಜನಿಕರಿಂದ ದೂರು ಸ್ವೀಕಾರ

**ಚಾಮರಾಜನಗರ: ಲೋಕಾಯುಕ್ತ ಅಧಿಕಾರಿಗಳು ನವೆಂಬರ್ 13 ರಂದು ಹನೂರು ಪ್ರವಾಸಿಮಂದಿರದಲ್ಲಿ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಾರ್ವಜನಿಕರಿಂದ ದೂರು ಅರ್ಜಿಗಳನ್ನು ಸ್ವೀಕರಿಸಿ ವಿಚಾರಣೆ ನಡೆಸಲಿದ್ದಾರೆ. ಸರ್ಕಾರಿ ಕಚೇರಿಗಳಲ್ಲಿ ಕಚೇರಿ ಕೆಲಸಗಳ ಅನಗತ್ಯ ವಿಳಂಬ ಹಾಗೂ ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ, ನೌಕರರ ವಿರುದ್ದ ಸಾರ್ವಜನಿಕರು ದೂರುಗಳನ್ನು ನಿಗದಿತ ನಮೂನೆ-1 ಮತ್ತು 2ರಲ್ಲಿ ನೀಡಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ನ. 9 ರವರೆಗೆ ಅಸಂಘಟಿತ ಕಾರ್ಮಿಕರಿಗೆ ಶಿಬಿರದ ಮೂಲಕ ಆದ್ಯತಾ ಪಡಿತರ ಚೀಟಿ ವಿತರಣೆ

**ಚಾಮರಾಜನಗರ:** ಕಾರ್ಮಿಕ ಇಲಾಖೆ, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಸಹಯೋಗದೊಂದಿಗೆ ಇ-ಶ್ರಮ್ ಪೋರ್ಟಲ್‌ನಲ್ಲಿ ನೊಂದಣಿಯಾಗಿರುವ ಅರ್ಹ ಅಸಂಘಟಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ವಿತರಿಸಲು ನವೆಂಬರ್ 9 ರವರೆಗೆ ಆದ್ಯತಾ ಪಡಿತರ ಚೀಟಿ ವಿತರಿಸುವ ಶಿಬಿರಗಳನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಎಂ. ಸವಿತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.13ರಂದು ಸಾರ್ವಜನಿಕ ಕುಂದುಕೊರತೆ ಸಭೆ

**ಮಂಡ್ಯ:** ಮಂಡ್ಯ ಲೋಕಾಯುಕ್ತ ವಿಭಾಗದಅಧಿಕಾರಿಯವರುಗಳು ಮಂಡ್ಯ ಜಿಲ್ಲೆಯ ಕೆ ಆರ್ ಪೇಟೆತಾಲ್ಲೂಕಿನಲ್ಲಿ ಸಾರ್ವಜನಿಕರಿಂದದೂರು/ ಅಹವಾಲು ಸ್ವೀಕಾರ ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಕುಂದುಕೊರತೆ ಸಭೆಯನ್ನುನವೆಂಬರ್ 13ರಂದು ಬೆಳಿಗ್ಗೆ 11 ಗಂಟೆಯಿಂದ ಮದ್ಯಾಹ್ನ 1.30 ಗಂಟೆಯವರೆಗೆ ಕೆ ಆರ್ ಪೇಟೆತಾಲ್ಲೂಕುಕಚೇರಿಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸಭೆಯಲ್ಲಿ ಮಂಡ್ಯ ಕರ್ನಾಟಕ ಲೋಕಾಯುಕ್ತಡಿವೈಎಸ್‌ಪಿ ಸುನಿಲ್ ಕುಮಾರ್ ಹೆಚ್ ಟಿ, ಪೊಲೀಸ್ ಇನ್ಸ್‌ಪೆಕ್ಟರ್‌ಗಳಾದ ಮೋಹನ್‌ರೆಡ್ಡಿಆರ್ ಎಂ, ಎಂ ಜಯರತ್ನ, ಬ್ಯಾಟರಾಯಗೌಡ ಬಿ ಪಿ ಅವರುಗಳು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಕೆ ಆರ್ ಪೇಟೆತಾಲ್ಲೂಕಿನ ಸಾರ್ವಜನಿಕರು ಲೋಕಾಯುಕ್ತ ಅಧಿಕಾರಿಗಳನ್ನು ಖುದ್ದಾಗಿ ಭೇಟಿ ಮಾಡಿ ಸರ್ಕಾರಿ ಮತ್ತುಅರೆ ಸರ್ಕಾರಿ ಕಚೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಅಧಿಕಾರಿ/ನೌಕರರುಗಳು ಸರ್ಕಾರಿ ಕೆಲಸ ಮಾಡಿಕೊಡಲುಅನಗತ್ಯ ವಿಳಂಬ ಮಾಡಿದ ಬಗ್ಗೆ ಹಾಗೂ ಭ್ರಷ್ಟಾಚಾರದ ಬಗ್ಗೆ ದೂರು/ಅಹವಾಲುಗಳನ್ನು ಸಲ್ಲಿಸಬಹುದುಎಂದು ಮಂಡ್ಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಪಡಿತರ ಚೀಟಿ ವಿತರಣೆ

**ಚಿಕ್ಕಬಳ್ಳಾಪುರ:** ಮಾನ್ಯ ಸರ್ವೋಚ್ಚ ನ್ಯಾಯಾಲಯವು ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ (ಬಿ.ಪಿ.ಎಲ್) ನೀಡಲು ಆದೇಶಿಸಿದ್ದು, ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭವಾಗಿರುತ್ತದೆ. ಆದ್ದರಿಂದ ಆದ್ಯತಾ ಪಡಿತರ ಚೀಟಿ ಹೊಂದಿಲ್ಲದ ಇ-ಶ್ರಮ್ ನೋಂದಾಯಿತ ಎಲ್ಲಾ ಅರ್ಹ ಕಾರ್ಮಿಕರು ನಿಮ್ಮ ಹತ್ತಿರದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯನ್ನು ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ದೂರವಾಣಿ ಸಂಖ್ಯೆ:1800-425-9339 ಅಥವಾ ಸಹಾಯವಾಣಿ 1967ಕ್ಕೆ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.30 ಗಂಟೆಯವರೆವಿಗೂ ಸಂಪರ್ಕಿಸುವಂತೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಥಪೂರ್ಣವಾಗಿ ಒನಕೆ ಓಬವ್ವ ಜಯಂತಿ ಆಚರಣೆ

**ಮೈಸೂರು:** ನವೆಂಬರ್ 11 ರಂದು ಬೆಳಗ್ಗೆ 11.30 ಗಂಟೆಗೆ ಕರ್ನಾಟಕದ ಕಲಾಮಂದಿರದ ಕಿರುರಂಗಮಂದಿರದಲ್ಲಿ ''ಒನಕೆ ಓಬವ್ವ ಜಯಂತಿ'' ಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ.ಪಿ ಶಿವರಾಜು ಅವರು ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಒನಕೆ ಓಬವ್ವ ಜಯಂತಿಯ ಆಚರಣೆಯ ಸಂಬಂಧ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಒನಕೆ ಓಬವ್ವ ಇಂದು ಮಹಿಳಾ ಸಮಾಜಕ್ಕೆ ಮಾದರಿಯಾಗಿದ್ದಾರೆ. ದೈಹಿಕವಾಗಿ ಮಾನಸಿಕವಾಗಿ ತನ್ನನ್ನು ತಾನು ಪುರುಷರಿಗಿಂತ ಯಾವುದೇ ವಿಷಯದಲ್ಲಿ ಕಡಿಮೆ ಇಲ್ಲ ಇಂದು ಸಾಬೀತು ಪಡಿಸಿದ ವೀರ ವನಿತೆ. ಅಂತಹ ಸಾಧಕಿಯ ಜಯಂತಿಯನ್ನು ಆಚರಿಸುವುದು ನಮ್ಮ ನಾಡಿಗೆ ಹೆಮ್ಮೆ ತರುತ್ತದೆ ಎಂದರು. ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಿ, ಜಯಂತಿ ನಡೆಯುವ ಸ್ಥಳದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ ಸುದರ್ಶನ್ ಅವರು ಮಾತನಾಡಿ, ಕಾರ್ಯಕ್ರಮದಲ್ಲಿ ಕಲಾತಂಡಗಳಿಂದ ಗೀತ ಗಾಯನವನ್ನು ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಾಚಾರದಂತೆ ಜನ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಒನಕೆ ಓಬವ್ವ ಸಮುದಾಯದ ಮುಖಂಡರುಗಳು ಉಪಸ್ಥಿತರಿದ್ದರು.

## ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಸಮೀಕ್ಷೆ

**ಮೈಸೂರು:** ಹೂಟಗಳ್ಳಿ ನಗರಸಭಾ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ನಡೆಸುತ್ತಿದ್ದು, ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು, ಅನೈರ್ಮಲ್ಯ ಶೌಚಾಲಯಗಳಿಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಮಲವನ್ನು ಸ್ವಚ್ಛಗೊಳಿಸುವುದು ಅಥವಾ ಶೌಚಾಲಯದ ಮಲ ಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವ ವರ್ಗದಲ್ಲಿನ ಯಾವುದೇ ವ್ಯಕ್ತಿಗಳು ಇದ್ದಲ್ಲಿ ನವೆಂಬರ್ 4 ರಿಂದ 14 ರವರೆಗೆ ಹೂಟಗಳ್ಳಿ ನಗರಸಭಾ ಕಛೇರಿಯಲ್ಲಿ NAMASTE ಪೋರ್ಟ್‌ಲ್ ನ MS Survey App ನಲ್ಲಿ ಕಾಲೋಚಿತಗೊಳಿಸಲಾಗುತ್ತಿದ್ದು, ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳು ಖುದ್ದಾಗಿ ನಗರಸಭಾ ಕಛೇರಿಗೆ ಭೇಟಿ ನೀಡಿ ಸೂಕ್ತ ದಾಖಲೆಗಳೊಂದಿಗೆ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಹೂಟಗಳ್ಳಿ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

## ಆನ್‌ಲೈನ್ ಅರ್ಜಿ ಆಹ್ವಾನ

**ಕೋಲಾರ:** 2024-25ನೇ ಶೈಕ್ಷಣಿಕ ಸಾಲಿನಲ್ಲಿ ಪಿ.ಯು.ಸಿ, ಡಿಪ್ಲೋಮಾ, ಐ.ಟಿ.ಐ, ಪದವಿ ಮತ್ತು ಸ್ನಾತಕೋತ್ತರ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಮತೀಯ ಅಲ್ಪಸಂಖ್ಯಾತರ ಸಮುದಾಯ ವರ್ಗದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧ, ಸಿಖ್, ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರ ಹಾಗೂ ಮೆರಿಟ್-ಕಂ-ಮೀನ್ಸ್ ಶುಲ್ಕ ಮರುಪಾವತಿ ಯೋಜನೆಯಡಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಕನಿಷ್ಠ 50% ಅಂಕಗಳನ್ನು ಪಡೆದಿರಬೇಕು, ಮೆಟ್ರಿಕ್ ನಂತರದ (ಶುಲ್ಕ ಮರುಪಾವತಿ) ಗಾಗಿ ಕಟುಂಬದ ವಾರ್ಷಿಕ ವರಮಾನ ಒಟ್ಟು ಆದಾಯ ರೂ.2 ಲಕ್ಷಗಳನ್ನು ಮೀರಿರಬಾರದು ಮತ್ತು ಮೆರಿಟ್-ಕಂ-ಮೀನ್ (ಶುಲ್ಕ ಮರುಪಾವತಿ) ಗಾಗಿ ರೂ.2.5 ಲಕ್ಷಗಳನ್ನು ಮೀರಿರಬಾರದು. ರಾಜ್ಯ ಅಲ್ಪಸಂಖ್ಯಾತರ ಅರ್ಹ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ (ಎಸ್.ಎಸ್.ಪಿ) ಪೋರ್ಟಲ್ https://ssp.postmatric.karnataka.gov.in/ ನಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ನವೆಂಬರ್ 30 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ www.domkarnataka.nic.in ಹಾಗೂ ಜಿಲ್ಲಾ ಕಛೇರಿಯ ದೂರವಾಣಿ ಸಂ08152-295257, ಅಲ್ಪಸಂಖ್ಯಾತರ ಜಿಲ್ಲಾ ಮಾಹಿತಿ ಕೇಂದ್ರ ಕೋಲಾರ-7760391781, ತಾಲ್ಲೂಕು ಮಾಹಿತಿ ಕೇಂದ್ರ ಬಂಗಾರಪೇಟೆ-9964944123, ತಾಲ್ಲೂಕು ಮಾಹಿತಿ ಕೇಂದ್ರ ಮಾಲೂರು-8970755461, ತಾಲ್ಲೂಕು ಮಾಹಿತಿ ಕೇಂದ್ರ ಶ್ರೀನಿವಾಸಪುರ-9535466160 ಮತ್ತು ತಾಲ್ಲೂಕು ಮಾಹಿತಿ ಕೇಂದ್ರ ಮುಳಬಾಗಿಲು-7899266051 ಯನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಕನ್ನಡದ ಇಂಪು, ನಿತ್ಯ ನೂತನವೀ ಕಂಪು

**ಹುಳಿಯಾರು:** ನವಂಬರ್ ಕನ್ನಡ ಮಾಸಾಚರಣೆ ಅಂಗವಾಗಿ ಜಿಲ್ಲಾ ಕಸಾಪ ಮಾರ್ಗದರ್ಶನದಲ್ಲಿ ಮತ್ತು ಹೋಬಳಿ ಕಸಾಪ ಸಹಕಾರದೊಂದಿಗೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕನ್ನಡದ ಇಂಪು; ನಿತ್ಯ ನೂತನವೀ ಕಂಪು ಕಾರ್ಯಕ್ರಮದ ಅಡಿಯಲ್ಲಿ ಸ್ಥಳೀಯ ಕನ್ನಡ ಸಾಧಕರ ಪರಿಚಯ ಉಪನ್ಯಾಸ ಕಾರ್ಯಕ್ರಮವನ್ನು ಪಟ್ಟಣದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿತ್ತು. ಚಿ.ನಾ.ಹಳ್ಳಿ ತಾಲ್ಲೂಕು ಕಸಾಪ ಸಂಚಾಲಕ ದಯಾನಂದ್ ಎಂ. ಇವರು ಕನ್ನಡದ ಕಟ್ಟಾಳು ತಾಲೂಕು ಕಸಾಪ ಮಾಜಿ ಅಧ್ಯಕ್ಷ ದಿ.ತ.ಶಿ ಬಸವಮೂರ್ತಿರವರ ಬಗ್ಗೆ ಉಪನ್ಯಾಸ ನೀಡಿದರು. ಹೋಬಳಿ ಕೇಂದ್ರವಾದ ಹುಳಿಯಾರಿನಲ್ಲಿ ದಾಖಲೆಯ ಕಸಾಪ ಸದಸ್ಯತ್ವ ನೊಂದಾಯಿಯಿ ರಾಜ್ಯದಲ್ಲೇ ಮೊದಲ ಬಾರಿಗೆ ಕಸಾಪ ಸ್ಥಾಪನೆ, ಕಸಾಪ ಮತಗಟ್ಟೆ ಸ್ಥಾಪನೆ, ಮನೆಮನೆ ಕವಿಕಾವ್ಯಗೋಷ್ಠಿ, ಕಸಾಪಕ್ಕೆ ನಿವೇಶನ ಮಂಜೂರು, ಶಾಲಾ ಕಾಲೇಜುಗಳಲ್ಲಿ ಹೀಗೆ ಹೋಬಳಿ ಕೇಂದ್ರದಲ್ಲಿ ಕನ್ನಡ ಕಟ್ಟುವವಲ್ಲಿ ಬಸವಮೂರ್ತಿ ಅವರ ಮಾಡಿದ ಕನ್ನಡ ಸೇವೆ ಶ್ಲಾಘಿಸಿದರು. ಪ್ರಾಂಶುಪಾಲಾದ ಸಿ.ಜಿ.ಶೈಲಜಾ ಅಧ್ಯಕ್ಷತೆ ವಹಿಸಿದ್ದರು, ಹೋಬಳಿ ಕಸಾಪ ಅಧ್ಯಕ್ಷರಾದ ನಾರಾಯಣಪ್ಪ, ಕಾರ್ಯದರ್ಶಿ ಹೆಚ್.ಜಯಣ್ಣ, ಮುಖ್ಯ ಶಿಕ್ಷಕರಾದ ಪುಟ್ಟಸ್ವಾಮಿ, ಉಪನ್ಯಾಸಕರುಗಳಾದ ಹೆಚ್.ಎಂ.ಮಂಜುನಾಥ್, ಮಂಗಳಗೌರಮ್ಮ, ಪ್ರಸನ್ನ, ಹೆಚ್.ಎಸ್.ನಾರಾಯಣ್, ನಿವೃತ್ತ ಶಿಕ್ಷಕರಾದ ನಂದವಾಡಗಿ ಉಪಸ್ಥಿತರಿದ್ದರು.

# ಒಡೆಯರ್‌ಪಾಳ್ಯ ಬಳಿ ರಾಜ್ಯದಲ್ಲೇ ಅತೀ ಎತ್ತರದ ಬುದ್ದನ ಪ್ರತಿಮೆ ನಿರ್ಮಾಣ

**ಚಾಮರಾಜನಗರ :** ಸುತ್ತಲೂ ಹಚ್ಚಹಸಿರಿನಿಂದ ಕೂಡಿದ ಅರಣ್ಯ ಸಂಪತ್ತು, ಎರಡು ಹುಲಿ ಸಂರಕ್ಷಿತ ಪ್ರದೇಶದ ನಡುವೆ ಇರುವ ಪ್ರಾಕೃತಿಕ ನೈಸರ್ಗಿಕ ಸಂಪತ್ಬರಿತ ಪ್ರದೇಶದಲ್ಲಿ 6 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿದೆ 113 ಅಡಿ ಎತ್ತರದ ಬೃಹತ್ ಬುದ್ದನ ವಿಗ್ರಹ ಕಾಮಗಾರಿ.



ಕರ್ನಾಟಕ ತಮಿಳುನಾಡು ನಡುವೆ ಇರುವ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಒಡೆಯರಪಾಳ್ಯ ಸಮೀಪವಿರುವ ಟಿಬೆಟಿಯನ್ನರ ನಿರಾಶ್ರಿತರ ಶಿಬಿರ ಬಿಳಿಗಿರಿರಂಗನಾಥ ಹುಲಿ ಸಂರಕ್ಷಿತ ಪ್ರದೇಶ ಹಾಗೂ ತಮಿಳುನಾಡಿನ ಸತ್ಯಮಂಗಲಂ ಹುಲಿ ಸಂರಕ್ಷಿತ ಪ್ರದೇಶಕ್ಕೆ ಹೊಂದಿಕೊಂಡಂತೆ ಇದ್ದು, ಉಭಯ ರಾಜ್ಯಗಳ ಬೆಸೆಯುವ ಅರಣ್ಯವಾಗಿದೆ.

ಒಡೆಯರ್ ಪಾಳ್ಯದ ಟಿಬೇಟಿಯನ್ ಶಿಬಿರದಲ್ಲಿ ಟಿಬೆಟಿಯನ್ ಸಮುದಾಯದವರೇ 113 ಅಡಿ ಎತ್ತರದ ಬೃಹತ್ ಎತ್ತರದ ಹಸನ್ಮುಖಿ ಧ್ಯಾನಸ್ಥ ಬುದ್ದನ ಪ್ರತಿಮೆ ನಿರ್ಮಾಣಕ್ಕೆ ಮುಂದಾಗಿದ್ದು, ಕಾಮಗಾರಿ ಬರದಿಂದ ಸಾಗುತ್ತಿದೆ.

ಪ್ರತಿಮೆ ಪ್ರತಿಷ್ಠಾಪಿಸುವ ಸಲುವಾಗಿ ಈಗಾಗಲೇ ಕಮಲದ ಹೂವಿನ ಆಕಾರದ ವೇದಿಕೆ ನಿರ್ಮಾಣ ಮಾಡಲಾಗಿದೆ. ಪ್ರಾಥಮಿಕ ಹಂತದ ಕಾಮಗಾರಿ ಮುಗಿಯುತ್ತಿದ್ದಂತೆ ಪಕ್ಕದ ಭೂತಾನ್ ದೇಶದಲ್ಲಿ ತಯಾರಿಸಲಾಗಿರುವ ಹಸನ್ಮುಖಿ ಧ್ಯಾನಸ್ಥ ಬುದ್ದನ ಪ್ರತಿಮೆಯನ್ನು ತಂದು ಪ್ರತಿಷ್ಠಾಪನೆ ಮಾಡಲಾಗುತ್ತಿದೆ.

ಬುದ್ದನ ಬೃಹತ್ ಮೂರ್ತಿಯ ಪ್ರತಿಷ್ಠಾಪನೆಗೆ ಕಳೆದ ವರ್ಷದ ಹಿಂದೆಯೇ ಭೂಮಿಪೂಜೆ ನೆರವೇರಿಸಲಾಗಿದ್ದು ಅಂದಿನಿಂದ ನಿರಂತರವಾಗಿ ಕಾಮಗಾರಿ ಭರದಿಂದ ಸಾಗಿದೆ. ಭೂತಾನ್ ದೇಶದಿಂದ ಪ್ರತಿಮೆಯನ್ನು ಇಲ್ಲಿಗೆ ತರಿಸಿಕೊಳ್ಳುವ ಕುರಿತು ಸಿದ್ದತೆಗಳು ನಡೆಯುತ್ತಿದೆ. ಮುಂದಿನ ಎರಡು ವರ್ಷದೊಳಗೆ ಪ್ರತಿಷ್ಠಾಪನಾ ಕಾರ್ಯ ಸಂಪೂರ್ಣವಾಗಿ ಮುಗಿಯಲಿದೆ .

ಟಿಬೇಟ್ ನಿಂದ ಕಳೆದ ಐದು ದಶಕಗಳ ಹಿಂದೆ ನಿರಾಶ್ರಿತರಾಗಿ ಭಾರತಕ್ಕೆ ಬಂದವರಿಗೆ ಕರ್ನಾಟಕದ ರಾಜ್ಯದ ಮುಂಡಗೋಡು, ಬೈಲುಗುಪ್ಪೆ ಹಾಗೂ ಒಡೆಯರಪಾಳ್ಯ ಬಳಿ ಸ್ಥಳ ನೀಡಿ ಶಿಬಿರ ನಿರ್ಮಿಸಿಕೊಡಲಾಯಿತು. ಅಂದಿನಿಂದ ಟಿಬೆಟಿಯನ್ ಸಂಸ್ಕೃತಿಯ ಜತೆಗೆ ಆಯಾ ಜಿಲ್ಲೆಗಳ ಆಚಾರ ವಿಚಾರಗಳಲ್ಲೂ ಭಾಗಿಯಾಗುವ ಮೂಲಕ ಟಿಬೆಟನ್ನರು ಸ್ಥಳೀಯರೊಂದಿಗೆ ಸೌಹಾರ್ದ ಯುವಾಗಿ ಬದುಕು ಸಾಗಿಸುತ್ತಿದ್ದಾರೆ.

ಚಾಮರಾಜನಗರ ಜಿಲ್ಲೆಯ ಒಡೆಯರ್ ಪಾಳ್ಯ ಸಮೀಪದ ಟಿಬೇಟಿಯನ್ ಶಿಬಿರದಲ್ಲಿರುವ ಬುದ್ಧ ಮಂದಿರದ ಬಳಿ ಬುದ್ದನ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಲಾಗುತ್ತಿದೆ. ತಾಮ್ರದಿಂದ ಪ್ರತಿಮೆಯನ್ನು ತಯಾರಿಸಿ ಬಳಿಕ ಚಿನ್ನದ ಬಣ್ಣದ ಲೇಪನ ಮಾಡಲಾಗುತ್ತದೆ. ಪ್ರತಿಮೆಯ ಭಾಗಗಳನ್ನು ತಯಾರಿಸಿ, ಇಲ್ಲಿಗೆ ತಂದು ಜೋಡಿಸಲಾಗುತ್ತದೆ. ಪ್ರತಿಮೆ ನಿರ್ಮಾಣಕ್ಕೆ ಅಂದಾಜು 6 ಕೋಟಿ ವೆಚ್ಚವಾಗಲಿದೆ ಎನ್ನಲಾಗುತ್ತಿದೆ.

ಒಡೆಯರಪಾಳ್ಯ ಬಳಿ ಇರುವ ನಿರಾಶ್ರಿತರ ಶಿಬಿರವು ಮೈಸೂರು ಜಿಲ್ಲೆಯ ಬೈಲುಗುಪ್ಪೆ, ಮುಂಡಗೋಡು ಮಾದರಿಯಲ್ಲಿ ಪ್ರವಾಸಿಸ್ಥಳವಾಗಿ ರೂಪುಗೊಂಡಿದೆ. ತಮಿಳುನಾಡಿನ ಸತ್ಯಮಂಗಲಂ ಹುಲಿ ಸಂರಕ್ಷಿತ ಪ್ರದೇಶ ಹಾಗೂ ಚಾಮರಾಜನಗರ ಜಿಲ್ಲೆಯ ಬಿಳಿಗಿರಿರಂಗನಾಥ ಸ್ವಾಮಿ ಹುಲಿರಕ್ಷಿತಾಣ್ಯಕ್ಕೆ ಹೊಂದಿಕೊಂಡಿರುವ ಶಿಬಿರವು ಸುತ್ತಲೂ ಬೆಟ್ಟಗುಡ್ಡಗಳಿಂದ ಆವೃತವಾಗಿದ್ದು, ಸ್ವಚಂದ ಪರಿಸರದ ನಡುವೆ ಕಂಗೊಳಿಸುತ್ತಿದೆ.

ಚಾಮರಾಜನಗರ ಜಿಲ್ಲೆ ಮಾತ್ರವಲ್ಲದೆ ಹೊರ ಜಿಲ್ಲೆಗಳ ಜನರನ್ನೂ ಇದು ಆಕರ್ಷಿಸುತ್ತಿದೆ. ಇಲ್ಲಿರುವ ಬುದ್ಧ ಮಂದಿರಗಳಲ್ಲಿ ಬಾಲ ಬೌದ್ಧ ಬಿಕ್ಕುಗಳು ಗಮನ ಸೆಳೆಯುತ್ತಾರೆ. ಒಡೆಯರ ಪಾಳ್ಯದಲ್ಲಿ ಐದು ಬೌದ್ಧ ದೇವಾಲಯಗಳಿದ್ದು ಪ್ರತಿ ಮಂದಿರದಲ್ಲೂ ಬುದ್ದನ ಮೂರ್ತಿಗಳಿವೆ. ಇಲ್ಲಿಗೆ ಬರುವ ಪ್ರವಾಸಿಗರು ಬುದ್ದನ ಮೂರ್ತಿಗಳ ಮುಂದೆ ಫೋಟೊ ಕ್ಲಿಕ್ಕಿಸಿಕೊಳ್ಳುತ್ತಾರೆ.

ವಾರಾಂತ್ಯದಲ್ಲಿ ಕುಟುಂಬ ಸಮೇತ ಭೇಟಿ ನೀಡುವ ಪ್ರವಾಸಿಗರು ದಿನವಿಡಿ ಶಿಬಿರದಲ್ಲಿರುವ ಬುದ್ಧ ಮಂದಿರಗಳಿಗೆ ಭೇಟಿ ನೀಡುತ್ತಾರೆ. ಒಂದು ದಿನದ ಪ್ರವಾಸಕ್ಕೆ ಇದು ಯೋಗ್ಯವಾದ ಸ್ಥಳ ಎನಿಸಿದೆ. ದಿನದಿಂದ ದಿನಕ್ಕೆ ಇಲ್ಲಿಗೆ ಆಗಮಿಸುತ್ತಿರುವವರ ಪ್ರವಾಸಿಗರ ಸಂಖ್ಯೆ ಏರಿಕೆಯಾಗುತ್ತಲೇ ಇದೆ. ಈಗಾಗಲೇ ಪ್ರವಾಸಿ ತಾಣವಾಗಿ ಹೊರಹೊಮ್ಮುತ್ತಿರುವ ಈ ಶಿಬಿರದಲ್ಲಿ ಬುದ್ದನ ಮೂರ್ತಿ ಪ್ರತಿಷ್ಠಾಪನೆಯಾದರೆ ಪ್ರವಾಸಿಗರ ಸಂಖ್ಯೆ ಇನ್ನಷ್ಟು ಹೆಚ್ಚಲಿದೆ. ರಾಜ್ಯದಲ್ಲೇ ಅತಿ ಎತ್ತರದ ಬುದ್ದನ ಪ್ರತಿಮೆ ಹೊಂದಿರುವ ಸ್ಥಳ ಎಂಬ ಹೆಗ್ಗಳಿಕೆಗೂ ಒಡೆಯರಪಾಳ್ಯದ ಶಿಬಿರ ಪಾತ್ರವಾಗಲಿದೆ.

# ರಾಮನಗರ ಜಿಲ್ಲೆಯ ನ್ಯಾಯಾಲಯದಲ್ಲಿ ಡಿ.14ರಂದು ರಾಷ್ಟ್ರೀಯ ಲೋಕ ಅದಾಲತ್

**ರಾಮನಗರ:** ಜಿಲ್ಲೆಯ ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ರಾಜಿ ಆಗಬಹುದಾದ ಪ್ರಕರಣಗಳನ್ನು 2024ರ ಡಿಸೆಂಬರ್ 14ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಗೊಳಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಅಧ್ಯಕ್ಷರಾದ ನ್ಯಾ. ಬಿ.ವಿ. ರೇಣುಕ ಅವರು ಕರೆ ನೀಡಿದ್ದಾರೆ.

ರಾಷ್ಟ್ರೀಯಕಾನೂನುಸೇವೆಗಳಪ್ರಾಧಿಕಾರಮತ್ತುಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ರಾಮನಗರ ಜಿಲ್ಲೆಯಾದ್ಯಂತ ಡಿಸೆಂಬರ್ 14ರ ಶನಿವಾರದಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ. ಈ ಆದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ ಎಂದವರು ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಏಕಕಾಲಕ್ಕೆ ಡಿಸೆಂಬರ್ 14ರಂದು ನಡೆಯುವ ಲೋಕ ಅದಾಲತ್‌ಗಾಗಿ ಡಿಸೆಂಬರ್ 13ರವರೆಗೆ ಪ್ರಕರಣಗಳನ್ನು ನೋಂದಣಿ ಮಾಡಿಕೊಳ್ಳಲಾಗುತ್ತದೆ. ರಾಮನಗರ ಜಿಲ್ಲಾ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಕಲಾಪ ನಡೆಯಲಿದೆ. ನ್ಯಾಯಾಲಯದ ಕಲಾಪಗಳಲ್ಲಿ ವಕೀಲರು ಭಾಗವಹಿಸಬಹುದು. ಅವಶ್ಯಕತೆ ಇದ್ದಲ್ಲಿ ಕಕ್ಷಿದಾರರನ್ನು ಆನ್‌ಲೈನ್ ಮೂಲಕ ಸಂಪರ್ಕಿಸಲಾಗುವುದು.

ಜಿಲ್ಲೆಯಲ್ಲಿ ಒಟ್ಟು 54,610 ಪ್ರಕರಣಗಳು ಬಾಕಿ ಇದ್ದು, ಅವುಗಳ ಪೈಕಿ ರಾಜಿಯಾಗಬಹುದಾದ ಎಲ್ಲಾ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿ ಪ್ರಕರಣಗಳನ್ನಾಗಿ ಪರಿಗಣಿಸಿ ಕೈಗೆತ್ತಿಕೊಳ್ಳಲಾಗುತ್ತದೆ. ವಕೀಲರು ಖುದ್ದಾಗಿ ಹಾಗೂ ಆನ್‌ಲೈನ್ ಮೂಲಕ ಭಾಗವಹಿಸಲು ಅವಕಾಶ ಮಾಡಿಕೊಡಲಾಗಿದೆ. ಎಲ್ಲರಿಗೂ ನ್ಯಾಯ ದೊರಕಿಸಿ ಕೊಡುವ ಉದ್ದೇಶದಿಂದ ಲೋಕ ಅದಾಲತ್‌ಗೆ ಚಾಲನೆ ನೀಡಲಾಗಿದೆ.

ರಾಜಿಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, ನೆಗೋಷಬಲ್ ಇನ್ಸ್‌ಟ್ರೂಮೆಂಟ್ ಕಾಯಿದೆ (ಎನ್‌ಐ ಆಕ್ಟ್) ಪ್ರಕರಣಗಳು, ಸಾಲ ವಸೂಲಾತಿ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣ, ಕಾರ್ಮಿಕ ವಿವಾದ ಪ್ರಕರಣಗಳು, ಗಣಿ ಮತ್ತು ಭೂ ವಿಜ್ಞಾನ ಪ್ರಕರಣಗಳು, ವೈವಾಹಿಕ ಪ್ರಕರಣಗಳು, ಭೂಸ್ವಾಧೀನ ಪ್ರಕರಣಗಳು, ಆಸ್ತಿ ವಿಭಾಗ ಪ್ರಕರಣಗಳು, ನಿರ್ಧಿಷ್ಟ ಪ್ರಕರಣಗಳು, ಜಾರಿ ಪ್ರಕರಣಗಳು, ಹಕ್ಕು ಘೋಷಣೆ, ಶಾಶ್ವತ ನಿರ್ಭಂದಕಾಜ್ಞೆ ಹಾಗೂ ಇತರೆ, ಜನನ ಪ್ರಮಾಣ ಪತ್ರಕ್ಕೆ ಸಂಬಂಧಿಸಿದ ಪ್ರಕರಣಗಳು, ಲಘು ವ್ಯಾಜ್ಯ ಪ್ರಕರಣಗಳು, ಇತರೆ ಕ್ರಿಮಿನಲ್ ಪ್ರಕರಣಗಳು, ಭೂಸ್ವಾಧೀನ ಜಾರಿ ಪ್ರಕರಣಗಳು, ಜೀವನಾಂಶ ಪ್ರಕರಣಗಳು, ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆಗೆ ಸಂಬಂಧಿಸಿದ ಪ್ರಕರಣಗಳು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.

ಸಾರ್ವಜನಿಕರು ರಾಷ್ಟ್ರೀಯ ಲೋಕ ಅದಾಲತ್‌ನ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿವೇತನ ಯೋಜನೆಯಡಿ ಅರ್ಜಿ

**ಕೋಲಾರ:** 2024-25ನೇ ಶೈಕ್ಷಣಿಕ ಸಾಲಿನಲ್ಲಿ 1 ರಿಂದ 8ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ರಾಜ್ಯದ ಮತೀಯ ಅಲ್ಪಸಂಖ್ಯಾತರ ಸಮುದಾಯ ವರ್ಗದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಭೌದ್ಧ, ಸಿಖ್, ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಯೋಜನೆಯಡಿ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ರಾಜ್ಯದ ನಿವಾಸಿಯಾಗಿರಬೇಕು, ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಕನಿಷ್ಠ 50% ಅಂಕಗಳನ್ನು ಪಡೆದಿರಬೇಕು, ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಕುಟುಂಬದ ಎಲ್ಲಾ ಮೂಲಗಳಿಂದ ವಾರ್ಷಿಕ ಆದಾಯವು ರೂ.1 ಲಕ್ಷಗಳನ್ನು ಮೀರಿರಬಾರದು, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ 1ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಹೊಸದಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು, ಕಳೆದ ವರ್ಷದಲ್ಲಿ ವಿದ್ಯಾರ್ಥಿವೇತನ ಮಂಜೂರಾದ ವಿದ್ಯಾರ್ಥಿಗಳ ಅರ್ಜಿಗಳನ್ನು Auto Renewal ಎಂದು ಪರಿಗಣಿಸಲಾಗುವುದರಿಂದ ಸದರಿ ವಿದ್ಯಾರ್ಥಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ಹಿಂದಿನ ವರ್ಷ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಿ ವಿದ್ಯಾರ್ಥಿವೇತನ ಮಂಜೂರಾಗದೇ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸತಕ್ಕದ್ದು, ಸದರಿ ಯೋಜನೆಯ ಪ್ರಯೋಜನ ಪಡೆಯಲು ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಆಗಿರುವ ಬಗ್ಗೆ ಹಾಗೂ NPCI Mapping Active ಆಗಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು, ರಾಜ್ಯ ಅಲ್ಪಸಂಖ್ಯಾತರ ಅರ್ಹ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ (ಎಸ್.ಎಸ್.ಪಿ) ಪೋರ್ಟಲ್ https://ssp.prematric.karnataka.gov.in/ನಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ನವೆಂಬರ್ 30 ರೊಳಗೆ ಸಲ್ಲಿಸಬಹುದು. www.domkarnataka.nic.in ಹಾಗೂ ಜಿಲ್ಲಾ ಕಛೇರಿಯ ದೂರವಾಣಿ ಸಂ08152-295257, ಅಲ್ಪಸಂಖ್ಯಾತರ ಜಿಲ್ಲಾ ಮಾಹಿತಿ ಕೇಂದ್ರ ಕೋಲಾರ-7760391781, ತಾಲ್ಲೂಕು ಮಾಹಿತಿ ಕೇಂದ್ರ ಬಂಗಾರಪೇಟೆ-9964944123, ತಾಲ್ಲೂಕು ಮಾಹಿತಿ ಕೇಂದ್ರ ಮಾಲೂರು-8970755461, ತಾಲ್ಲೂಕು ಮಾಹಿತಿ ಕೇಂದ್ರ ಶ್ರೀನಿವಾಸಪುರ-9535466160 ಮತ್ತು ತಾಲ್ಲೂಕು ಮಾಹಿತಿ ಕೇಂದ್ರ ಮುಳಬಾಗಿಲು-7899266051 ಸಂಪರ್ಕಿಸಬಹುದು.

## ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಸ್ಗರ್ ಮುನ್ನಾ ಅಭಿಮತ

# ತಾಯಿ ನೆನಪಿನಲ್ಲಿ ಗಿಡ ನೆಡುವುದು ಪುಣ್ಯದ ಕೆಲಸ

**ಚಾಮರಾಜನಗರ:** ಜೀವಜಗತ್ತಿನ ಕೇಂದ್ರಬಿಂಧು, ಜನ್ಮದಾತೆ ತಾಯಿಯ ಹೆಸರಿನಲ್ಲಿ ಗಿಡ ನೆಡುವುದು ಪುಣ್ಯದ ಕೆಲಸದ ಜೊತೆಗೆ ಉತ್ತಮವಾದ ಸಾಮಾಜಿಕ ಸೇವೆಯಾಗಿದೆ ಎಂದು ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ ಅವರು ತಿಳಿಸಿದರು.



ನಗರದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿಂದು ನೆಹರು ಯುವ ಕೇಂದ್ರ, ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಹಾಗೂ ನಗರದ ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ತಾಯಿ ಹೆಸರಿನಲ್ಲಿ ಗಿಡ ನೆಡುವ ಕಾರ್ಯಕ್ರಮ' ಉದ್ಘಾಟಿಸಿ ಅವರು ಮಾತನಾಡಿದರು.

ತಾಯಿಯ ಹೆಸರಿನಲ್ಲಿ ಗಿಡ ನೇಡುವುದು ಸಂತಸದ ಸಂಗತಿಯಾಗಿದೆ. ಪ್ರತಿಯೊಬ್ಬರು ಒಂದೊಂದು ಗಿಡ ನೆಡಬೇಕು. ಇದರಿಂದ ಜನರಿಗೆ ಉಸಿರಾಡಲು ಶುದ್ದವಾದ ಗಾಳಿ ದೊರೆಯಲಿದೆ. ಗಿಡ ಮರಗಳು ಬಿಸಿಲ ಬೇಗೆಯಲ್ಲಿ ಬೆಂದವರಿಗೆ ನೆರಳು, ಉತ್ತಮವಾದ ವಾತಾವರಣ ನೀಡಲಿದೆ. ಈ ನಿಟ್ಟಿನಲ್ಲಿ ಎಲ್ಲರೂ ಗಿಡಮರಗಳನ್ನು ರಕ್ಷಿಸಿ ತಮ್ಮ ಮಕ್ಕಳಂತೆ ಪೋಷಿಸಬೇಕು. ಗಿಡಮರಗಳನ್ನು ನಾವು ಬೆಳೆಸಿದರೆ ಮುಂದಿನ ದಿನಗಳಲ್ಲಿ ಗಿಡಮರಗಳು ನಮಗೆ ನೆರವಾಗಲಿವೆ ಎಂದರು.

ಸಮಾಜದಲ್ಲಿ ಹೆಣ್ಣು ಹಲವು ಜವಾಬ್ದಾರಿಗಳನ್ನು ನಿಭಾಯಿಸುವಂತೆ ಗಿಡ, ಮರಗಳಿಂದ ಪೀಠೋಪಕರಣ, ಅಲಂಕಾರಿಕ ಕಲಾಕೃತಿ, ಇನ್ನಿತರೆ ಮಾದರಿಗಳು ಬಹು ಜನೋಪಯೋಗಿಯಾಗಿವೆ. ಜಿಲ್ಲೆಯು ಶೇ. 52ರಷ್ಟು ಅರಣ್ಯ ಪ್ರದೇಶವನ್ನು ಹೊಂದಿದ್ದು, ಇದರಿಂದ ಉತ್ತಮ ಗಾಳಿ, ಮಳೆ, ಬೆಳೆ, ನೆರಳು ಲಭ್ಯವಾಗಲಿದೆ. ಪ್ರಮುಖವಾಗಿ ಗಿಡ ನೆಡುವ ಉದ್ದೇಶದಿಂದ ಪರಿಸರ ಸಂರಕ್ಷಣೆಯಾಗಲಿದೆ ಎಂದು ಅಸ್ಗರ್ ಮುನ್ನ ತಿಳಿಸಿದರು. ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಸಿ. ಮಂಜುನಾಥ ಪ್ರಸನ್ನ ಅವರು ಮಾತನಾಡಿ ತಾಯಂದಿರ ಹೆಸರಿನಲ್ಲಿ ಗಿಡ ನೆಡುವುದು ಆರೋಗ್ಯಕರ ಬೆಳವಣಿಗೆಯಾಗಿದೆ. ಕೆ.ಎಸ್. ನಿಸಾರ್ ಅಹಮ್ಮದ್ ಅವರ 'ಜೋಗದ ಸಿರಿ ಬೆಳಕಿನಲ್ಲಿ' ಗೀತೆಯಲ್ಲಿ ಪ್ರಕೃತಿ ಮಾತೆಯು ಪ್ರತಿನಿತ್ಯವು ನಿತ್ಯೋತ್ಸವ ಆಚರಿಸಿಕೊಳ್ಳುವ ಬಗ್ಗೆ ವಿವರಿಸಿದ್ದಾರೆ. ಪ್ರಕೃತಿ ನಮ್ಮೆಲ್ಲರಿಗೂ ಅವಶ್ಯ ಸಂಪನ್ಮೂಲವಾಗಿದೆ ಎಂದರು. ಗಿಡಮರಗಳನ್ನು ಹೆಚ್ಚಾಗಿರುವುದರಿಂದ ಬೆಂಗಳೂರು ಉದ್ಯಾನ ನಗರಿ, ಜೈಪುರವನ್ನು ಗುಲಾಬಿ ನಗರಗಳೆಂದು ಹೆಸರಿಸಲಾಗಿದೆ. ವಾತಾವರಣದಲ್ಲಿನ ಸಿ.ಎಫ್.ಸಿ ಕಾರ್ಬನ್ ತಡೆಗಟ್ಟಲು ಗಿಡಮರಗಳನ್ನು ಅತಿ ಹೆಚ್ಚಾಗಿ ಬೆಳೆಸುವುದು ಅಗತ್ಯವಾಗಿದೆ. ಮನೆಗೊಂದು-ಮರ, ಊರಿಗೊಂದು-ವನ ಮಾದರಿಯ ಸಸ್ಯ ಶ್ಯಾಮಲಾ ಯೋಜನೆಯ ಮುಖ್ಯ ಉದ್ದೇಶ ಸಸ್ಯಗಳನ್ನು ಬೆಳೆಸುವುದರೊಂದಿಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದೇ ಆಗಿದೆ. ಕಳೆದ ಬಾರಿ ಜಿಲ್ಲೆಯ ಶಾಲಾ-ಕಾಲೇಜುಗಳಲ್ಲಿ 2 ಸಾವಿರ ಗಿಡಗಳನ್ನು ನೆಡಲಾಗಿದೆ ಎಂದು ಮಂಜುನಾಥ ಪ್ರಸನ್ನ ಅವರು ತಿಳಿಸಿದರು.

ನಗರದ ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆಯ ಅಧ್ಯಕ್ಷರಾದ ಜಿ. ಬಂಗಾರು ಮಾತನಾಡಿ ತಾಯಿ ಹೆಸರಿನಲ್ಲಿ ಗಿಡ ನೆಡುವ ಕಾರ್ಯಕ್ರಮದಲ್ಲಿ ನಮ್ಮ ಸಂಸ್ಥೆಯು ಭಾಗಿಯಾಗಿರುವುದು ಹೆಮ್ಮೆಯ ವಿಚಾರವಾಗಿದೆ. ನಾವು ಎಷ್ಟೇ ದೊಡ್ಡ ವ್ಯಕ್ತಿಯಾದರೂ ತಾಯಿಯ ಸ್ಮರಣೆ ಮರೆಯಬಾರದು. ಅಮ್ಮನ ಪ್ರೀತಿಗೆ ಯಾರು ಸರಿಸಾಟಿಯಿಲ್ಲ. ಬಡ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಕಾನೂನು ಅರಿವು, ಇತರೆ ವಿಶೇ? ಕಾರ್ಯಕ್ರಮಗಳನ್ನು ಸಂಸ್ಥೆಯಿಂದ ನಡೆಸಲಾಗುತ್ತಿದೆ ಎಂದರು.

ಸರ್ಕಾರಿ ಪದವಿ ಪೂರ್ವ ಬಾಲಕರ ಕಾಲೇಜಿನ ಪ್ರಾಂಶುಪಾಲರಾದ ಸೋಮಣ್ಣ, ಉಪನ್ಯಾಸಕರಾದ ಟಿ. ಮಧು, ಸತ್ಯೇಂದ್ರನಾಥ, ಪ್ರೇಮ, ನೆಹರು ಯುವ ಕೇಂದ್ರದ ಸಹನ, ಇತರರು ಕಾರ್ಯಕ್ರಮದಲ್ಲಿ ಇದ್ದರು. ಕಾರ್ಯಕ್ರಮಕ್ಕೂ ಮೊದಲು ಕಾಲೇಜಿನ ಆವರಣದಲ್ಲಿ ಗಣ್ಯರು ಗಿಡಗಳನ್ನು ನೆಟ್ಟು ನೀರೆರೆದರು.


**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಕಾರ್ಯಪಾಲಕ ಅಭಿಯಂತರರ ಕಚೇರಿ, ಕೆಂಗೇರಿ ವಿಭಾಗ, ರಾ.ರಾ.ನಗರ ವಲಯ, ಬೃಬೆಂಮಪಾ ಕಟ್ಟಡ, ಸಿ.ಎ.ನಂ.03, 1ನೇ ಮುಖ್ಯರಸ್ತೆ, ಹೊರ ವರ್ತುಲ ರಸ್ತೆ, ಕೊಮ್ಮಘಟ್ಟ ರಸ್ತೆ, ಕೆಂಗೇರಿ ಉಪನಗರ, ಬೆಂಗಳೂರು-560 060.

**ಸಂ: ಕಾಪಾಅ/ಕೆಂವಿ/ಟೆಂಡರ್/11/2024-25** **ದಿನಾಂಕ: 07.11.2024**

**ಅಲ್ಪಾವಧಿ ಟೆಂಡರ್‌ಗಾಗಿ ಆಹ್ವಾನ (ಐಎಫ್‌ಟಿ)**
**(ಜಿಒಕೆ ಕೆಪಿಪಿ ಪೋರ್ಟಲ್ ಮೂಲಕ ಮಾತ್ರ)**

ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ, ಬೃಬೆಂಮಪಾ, ಬೆಂಗಳೂರು, ಇವರು ಅರ್ಹ ಟೆಂಡರ್‌ದಾರರಿಂದ ಈ ಕೆಳಕಂಡ ನಿರ್ಮಾಣದ ಕಾಮಗಾರಿಗಳಿಗಾಗಿ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

**ಏಕ ಲಕೋಟೆ ಪದ್ಧತಿ – 2ನೇ ಕರೆ**

| ಕ್ರ. ಸಂ. | ಕಾಮಗಾರಿಯ ಹೆಸರು |
|---|---|
| 1 | ವಾರ್ಡ್ ನಂ.28 ಹೇರೋಹಳ್ಳಿಯ ತುಂಗಾನಗರ ಬಲಭಾಗದಲ್ಲಿ ಮತ್ತು ಸುತ್ತಮುತ್ತಲ ಪ್ರದೇಶದಲ್ಲಿ ರಸ್ತೆಗಳು, ಒಳಚರಂಡಿಗಳ ಸುಧಾರಣೆ ಹಾಗೂ ಕಲ್ವರ್ಟ್‌ಗಳ ನಿರ್ಮಾಣ. **ಟೆಂಡರ್‌ಗಿಟ್ಟ ಅಂದಾಜು ಮೊತ್ತ:** ರೂ.33.89 ಲಕ್ಷಗಳು. **ಇ.ಎಂ.ಡಿ:** ರೂ.67,800/-. **ಕಾಮಗಾರಿ ಮೀಸಲಾತಿ:** ಇತರರು. |
| 2 | ವಾರ್ಡ್ ನಂ.32 ಕೆಂಗೇರಿಯ ದುಬಾಸಿಪಾಳ್ಯ, ಶಿರ್ಕೆ ಮತ್ತು ಎಂ.ಟಿ.ಎಸ್. ಬಡಾವಣೆ ಸುತ್ತಮುತ್ತಲ ಪ್ರದೇಶದಲ್ಲಿ ರಸ್ತೆಗಳು, ಒಳಚರಂಡಿಗಳ ಸುಧಾರಣೆ ಹಾಗೂ ಕಲ್ವರ್ಟ್‌ಗಳ ನಿರ್ಮಾಣ. **ಟೆಂಡರ್‌ಗಿಟ್ಟ ಅಂದಾಜು ಮೊತ್ತ:** ರೂ.42.35 ಲಕ್ಷಗಳು. **ಇ.ಎಂ.ಡಿ:** ರೂ.84,800/-. **ಕಾಮಗಾರಿ ಮೀಸಲಾತಿ:** ಇತರರು. |
| 3 | ವಾರ್ಡ್ ನಂ.33 ಹೆಮ್ಮಿಗೆಪುರದ ಶಂಕರಪ್ಪ ಬಡಾವಣೆ ಮತ್ತು ಬಿಸಿಎಂಸಿ ಬಡಾವಣೆ ಸುತ್ತಮುತ್ತಲ ಪ್ರದೇಶದಲ್ಲಿ ರಸ್ತೆಗಳು, ಒಳಚರಂಡಿಗಳ ಸುಧಾರಣೆ ಹಾಗೂ ಕಲ್ವರ್ಟ್‌ಗಳ ನಿರ್ಮಾಣ. **ಟೆಂಡರ್‌ಗಿಟ್ಟ ಅಂದಾಜು ಮೊತ್ತ:** ರೂ.33.88 ಲಕ್ಷಗಳು. **ಇ.ಎಂ.ಡಿ:** ರೂ.67,800/-. **ಕಾಮಗಾರಿ ಮೀಸಲಾತಿ:** ಇತರರು. |
| 4 | 110 ಗ್ರಾಮಗಳ ವ್ಯಾಪ್ತಿಯಲ್ಲಿನ ವಾರ್ಡ್ ನಂ.33 ಹೆಮ್ಮಿಗೆಪುರದಲ್ಲಿ ಹೊಸ ಕೊಳವೆಬಾವಿ ಕೊರೆಯುವುದು, ಆರ್‌ಓ ಘಟಕಗಳ ದುರಸ್ತಿ ಹಾಗೂ ನಿರ್ವಹಣೆ. **ಟೆಂಡರ್‌ಗಿಟ್ಟ ಅಂದಾಜು ಮೊತ್ತ:** ರೂ.15.67 ಲಕ್ಷಗಳು. **ಇ.ಎಂ.ಡಿ:** ರೂ.39,200/-. **ಕಾಮಗಾರಿ ಮೀಸಲಾತಿ:** ಇತರರು. |

**ವೇಳಾಪಟ್ಟಿ:** 1) ಟೆಂಡರ್ ದಾಖಲೆಗಳನ್ನು ಇ-ಪೋರ್ಟಲ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ: **12.11.2024, ಸಂಜೆ 4.00 ರಿಂದ.** (2) ಟೆಂಡರ್ ಸ್ವೀಕರಿಸಲು ಕೊನೆಯ ದಿನಾಂಕ: **20.11.2024 ರ ಸಂಜೆ 4:00 ಗಂಟೆಯವರೆಗೆ.** (3) ಬಿಡ್‌ಗಳನ್ನು ತೆರೆಯುವ ದಿನಾಂಕ: **21.11.2024ರ ಸಂಜೆ 4:00 ಗಂಟೆಗೆ.** (4) ಟೆಂಡರ್‌ಗಳ ಸಿಂಧುತ್ವ: **ಟೆಂಡರ್ ಸಲ್ಲಿಸುವ ಗಡುವು ಮುಗಿದ ನಂತರ 6 ತಿಂಗಳು.** (5) ಬಿಡ್ ಸಿಂಧುತ್ವ: **90 ದಿವಸಗಳು.**

ಹೆಚ್ಚಿನ ವಿವರಗಳಿಗಾಗಿ ಮೇಲ್ಕಂಡ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಅಥವಾ ಕೆಪಿಪಿ ಪೋರ್ಟಲ್ ವೆಬ್‌ಸೈಟ್ https://kppp.karnataka.gov.in ಸಂಪರ್ಕಿಸಬಹುದು.

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಕೆಂಗೇರಿ ವಿಭಾಗ, ಬೃಬೆಂಮಪಾ.**

## ಮಕ್ಕಳ ಮಾರಾಟ ಶಿಕ್ಷಾರ್ಹ ಅಪರಾಧ

**ಬೆಂಗಳೂರು:** ಜಿಲ್ಲಾ ಮಕ್ಕಳ ನಿರ್ದೇಶನಾಲಯದ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವು ಕೂಡ ನವೆಂಬರ್-2024ರ ಮಾಹೆಯನ್ನು ಅಂತರಾಷ್ಟ್ರೀಯ ದತ್ತು ಮಾಸಾಚರಣೆಯಾಗಿ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ಪೂರ್ವ ಕೆ.ಆರ್.ಪುರಂ ವತಿಯಿಂದ ಮಕ್ಕಳ ಮಾರಾಟ ಅಪರಾಧದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಮಕ್ಕಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲನ್ಯಾಯ ಕಾಯ್ದೆ-2015 ಸೆಕ್ಷನ್ 80 ಮತ್ತು 81ರ ಅನ್ವಯ 5 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ ರೂ.1.00 ಲಕ್ಷಗಳವರೆಗೆ ದಂಡ ವಿಧಿಸಬಹುದು. ಈ ಅಪರಾಧದಲ್ಲಿ ಆಸ್ಪತ್ರೆಯವರು ಶಾಮೀಲಾದರೆ ಶಿಕ್ಷೆಯ ಅವಧಿ 3 ವ?ಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆ'' ಮಾಡಬಹುದಾಗಿದೆ. ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಮಾಹಿತಿಯು ಕಂಡು ಬಂದಲ್ಲಿ ಸಾರ್ವಜನಿಕರು ಜಿಲ್ಲಾ ಮಕ್ಕಳ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ಪೂರ್ವ ಕೆ.ಆರ್.ಪುರಂ ದೂರವಾಣಿ ಸಂಖ್ಯೆ: 080-29904132ನ್ನು ಸಂಪರ್ಕಿಸುವಂತೆ ಬೆಂಗಳೂರು ಪೂರ್ವ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ವಿತರಣೆ

ಬೆಂಗಳೂರು: ಸರ್ವೋಚ್ಚ ನ್ಯಾಯಾಲಯವು ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ (ಬಿ.ಪಿ.ಎಲ್) ನೀಡಲು ಆದೇಶಿಸಿದ್ದು, ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭವಾಗಿರುತ್ತದೆ. ಆದ್ದರಿಂದ ಆದ್ಯತಾ ಪಡಿತರ ಚೀಟಿ ಹೊಂದಿಲ್ಲದ ಇ-ಶ್ರಮ್ ನೋಂದಾಯಿತ ಎಲ್ಲಾ ಅರ್ಹ ಕಾರ್ಮಿಕರು ನಿಮ್ಮ ಹತ್ತಿರದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯನ್ನು ಸಂಪರ್ಕಿಸುವುದು. ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ದೂರವಾಣಿ ಸಂಖ್ಯೆ: 1800-425-9339 ಅಥವಾ ಸಹಾಯವಾಣಿ 1967ಕ್ಕೆ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.30 ಗಂಟೆಯವರೆವಿಗೂ ಸಂಪರ್ಕಿಸುವಂತೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನ ಸಂಪರ್ಕ ಸಭೆ

**ಕೋಲಾರ:** ಕೋಲಾರ ಜಿಲ್ಲಾ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರವರು ನವೆಂಬರ್ 13, 2024 ಬುಧವಾರದಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಬಂಗಾರಪೇಟೆ ತಾಲ್ಲೂಕಿನ ಸಂಬಂಧಿಸಿದಂತೆ ಬಂಗಾರಪೇಟೆ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಂಡಿದ್ದಾರೆ. ಸರ್ಕಾರಿ ಕಛೇರಿಗಳಲ್ಲಿ ಕೆಲಸ ಮಾಡಿಕೊಡಲು ವಿಳಂಬ/ನಿರ್ಲಕ್ಷ್ಯ ಅಥವಾ ಸದರಿ ಅಧಿಕಾರಿ/ಸಿಬ್ಬಂದಿಯು ದುರಾಡಳಿತದಲ್ಲಿ ತೊಡಗಿದ್ದಲ್ಲಿ ಅಂತಹ ಅಧಿಕಾರಿ/ಸಿಬ್ಬಂದಿಗಳ ಮೇಲೆ ಲಿಖಿತ ಅಹವಾಲುಗಳನ್ನು ಸ್ವೀಕರಿಸಲಿದ್ದು, ಸಾರ್ವಜನಿಕರು ದೂರುಗಳಿದ್ದಲ್ಲಿ ಸದರಿ ದಿನಾಂಕದಂದು ಲಿಖಿತ ದೂರುಗಳನ್ನು ದ್ವಿಪ್ರತಿಯಲ್ಲಿ ನೀಡಬಹುದು ಎಂದು ಕೋಲಾರ ಕರ್ನಾಟಕ ಲೋಕಾಯುಕ್ತದ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ಬೆಂಗಳೂರು:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಅವರು ನವೆಂಬರ್ 9, 10 ಹಾಗೂ 11 ರಂದು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಅತಿಥಿ ಉಪನ್ಯಾಸಕ ಹುದೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರಿನ ಕೆ.ಆರ್. ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ 2024-25ನೇ ಸಾಲಿನ ಶೈಕ್ಷಣಿಕ ವ?ಕ್ಕೆ ಪರಿಸರ ವಿಜ್ಞಾನ ವಿ?ಯವನ್ನು (ಐದನೇ ಸೆಮಿಸ್ಟರ್ ನ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ) ಬೋಧಿಸಲು ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಸೂಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. M.Sc in Environmental Science / Life Science ಹೊಂದಿರುವ ಆಸಕ್ತ ಅಭ್ಯರ್ಥಿಗಳು www.uvee.karnataka.gov.in ನಿಂದ ನಿಗಧಿತ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಅರ್ಜಿಯನ್ನು ಸಂಬಂಧಿತ ದಾಖಲೆಗಳ ಪ್ರತಿಗಳೊಂದಿಗೆ ಕುಲಸಚಿವರ ಕಛೇರಿ, ಯುವಿಸಿಇ, ಕೆ.ಆರ್ ವೃತ್ತ ಇಲ್ಲಿಗೆ ನವೆಂಬರ್ 20 ರೊಳಗೆ ಕುಲಸಚಿವರ ಕಛೇರಿಗೆ ಸಲ್ಲಿಸಬಹುದು. ನಿಗಧಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಕುಲಸಚಿವರ ಕಛೇರಿಯನ್ನು ಸಂಪರ್ಕಿಸಬಹುದು. ಸಂದರ್ಶನದ ದಿನಾಂಕವನ್ನು ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು ಅಥವಾ ಅರ್ಹ ಅಭ್ಯರ್ಥಿಗಳಿಗೆ ನೇರವಾಗಿ ತಿಳಿಸಲಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಹಿಂಗಾರು, ಬೇಸಿಗೆ ಹಂಗಾಮಿಗೆ ಫಸಲ್ ಬಿಮಾ ಯೋಜನೆ ಅನುಷ್ಠಾನ

**ಚಾಮರಾಜನಗರ:** ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು 2024-25ರ ಹಿಂಗಾರು ಹಾಗೂ ಬೇಸಿಗೆ ಹಂಗಾಮಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು ಹೋಬಳಿ, ಗ್ರಾಮ ಪಂಚಾಯಿತಿ ಮತ್ತು ಬೆಳೆಗಳ ಬಗ್ಗೆ ಸರ್ಕಾರ ಆದೇಶ ಹೊರಡಿಸಿದೆ.

ಯೋಜನೆಯಡಿ ಹಿಂಗಾರು ಹಂಗಾಮಿನಲ್ಲಿ ಮಳೆ ಆಶ್ರಯದ ಹುರುಳಿ ಬೆಳೆಯನ್ನು ವಿಮೆಗೆ ಒಳಪಡಿಸಿ ಗ್ರಾಮ ಪಂಚಾಯಿತಿ ಮಟ್ಟಕ್ಕೆ ಅಧಿಸೂಚಿಸಲಾಗಿದೆ.

ಹಿಂಗಾರು ಹಂಗಾಮಿಗೆ ಹೋಬಳಿ ಮಟ್ಟದಲ್ಲಿ ಚಾಮರಾಜನಗರ ತಾಲೂಕಿನ ಕಸಬಾ ಹೋಬಳಿಯಲ್ಲಿ ಮಳೆ ಆಶ್ರಿತ ಕಡಲೆ, ಮುಸುಕಿನಜೋಳ, ಸಂತೇಮರಹಳ್ಳಿ ಹೋಬಳಿಯಲ್ಲಿ ಮಳೆ ಆಶ್ರಿತ ಕಡಲೆ, ಹರದನಹಳ್ಳಿ ಹೋಬಳಿಯಲ್ಲಿ ಟೊಮೆಟೋ (ಅನಿರ್ದಿಷ್ಟ) ಬೆಳೆ ವಿಮೆ ವ್ಯಾಪ್ತಿಗೆ ಒಳಪಡಲಿದೆ.



ಗುಂಡ್ಲುಪೇಟೆ ತಾಲೂಕಿನ ಕಸಬಾ ಹೋಬಳಿಯಲ್ಲಿ ನೀರಾವರಿ ಆಶ್ರಿತ ಈರುಳ್ಳಿ, ಮಳೆಆಶ್ರಿತ ಕಡಲೆ, ಮುಸುಕಿನಜೋಳ, ಟೊಮೆಟೋ (ಅನಿರ್ದಿಷ್ಟ), ತೆರಕಣಾಂಬಿ ಹೋಬಳಿಯಲ್ಲಿ ಮಳೆಆಶ್ರಿತ ಕಡಲೆ, ಮುಸುಕಿನಜೋಳ, ನೀರಾವರಿ ಆಶ್ರಿತ ಮುಸುಕಿನಜೋಳ, ಈರುಳ್ಳಿ, ಟೊಮೆಟೋ (ಅನಿರ್ದಿಷ್ಟ), ಬೇಗೂರು ಹೋಬಳಿಯಲ್ಲಿ ಮಳೆಆಶ್ರಿತ ಕಡಲೆ, ಟೊಮೆಟೋ ಅನಿರ್ದಿಷ್ಟ, ಹಂಗಳ ಹೋಬಳಿಯಲ್ಲಿ ಮಳೆಆಶ್ರಿತ ಕಡಲೆ, ಮುಸುಕಿನಜೋಳ, ನೀರಾವರಿ ಆಶ್ರಿತ ಈರುಳ್ಳಿ ಹಾಗೂ ಟೊಮೆಟೋ (ಅನಿರ್ದಿಷ್ಟ) ಬೆಳೆ ವಿಮೆ ವ್ಯಾಪ್ತಿಗೆ ಒಳಪಡಲಿದೆ.

ಕೊಳ್ಳೇಗಾಲ ತಾಲೂಕಿನ ಕಸಬಾ ಹೋಬಳಿಯಲ್ಲಿ ನೀರಾವರಿ ಆಶ್ರಿತ ಭತ್ತ, ಮುಸುಕಿನಜೋಳ, ಪಾಳ್ಯ ಹೋಬಳಿಯಲ್ಲಿ ನೀರಾವರಿ ಆಶ್ರಿತ ಮುಸುಕಿನಜೋಳ ಬೆಳೆ ವಿಮೆ ವ್ಯಾಪ್ತಿಗೆ ಒಳಪಡಲಿದೆ.

ಹನೂರು ತಾಲೂಕಿನ ಹನೂರು ಹೋಬಳಿಯಲ್ಲಿ ನೀರಾವರಿ ಆಶ್ರಿತ ಮುಸುಕಿನಜೋಳ, ಮಳೆಆಶ್ರಿತ ಕಡಲೆ, ಲೊಕ್ಕನಹಳ್ಳಿ ಹೋಬಳಿಯಲ್ಲಿ ನೀರಾವರಿ ಆಶ್ರಿತ ಮುಸುಕಿನಜೋಳ, ರಾಮಾಪುರ ಹೋಬಳಿಯಲ್ಲಿ ನೀರಾವರಿ ಆಶ್ರಿತ ಮುಸುಕಿನಜೋಳ ಬೆಳೆ ವಿಮೆ ವ್ಯಾಪ್ತಿಗೆ ಒಳಪಡಲಿದೆ.

ಬೇಸಿಗೆ ಹಂಗಾಮಿಗೆ ಹೋಬಳಿ ಮಟ್ಟದಲ್ಲಿ ಗುಂಡ್ಲುಪೇಟೆ ತಾಲೂಕಿನ ಕಸಬಾ ಹೋಬಳಿ, ಬೇಗೂರು ಹಾಗೂ ತೆರಕಣಾಂಬಿ ಹೋಬಳಿಯಲ್ಲಿ ಟೊಮೆಟೋ (ಅನಿರ್ದಿ?ಟ) ಬೆಳೆಯು ವಿಮೆ ವ್ಯಾಪ್ತಿಗೆ ಒಳಪಡಲಿದೆ. ಕೊಳ್ಳೇಗಾಲ ತಾಲೂಕಿನ ಕಸಬಾ ಹೋಬಳಿ ಹಾಗೂ ಪಾಳ್ಯ ಹೋಬಳಿಯಲ್ಲಿ ನೀರಾವರಿ ಆಶ್ರಿತ ಭತ್ತ ಬೆಳೆ ವಿಮೆ ವ್ಯಾಪ್ತಿಗೆ ಒಳಪಡಲಿದೆ.

2024-25ನೇ ಸಾಲಿನಿಂದ ಬೆಳೆ ವಿಮೆ ನೋಂದಣಿಗಾಗಿ ರೈತರು ಕಡ್ಡಾಯವಾಗಿ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡಿದ್ದು, ಫ್ರೂಟ್ಸ್ ಐಡಿ ಹೊಂದಿರುವುದು ಕಡ್ಡಾಯವಾಗಿದೆ. ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ/ಖಾತೆ/ಪಾಸ್ ಪುಸ್ತಕ/ಕಂದಾಯ ರಶೀದಿಯನ್ನು ನೀಡಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ವ್ಯಾಪ್ತಿಗೆ ಒಳಪಡುವ ರೈತ ಸಂಪರ್ಕ ಕೇಂದ್ರ, ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಬ್ಯಾಂಕುಗಳನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

### ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸೂಚನೆ

# ಜನನ-ಮರಣ ಮಾಹಿತಿ ನೋಂದಾಯಿಸಿ

**ಚಾಮರಾಜನಗರ:** ಜಿಲ್ಲೆಯಲ್ಲಿ ಘಟಿಸುವ ಪ್ರತಿಯೊಂದು ಜನನ-ಮರಣ ಘಟನೆಗಳ ಮಾಹಿತಿಯನ್ನು ಯಾವುದೇ ವಿಳಂಬಕ್ಕೆ ಅವಕಾಶವಾಗದಂತೆ ಸಕಾಲದಲ್ಲಿ ನೊಂದಣಿ ಮಾಡಲು ಪರಿಣಾಮಕಾರಿ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಾಗರಿಕ ನೊಂದಣಿ ಪದ್ಧತಿಯಡಿ ಜನನ-ಮರಣಗಳ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿಯವರನ್ನು ಜನನ-ಮರಣ ಉಪ ನೊಂದಣಾಧಿಕಾರಿಯನ್ನಾಗಿ ನೇಮಿಸಲಾಗಿದೆ. ಆಯಾ ಭಾಗದ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಜನನ-ಮರಣ ನೊಂದಣಿ ಅಧಿನಿಯಮ-1969ರನ್ವಯ ತಮ್ಮ ಕ್ಷೇತ್ರವ್ಯಾಪ್ತಿಯಲ್ಲಿ ಜರುಗುವ ಪ್ರತಿಯೊಂದು ಜನನ-ಮರಣಗಳ ಮಾಹಿತಿಯನ್ನು 21 ದಿನದೊಳಗೆ ನೊಂದಾಯಿಸುವ ಜವಾಬ್ದಾರಿಯನ್ನು ನಿಗದಿತ ಕಾಲಮಿತಿಯಲ್ಲಿ ನಿರ್ವಹಿಸಬೇಕು. ಯಾವುದೇ ವಿಳಂಬಕ್ಕೆ ಆಸ್ಪದವಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಯವರು ಸೂಚಿಸಿದರು.

ಪ್ರಸ್ತುತ ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಜಿಲ್ಲಾ ಆಸ್ಪತ್ರೆ, ಸಾರ್ವಜನಿಕ ಆಸ್ಪತ್ರೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳು ಮತ್ತು ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಗ್ರಾಮಾಡಳಿತ ವೃತ್ತಗಳು, ಗ್ರಾಮ ಪಂಚಾಯಿತಿ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ನಾಗರಿಕ ನೊಂದಣಿ ಘಟಕಗಳಾಗಿ ಕಾರ್ಯನಿರ್ವಹಿಸುತ್ತಿವೆ. ಈ ಎಲ್ಲಾ ಘಟಕಗಳ ಉಪ ನೊಂದಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಜರುಗುವ ಪ್ರತಿಯೊಂದು ಜನನ-ಮರಣ ನೊಂದಣಿಯಲ್ಲಿ ಯಾವುದೇ ವ್ಯತ್ಯಾಸಗಳಾಗದಂತೆ ನಿಗಾ ವಹಿಸುವಂತೆ ಕಟ್ಟುನಿಟ್ಟಿನ ಎಚ್ಚರಿಕೆ ವಹಿಸಬೇಕು ಎಂದರು.

ಮಗು ಜನಿಸಿದ ತಕ್ಷಣ ಉಚಿತ ಜನನ ನೊಂದಣಿ ಪ್ರಮಾಣಪತ್ರದೊಂದಿಗೆ ಮಗುವನ್ನು ತಾಯಿಯೊಂದಿಗೆ ಮನೆಗೆ ಕಳುಹಿಸುವ ಸದುದ್ದೇಶದ ಚಿಂತನೆ ನಡೆಸಿ ಸರ್ಕಾರವು ಜನನ-ಮರಣ ನೊಂದಣಿಗಾಗಿ 'ಈ-ಜನ್ಮ' ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದೆ. ತಂತ್ರಾಂಶದಲ್ಲಿ ನೊಂದಣಿಗೆ ಸಂಬಂಧಿಸಿದ ರಾಜ್ಯ, ಜಿಲ್ಲಾ, ತಾಲೂಕು, ಹೋಬಳಿ ಹಾಗೂ ಗ್ರಾಮಮಟ್ಟದ ಮಾಹಿತಿಗಳನ್ನು ಆನ್ ಲೈನ್‌ನಲ್ಲಿಯೇ ಪಡೆಯಲು ಸಾಧ್ಯವಾಗಲಿದೆ. ಇದರ ಸದ್ಬಳಕೆ ಪರಿಣಾಮಕಾರಿಯಾಗಿ ಆಗಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಜಿಲ್ಲೆಯಲ್ಲಿ ಕಾಡಂಚಿನ ಪ್ರದೇಶಗಳು ಹಾಗೂ ಹಾಡಿ-ಪೋಡುಗಳು ಸಾಕಷ್ಟು ಸಂಖ್ಯೆಯಲ್ಲಿದ್ದು, ಜನನ ಹಾಗೂ ಮರಣ ನೊಂದಣಿ ಬಗ್ಗೆ ಆದಿವಾಸಿಗಳಿಗೆ ಹೆಚ್ಚಿನ ಅರಿವು ಮೂಡಿಸಬೇಕು. ಜನನ, ಮರಣಗಳ ಕುರಿತ ನಾಗರಿಕ ನೊಂದಣಿ ಪದ್ಧತಿಯನ್ನು ಉತ್ತಮಪಡಿಸಲು ಎಲ್ಲಾ ಹಂತದಲ್ಲಿ ಅಧಿಕಾರಿಗಳಿಗೆ ತರಬೇತಿ ನೀಡಬೇಕು. ನಾಗರಿಕ ನೊಂದಣಿ ಪದ್ಧತಿಯಡಿ ನೊಂದಣಿ ಪ್ರಗತಿಗಾಗಿ ಗ್ರಾಮಪಂಚಾಯಿತಿ ಮಟ್ಟದಲ್ಲಿ ತರಬೇತಿ ಹಾಗೂ ಕಾರ್ಯಾಗಾರಗಳನ್ನು ಆಯೋಜಿಸಬೇಕು. ಜನನ, ಮರಣ ನೊಂದಣಿ ಕುರಿತ ಮಾರ್ಗಸೂಚಿಗಳನ್ನು ಮುದ್ರಿಸಿ, ಕಿರುಕೈಪಿಡಿ ತಯಾರಿಸಿ ಎಲ್ಲಾ 130 ಗ್ರಾಮ ಪಂಚಾಯಿತಿಗಳಿಗೆ, ನಗರ, ಸ್ಥಳೀಯ ಸಂಸ್ಥೆಗಳಿಗೆ ವಿತರಿಸುವಂತೆ ನಿರ್ದೇಶನ ನೀಡಿದರು.

ಪ್ರತಿ ತಿಂಗಳು ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ಜಿಲ್ಲಾಮಟ್ಟದಲ್ಲಿ ನಡೆಯುವ ತ್ರೈಮಾಸಿಕ ಸಭೆಗೆ ವರದಿ ಸಲ್ಲಿಸಬೇಕು. ಸಂಬಂಧಪಟ್ಟ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಬೇಕು. ಜನನ-ಮರಣ ನೊಂದಣಿ ಕುರಿತು ಒಂದು ತಿಂಗಳೊಳಗೆ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಸಭೆ ನಡೆಸಿ, ಸವಿವರ ಮಾಹಿತಿ ಪಡೆದು ಜಿಲ್ಲಾಡಳಿತಕ್ಕೆ ವರದಿ ನೀಡುವಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಉಪವಿಭಾಗಾಧಿಕಾರಿ ಮಹೇಶ್, ನಗರಸಭೆ ಪೌರಾಯುಕ್ತರಾದ ಎಸ್.ವಿ. ರಾಮದಾಸ್, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಪ್ರಮೋದ್‌ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಸುಧಾ, ತಹಶೀಲ್ದಾರ್ ಗಿರಿಜ, ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



### 18ರಂದು ಕನಕದಾಸರ ಜಯಂತಿ

**ಚಾಮರಾಜನಗರ ಜಿಲ್ಲಾಕೇಂದ್ರದಲ್ಲಿ ನವೆಂಬರ್ 18ರಂದು ಭಕ್ತಶ್ರೇಷ್ಠ ಕನಕದಾಸರ ಜಯಂತಿ ಕಾರ್ಯಕ್ರಮವನ್ನು ಎಲ್ಲರ ಸಹಕಾರದೊಂದಿಗೆ ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಯಿತು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಕನಕದಾಸರ ಜಯಂತಿ ಆಚರಣೆ ಸಂಬಂಧ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು. ಭಕ್ತಶ್ರೇಷ್ಠ ಕನಕದಾಸರ ಜಯಂತಿ ಅಂಗವಾಗಿ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ವರನಟ ಡಾ. ರಾಜ್ ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಕಾರ್ಯಕ್ರಮ ನಡೆಯಲಿದೆ. ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಪ್ರವಾಸಿ ಮಂದಿರದಿಂದ ಹೊರಡುವ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿ ಜಿಲ್ಲಾಡಳಿತ ಭವನ ತಲುಪಲಿದೆ. ಅಲಂಕೃತ ಬೆಳ್ಳಿರಥದಲ್ಲಿರಿಸಿದ ಕನಕದಾಸರ ಭಾವಚಿತ್ರದ ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸಲಿವೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿಯವರು ತಿಳಿಸಿದರು. ಆಹ್ವಾನ ಪತ್ರಿಕೆಯನ್ನು ಶಿಷ್ಟಾಚಾರವೇ ಮುದ್ರಿಸಿ ಎಲ್ಲಾ ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಮಂತ್ರಿಸಬೇಕು. ಕನಕದಾಸರ ಮಾಹಿತಿಯುಳ್ಳ ಕರಪತ್ರಗಳನ್ನು ಸಾರ್ವಜನಿಕರಿಗೆ ವಿತರಿಸಬೇಕು. ವೇದಿಕೆ ಕಾರ್ಯಕ್ರಮದ ಬ್ಯಾಕ್‌ಡ್ರಾಪ್ ಆಕರ್ಷಕವಾಗಿ ಮುದ್ರಣವಾಗಬೇಕು. ಕನಕದಾಸರ ಬಗ್ಗೆ ಹೆಚ್ಚಿನ ಮಾಹಿತಿ ಇರುವ ಸಂಪನ್ಮೂಲ ವ್ಯಕ್ತಿಯವರಿಂದ ಮುಖ್ಯ ಭಾಷಣ ಕಾರ್ಯಕ್ರಮದಲ್ಲಿ ಇರಲಿದೆ. ಕಾರ್ಯಕ್ರಮದಂದು ರಂಗಮಂದಿರದ ಹೊರ ಆವರಣ ಹಾಗೂ ಒಳಾವರಣಗಳು ಸ್ವಚ್ಛತೆಯಿಂದ ಕೂಡಿರುವಂತೆ ನೋಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಹೆಚ್ಚುವರಿ ಜಿಲ್ಲಾಧಿಕಾರಿಯವರು ಸೂಚಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉದಯ್‌ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ನಗರಸಭೆ ಹಿರಿಯ ಆರೋಗ್ಯ ನಿರೀಕ್ಷಕರಾದ ಸುಷ್ಮಾ, ಸಮಾಜದ ತಾಲೂಕು ಅಧ್ಯಕ್ಷರಾದ ಆರ್. ಉಮೇಶ್, ಪ್ರಧಾನ ಕಾರ್ಯದರ್ಶಿ ಬಿ. ಶಿವಲಿಂಗೇಗೌಡ, ಮುಖಂಡರಾದ ಮಹೇಶ್, ಸೂರ್ಯಕುಮಾರ್, ಮರಿಸ್ವಾಮಿ, ಹೊನ್ನಳ್ಳಿ ಬಸವಣ್ಣ, ನವೀನ್ ಹೊಂಗನೂರು, ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.**

## ಗ್ರಾಮ ಪಂಚಾಯಿತಿ ಉಪಚುನಾವಣೆ ಅಧಿಸೂಚನೆ

**ಚಾಮರಾಜನಗರ:** ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ನಡೆಸುವ ಸಂಬಂಧ ವೇಳಾಪಟ್ಟಿ ನಿಗದಿಯಾಗಿದ್ದು, ಈ ಕುರಿತು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅಧಿಸೂಚನೆ ಹೊರಡಿಸಿದ್ದಾರೆ.

ಚಾಮರಾಜನಗರ ತಾಲೂಕಿನ ಮಂಗಲ ಗ್ರಾಮ ಪಂಚಾಯಿತಿಯ ಮಂಗಲ ಕ್ಷೇತ್ರ (ಅನುಸೂಚಿತ ಜಾತಿ ಮಹಿಳೆ), ಸಾಗಡೆ ಗ್ರಾಮ ಪಂಚಾಯಿತಿಯ ಸಾಗಡೆ ಕ್ಷೇತ್ರ (ಅನುಸೂಚಿತ ಪಂಗಡ), ಗುಂಡ್ಲುಪೇಟೆ ತಾಲೂಕಿನ ಕೋಟೆಕೆರೆ ಗ್ರಾಮ ಪಂಚಾಯಿತಿಯ ಕುರುಬರಹುಂಡಿ ಕ್ಷೇತ್ರ (ಸಾಮಾನ್ಯ) ಹಾಗೂ ಹೊಣಕನಪುರ ಕ್ಷೇತ್ರ (ಸಾಮಾನ್ಯ), ಹೊರೆಯಾಲ ಗ್ರಾಮ ಪಂಚಾಯಿತಿಯ ಹೊರೆಯಾಲ ಕ್ಷೇತ್ರ (ಸಾಮಾನ್ಯ ಮಹಿಳೆ), ಕೂತನೂರು ಗ್ರಾಮ ಪಂಚಾಯಿತಿಯ ಕೂತನೂರು ಕ್ಷೇತ್ರ (ಸಾಮಾನ್ಯ ಮಹಿಳೆ), ಅಣ್ಣೂರು ಗ್ರಾಮ ಪಂಚಾಯಿತಿಯ ಅಣ್ಣೂರುಕೇರಿ ಕ್ಷೇತ್ರ (ಹಿಂದುಳಿದ ಅ ವರ್ಗ ಮಹಿಳೆ), ಕೊಳ್ಳೇಗಾಲ ತಾಲೂಕಿನ ಧನಗೆರೆ ಗ್ರಾಮ ಪಂಚಾಯಿತಿಯ ಉಗನೀಯ ಕ್ಷೇತ್ರ (ಅನುಸೂಚಿತ ಜಾತಿ), ಹನೂರು ತಾಲೂಕಿನ ಬಂಡಳ್ಳಿ ಗ್ರಾಮ ಪಂಚಾಯಿತಿಯ ಅಣಗಳ್ಳಿದೊಡ್ಡಿ ಕ್ಷೇತ್ರ (ಸಾಮಾನ್ಯ), ರಾಮಾಪುರ ಗ್ರಾಮ ಪಂಚಾಯಿತಿಯ ಪುದುರಾಮಾಪುರ (ಸಾಮಾನ್ಯ ಮಹಿಳೆ), ಶೆಟ್ಟಳ್ಳಿ ಗ್ರಾಮ ಪಂಚಾಯಿತಿಯ ಚೆನ್ನೂರು ಕ್ಷೇತ್ರ (ಸಾಮಾನ್ಯ ಮಹಿಳೆ) ಮತ್ತು ಪಿ.ಜಿ ಪಾಳ್ಯ ಗ್ರಾಮ ಪಂಚಾಯಿತಿಯ ಪಿ.ಜಿ. ಪಾಳ್ಯ ಕ್ಷೇತ್ರ (ಸಾಮಾನ್ಯ) ಕ್ಷೇತ್ರದ ತಲಾ ಒಂದು ಸ್ಥಾನಗಳು ಸೇರಿ ಒಟ್ಟು 12 ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ನಡೆಯಲಿದೆ. ನವೆಂಬರ್ 12 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. 13ರಂದು ನಾಮಪತ್ರಗಳ ಪರಿಶೀಲನಾ ಕಾರ್ಯ ನಡೆಯಲಿದೆ. ಉಮೇದುವಾರಿಕೆ ಹಿಂತೆಗೆದುಕೊಳ್ಳಲು ನವೆಂಬರ್ 15ರಂದು ಕಡೆಯ ದಿನವಾಗಿದೆ. ಮತದಾನ ಅವಶ್ಯವಿದ್ದರೆ ನವೆಂಬರ್ 23ರಂದು ಬೆಳಿಗ್ಗೆ 7ರಿಂದ ಸಂಜೆ 5 ಗಂಟೆಯವರೆಗೆ ಮತದಾನ ನಡೆಯಲಿದೆ. ಮರು ಮತದಾನ ಅವಶ್ಯವಿದ್ದರೆ 25ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆಯವರೆಗೆ ಮತದಾನ ನಡೆಯಲಿದೆ. ಮತಗಳ ಎಣಿಕೆ ಕಾರ್ಯವು ಆಯಾ ತಾಲೂಕು ಕೇಂದ್ರಗಳಲ್ಲಿ 26ರಂದು ಬೆಳಿಗ್ಗೆ 8 ಗಂಟೆಗೆ ಆರಂಭವಾಗಲಿದೆ. ನವೆಂಬರ್ 26ರಂದು ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ವಿತರಣೆ

**ಚಾಮರಾಜನಗರ:** ಸರ್ವೋಚ್ಚ ನ್ಯಾಯಾಲಯವು ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ (ಬಿ.ಪಿ.ಎಲ್) ನೀಡಲು ಆದೇಶಿಸಿದ್ದು, ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭವಾಗಿದೆ.

ಆದ್ಯತಾ ಪಡಿತರ ಚೀಟಿ ಹೊಂದಿಲ್ಲದ ಇ-ಶ್ರಮ್ ನೋಂದಾಯಿತ ಎಲ್ಲಾ ಅರ್ಹ ಕಾರ್ಮಿಕರು ಹತ್ತಿರದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಟೋಲ್ ಫ್ರೀ ದೂರವಾಣಿ ಸಂಖ್ಯೆ: 1800-425-9339 ಅಥವಾ ಸಹಾಯವಾಣಿ 1967 ಕ್ಕೆ ಬೆಳಿಗ್ಗೆ 10 ರಿಂದ ಸಂಜೆ 5.30 ಗಂಟೆಯವರೆಗೆ ಸಂಪರ್ಕಿಸುವಂತೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ರಂ.ಬೆಟ್ಟ ಗ್ರಾ.ಪಂ. ಅಧ್ಯಕ್ಷರಾಗಿ ಸಿ.ಡಿ.ಮಾದೇವ ಆಯ್ಕೆ

**ಯಳಂದೂರು :** ತಾಲ್ಲೂಕಿನ ಬಿಳಿಗಿರಿರಂಗನಬೆಟ್ಟ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿ ಸಿ.ಡಿ.ಮಾದೇವ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಬಿಳಿಗಿರಿರಂಗನಬೆಟ್ಟ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 7 ಜನ ಸದಸ್ಯರಿದ್ದು, ಹಿಂದಿನ ಅಧ್ಯಕ್ಷ ಪ್ರತೀಪ್‌ಕುಮಾರ್ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಇಂದು ಚುನಾವಣೆ ನಿಗಧಿಯಾಗಿತ್ತು. ಸಾಮಾನ್ಯ ವರ್ಗಕ್ಕೆ ನಿಗಧಿಯಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಪುರಾಣಿಪೋಡಿನ ಸದಸ್ಯ ಸಿ.ಡಿ.ಮಾದೇವ ಒಬ್ಬರೆ ನಾಮಪತ್ರ ಸಲ್ಲಿಸಿದ್ದರು. ಸಿ.ಡಿ.ಮಾದೇವ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿಯಾಗಿದ್ದ ಕೃಷಿ ಅಧಿಕಾರಿ ವೆಂಕಟರಂಗಶೆಟ್ಟಿ ಘೋಷಿಸಿದರು. ಉಪಾಧ್ಯಕ್ಷರಾಗಿ ಕಮಲಮ್ಮ ಮುಂದುವರೆದಿದ್ದಾರೆ. ಈ ಸಂದರ್ಭದಲ್ಲಿ ಅಧ್ಯಕ್ಷ ಸಿ.ಡಿ.ಮಾದೇವ ಮಾತನಾಡಿ, ಪುರಾಣಿಪೋಡಿನ ನಿವಾಸಿಗೆ ಇದೇ ಪ್ರಥಮ ಬಾರಿಗೆ ಅಧ್ಯಕ್ಷ ಸ್ಥಾನ ದೊರೆತಿದೆ. ಎಲ್ಲಾ ಸದಸ್ಯರುಗಳು ಹಾಗೂ ಸಾರ್ವಜನಿಕರ ವಿಶ್ವಾಸ ಗಳಿಸಿ ಕರ್ತವ್ಯ ನಿರ್ವಹಿಸುತ್ತೇನೆ. ಪ್ರವಾಸಿ ತಾಣವಾದ ಬಿಳಿಗಿರಿರಂಗನಬೆಟ್ಟದಲ್ಲಿ ಮೂಲಭೂತ ಸೌಕರ್ಯಗಳಾದ ಸ್ವಚ್ಛತೆ, ಕುಡಿಯುವ ನೀರು ಮುಂತಾದ ಸಮಸ್ಯೆಗಳನ್ನು ಬಗೆಹರಿಸಲು ಶ್ರಮಿಸುತ್ತೇನೆಂದು ತಿಳಿಸಿದರು. ಮಾಜಿ ಅಧ್ಯಕ್ಷ ಪ್ರತೀಪ್‌ಕುಮಾರ್, ಉಪಾಧ್ಯಕ್ಷೆ ಕಮಲಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕಾವ್ಯ, ಸದಸ್ಯರುಗಳಾದ ರಂಗಮ್ಮ, ಬಸವಣ್ಣ, ಮಾದಮ್ಮ, ಸಾಕಮ್ಮ ಸೇರಿದಂತೆ ಇತರರು ಹಾಜರಿದ್ದರು.



# ದಾವಣಗೆರೆ ವಿವಿಯಲ್ಲಿ ಗಣರಾಜ್ಯೋತ್ಸವ ಪಥಸಂಚನ

**ಚಿತ್ರದುರ್ಗ:** ಎನ್‌ಎಸ್‌ಎಸ್ ನಲ್ಲಿ ಭಾಗವಹಿಸುವ ವಿವಿಧ ರಾಜ್ಯಗಳ ವಿದ್ಯಾರ್ಥಿಗಳನ್ನ ಒಂದೆಡೆ ಕೂರಿಸಿ, ಕಾರ್ಯಕ್ರಮಗಳನ್ನ ಆಯೋಜಿಸುವ ಸಂದರ್ಭದಲ್ಲಿ, ಅವರಿಗೆ ದೈಹಿಕ ದುಡಿಮೆಯ ಮಹತ್ವವನ್ನು ತಿಳಿಸಿಕೊಡಬೇಕು, ಹಾಗೂ ಅವರಿಗೆ ದುಡಿಮೆಯ ದಾರಿಗಳನ್ನ ತೋರಿಸಿಕೊಡಬೇಕು, ಇಲ್ಲದಿದ್ದರೆ ವಿದ್ಯಾರ್ಥಿಗಳು ಶಿಕ್ಷಣ ಪಡೆದ ನಂತರ, ಉದ್ಯೋಗವಿಲ್ಲದೆ ಅತಂತ್ರ ಸ್ಥಿತಿಗೆ ಬಂದಾಗ, ಮಾನಸಿಕ ಹಾಗೂ ದೈಹಿಕವಾಗಿ ಕುಗ್ಗಿ, ಮಾನಸಿಕ ಖಿನ್ನತೆಗೆ ಒಳಗಾಗುತ್ತಾರೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ ಎಚ್ ಕೆ ಎಸ್ ಸ್ವಾಮಿಯವರು ಎನ್‌ಎಸ್‌ಎಸ್ ಅಧಿಕಾರಿಗಳಿಗೆ ವಿನಂತಿಸಿಕೊಂಡಿದ್ದಾರೆ.




ಅವರು ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿರುವ ದಕ್ಷಿಣ ರಾಜ್ಯಗಳ ಎನ್‌ಎಸ್‌ಎಸ್ ಗಣರಾಜ್ಯೋತ್ಸವ ಪಥಸಂಚಲನೆಕ್ಕೆ ಆಯ್ಕೆ ಮಾಡುವ ಶಿಬಿರದಲ್ಲಿ, ವಿದ್ಯಾರ್ಥಿಗಳಿಗೆ ಚರಕವನ್ನ ಪ್ರದರ್ಶಿಸಿ ಅದರ ಮಹತ್ವವನ್ನ ತಿಳಿಸಿ ಕೊಡುವ ಸಂದರ್ಭದಲ್ಲಿ ಮಾತನಾಡುತ್ತಿದ್ದರು.

ದಕ್ಷಿಣ ಭಾರತದ ವಿವಿಧ ರಾಜ್ಯಗಳನ್ನ ಒಂದೆಡೆ ವಿಶ್ವವಿದ್ಯಾಲಯದಲ್ಲಿ ಸೇರಿಸಿ, ಅವರಿಗೆ ಪಥ ಸಂಚಲನದ ಬಗ್ಗೆ ಎನ್‌ಎಸ್‌ಎಸ್ಸಿನ ಮುಖ್ಯ ಉದ್ದೇಶಗಳ ಬಗ್ಗೆ ತರಬೇತಿ ನೀಡುವ ಸಂದರ್ಭದಲ್ಲಿ, ಅವರಿಗೆ ಗಾಂಧೀಜಿಯವರ ಚಿಂತನೆಗಳನ್ನ ಮತ್ತು ಗಾಂಧೀಜಿಯವರ ಚರಕದ ಮಹತ್ವವನ್ನ ಪ್ರದರ್ಶನಕ್ಕೆ ಇಟ್ಟು, ವಿದ್ಯಾರ್ಥಿ ಮನಸ್ಸನ್ನ ಗ್ರಾಮೀಣ ಚಿಂತನೆಗಳಿಗೆ ಒಳಪಡಿಸಿ, ಮುಂದೊಂದು ದಿನ ಅವರು ಗ್ರಾಮೀಣ ಅಭಿವೃದ್ಧಿಗೆ ಸಹಾಯಕರಾಗುವಂತೆ ಮಾಡಬೇಕಾದ್ದು ನಮ್ಮ ಕರ್ತವ್ಯವಾಗಿದೆ ಎಂದರು. ಬಹಳಷ್ಟು ಏನ್‌ಎಸ್‌ಎಸ್ ವಿದ್ಯಾರ್ಥಿಗಳಿಗೆ ಗ್ರಾಮೀಣ ಚಿಂತನೆಗಳ ಕೊರತೆ ಇರುತ್ತದೆ, ಗ್ರಾಮದಲ್ಲಿ ಮಾಡಬೇಕಾದ ಕೆಲಸಗಳ ಬಗ್ಗೆ ಮಾಹಿತಿ ಇಲ್ಲದೆ ಅವರು ಗ್ರಾಮಗಳಲ್ಲಿ ಭೇಟಿ ನೀಡಿದಾಗ, ಗ್ರಾಮಸ್ಥರ ಸಮಸ್ಯೆಗಳನ್ನ ಪರಿಹರಿಸಲು ಅಸಹಾಯಕರಾಗುತ್ತಾರೆ. ಹಾಗಾಗಿ ಎನ್‌ಎಸ್ ಎಸ್ಸಿನ ಯಾವುದೇ ಕಾರ್ಯಕ್ರಮಗಳಿರಲಿ, ಅವರಿಗೆ ಬಿಡುವಿನ ಸಮಯದಲ್ಲಿ, ಕಡಿಮೆ ಸಮಯದಲ್ಲಿ, ಕಡಿಮೆ ವೆಚ್ಚದಲ್ಲಿ ಗಾಂಧೀಜಿಯವರ ಚಿಂತನೆಗಳನ್ನ, ಚರಕವನ್ನ ಪ್ರದರ್ಶಿಸಿ, ಸ್ವಲ್ಪಮಟ್ಟಿಗೆ ತರಬೇತಿ ನೀಡಿದರೆ, ವಿದ್ಯಾರ್ಥಿಗಳು ಎನ್‌ಎಸ್‌ಎಸ್ ನ ಮಹತ್ವವನ್ನ, ಮೂಲ ತತ್ವಗಳನ್ನ ಅರಿತುಕೊಂಡು, ಗ್ರಾಮೀಣ ಸೇವೆಗೆ ತಯಾರಾಗುತ್ತಾರೆ, ಹಾಗೂ ತಮ್ಮ ಜೀವನವನ್ನು ಸಹ ಸರಳವಾಗಿಟ್ಟುಕೊಂಡು, ಇತರರಿಗೆ ಮಾದರಿಯಾಗುತ್ತಾರೆ, ಸಂಕ?ಟದಲ್ಲಿರುವ ದೇಶಕ್ಕೆ ಶಕ್ತಿಯಾಗಿ ನಿಲ್ಲುತ್ತಾರೆ ಎಂದರು.

ಗಣರಾಜ್ಯೋತ್ಸವದ ಪಥಸಂಚನದಲ್ಲಿ ಎನ್‌ಎಸ್ ಎಸ್ಸಿನಿಂದ ಕೇವಲ 40 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ, ದೆಹಲಿಗೆ ಕಳಿಸುತ್ತಾರೆ, 40 ಜನರ ಆಯ್ಕೆಗಾಗಿ 200ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನ ಒಂದೆಡೆ ಸೇರಿಸಿ, ಅವರಿಗೆ ತರಬೇತಿ ನೀಡಿ ಆಯ್ಕೆ ಪ್ರಕ್ರಿಯೆಗಳನ್ನ ಮಾಡಲಾಗುತ್ತದೆ. 40 ಜನ ವಿದ್ಯಾರ್ಥಿಗಳು ಆಯ್ಕೆ ಯಾದ ನಂತರ ಉಳಿದ ವಿದ್ಯಾರ್ಥಿಗಳು ಯಾವುದೇ ಕೀಳರಿಮೆಯನ್ನು ಬೆಳೆಸಿಕೊಳ್ಳದೆ, ಗ್ರಾಮೀಣ ಸೇವೆಗೆ, ಮುಖಂಡತ್ವದ ತರಬೇತಿಯನ್ನ ಬಳಸಿಕೊಂಡು, ಜೀವನ ಪರ್ಯಂತ ದೇಶ ಕಟ್ಟುವ ಕೆಲಸದಲ್ಲಿ ತೊಡಗಬಹುದು ಎಂದು ವಿನಂತಿಸಿಕೊಂಡಿದ್ದಾರೆ. ವಿದ್ಯಾರ್ಥಿಗಳಿಗೆ ತರಬೇತಿ ನೀಡುವಾಗ ಗಾಂಧೀಜಿಯವರ ಪೂರ್ಣ ಚಿತ್ರಣವನ್ನು, ಕಡಿಮೆ ಸಮಯದಲ್ಲಿ ಹೇಳಿಕೊಟ್ಟರೆ, ಅವರು ಸ್ಪರ್ಧಾತ್ಮಕ ಮನೋಭಾವನೆಯಿಂದ, ಸಹಕಾರದ ಮನೋಭಾವತ್ವಕ್ಕೆ ತಿರುಗಿಕೊಳ್ಳುತ್ತಾರೆ, ಅದರಿಂದ ಅವರು ಸೇವೆ ಮಾಡುವುದರಲ್ಲಿ ಹೆಚ್ಚಿನ ಶ್ರಮವಹಿಸಿ ಮುಂದಾಳತ್ವ ವಹಿಸಿಕೊಳ್ಳುತ್ತಾರೆ, ಸ್ವಾರ್ಥತೆ ತೊರೆದು, ನನಗಲ್ಲ ನಿನಗಾಗಿ ಎಂಬ ಸಂದೇಶವನ್ನ ಜೀವನದಲ್ಲಿ ಅಳವಡಿಸಿಕೊಂಡು, ಪ್ರತಿ ಕ್ಷಣ ಕ್ಷಣದಲ್ಲೂ ಸಹ ಬಡವರ ಸೇವೆಗಾಗಿ, ಪರಿಸರದ ಸೇವೆಗಾಗಿ, ಸಮಾಜದ ಉದ್ಧಾರಕ್ಕಾಗಿ ಶ್ರಮಿಸುವಂತಹ ವಿದ್ಯಾರ್ಥಿಗಳನ್ನು ತಯಾರು ಮಾಡಿದಂತಾಗುತ್ತದೆ ಎಂದರು. ಯಾವುದೇ ಎನ್‌ಎಸ್‌ಎಸ್ ವಿದ್ಯಾರ್ಥಿಯು ಸಹ ಚರಕ ನೋಡದೆ, ಚರಕ ಮುಟ್ಟದೆ, ಚರಕದ ಮಹತ್ವವನ್ನು ಅರಿಯದಲೇ, ಹೊರಹೋಗದಂತೆ ಅವರಿಗೆ ಚರಕದ ಪ್ರದರ್ಶನವನ್ನು ನೀಡಿ, ಗ್ರಾಮೀಣ ಚಿಂತನೆಯನ್ನ ಅರಿವಿಗೆ ಮೂಡಿಸಬೇಕೆಂದು ಪತ್ರಿಕ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

## ದೀಪಾವಳಿ ಹಬ್ಬದ ಪ್ರಯುಕ್ತ ಸಂಸ್ಥೆಯ ಬಸ್ಸುಗಳಲ್ಲಿ ಹೆಚ್ಚಿನ ಜನರು ಪ್ರಯಾಣಿಸಿದ್ದರಿಂದ ಅತಿ ಹೆಚ್ಚು ಆದಾಯ ಸಂಗ್ರಹ

ಬೆಂಗಳೂರು: ದೀಪಾವಳಿ ಹಾಗೂ ಕನ್ನಡ ರಾಜ್ಯೋತ್ಸವದ ಸಾಲು ಸಾಲು ರಜೆಯ ಹಿನ್ನೆಲೆಯಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಸಂಚಾರ ನಡೆಸಿದ ಪ್ರಯಾಣಿಕರ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದು, ಹೆಚ್ಚಿನ ಆದಾಯ ದಾಖಲಾಗಿದೆ.

ದೀಪಾವಳಿ, ವಾರಾಂತ್ಯ ಜತೆಯಲ್ಲೇ ಬಂದಿದ್ದರಿಂದ ಸರಣಿ ರಜೆಯ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಜನರು ತಮ್ಮ ಸ್ವಂತ ಊರುಗಳಿಗೆ ತೆರಳಿದ್ದರು. ಹಬ್ಬ ಮುಗಿದ ನಂತರ ಬಹುತೇಕ ಜನರು ಸಂಸ್ಥೆಯ ಬಸ್ಸುಗಳಲ್ಲಿ ಬೆಂಗಳೂರು, ಮಂಗಳೂರು ಗೋವಾ, ಹೈದ್ರಾಬಾದ್, ಪುಣೆ ಮುಂತಾದ ಸ್ಥಳಗಳಿಗೆ ಪ್ರಯಾಣಿಸಲು ಹೆಚ್ಚಿನ ವಿಶೇ? ಸಾರಿಗೆ ಸೌಲಭ್ಯ ಕಲ್ಪಿಸಲಾಗಿತ್ತು.

ಹಬ್ಬದ ಹಿನ್ನೆಲೆಯಲ್ಲಿ ಅಕ್ಟೋಬರ್ 30 ಮತ್ತು ನವೆಂಬರ್ 4 ರಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅವತಾರ್ ಆನ್‌ಲೈನ್ ಬುಕ್ಕಿಂಗ್‌ನಲ್ಲೂ ಹೆಚ್ಚಳವಾಗಿದೆ. ಈ ದಿನಗಳಂದು ಕ್ರಮವಾಗಿ 8998 ಮತ್ತು 7556 ಆನ್ ಲೈನ್ ಸೀಟುಗಳು ಬುಕ್ಕಿಂಗ್ ಆಗಿದ್ದು, ಮುಂಗಡ ಬುಕಿಂಗ್‌ನಿಂದ ಒಟ್ಟು ರೂ.1.06 ಕೋಟಿ ಆದಾಯ ಬಂದಿರುತ್ತದೆ.

ನವೆಂಬರ್ 4 ರಂದು ಒಂದೇ ದಿನ ಒಟ್ಟಾರೆ 27 ಲಕ್ಷ ಜನ ಪ್ರಯಾಣಿಸಿದ್ದಾರೆ, ಇದರಲ್ಲಿ ಮಹಿಳಾ ಪ್ರಯಾಣಿಕರು 16.66 ಲಕ್ಷ ಜನ ಪ್ರಯಾಣ ಮಾಡಿದ್ದು, ಆದಾಯ ರೂ. 8.70 ಕೋಟಿ ಆಗಿರುತ್ತದೆ. ಇದು ಸಂಸ್ಥೆಯ ಇತಿಹಾಸದಲ್ಲಿಯೇ ಅತಿ ಹೆಚ್ಚಿನ ಆದಾಯವಾಗಿದ್ದು, ಈ ಸಾಧನೆಗೆ ಸಂಸ್ಥೆಯ ಎಲ್ಲ ನೌಕರರು ಹಾಗೂ ಅಧಿಕಾರಿಗಳು ಕಾರಣರಾಗಿರುತ್ತಾರೆ. ಈ ಅವಧಿಯಲ್ಲಿ ಹೆಚ್ಚಿನ ಶ್ರಮವಹಿಸಿ ಸಾರ್ವಜನಿಕ ಪ್ರಯಾಣಿಕರಿಗೆ ಅನನುಕೂಲವಾಗದಂತೆ ಉತ್ತಮ ಸಾರಿಗೆ ಸೌಲಭ್ಯ ಒದಗಿಸಿದ್ದಕ್ಕಾಗಿ ಚಾಲನಾ ಸಿಬ್ಬಂದಿಗಳು, ತಾಂತ್ರಿಕ ವರ್ಗದವರು ಮತ್ತು ಅಧಿಕಾರಿ/ಸಿಬ್ಬಂದಿ ವರ್ಗದವರನ್ನು ಅಭಿನಂದಿಸಿ, ಸಂಸ್ಥೆಯ ವಾಹನಗಳಲ್ಲಿ ಶಾಂತತೆಯಿಂದ ಪ್ರಯಾಣಿಸಿ ಸಂಸ್ಥೆಯೊಂದಿಗೆ ಸಹಕರಿಸಿದ್ದಕ್ಕಾಗಿ ಸಾರ್ವಜನಿಕ ಪ್ರಯಾಣಿಕರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಪ್ರಿಯಾಂಗಾ.ಎಂ, ಅವರು ಅಭಿನಂದನೆ ತಿಳಿಸಿದ್ದಾರೆ ಎಂದು ಸಂಸ್ಥೆಯು ಪ್ರಕಟಣೆ ತಿಳಿಸಿದೆ.



**ಕಾಮನ್ ವೆಲ್ತ್ ಸಂಸದೀಯ ಸಂಘದ ಕರ್ನಾಟಕ ಶಾಖೆಯ ಪ್ರತಿನಿಧಿಯಾಗಿ ಕರ್ನಾಟಕ ವಿಧಾನ ಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ಫರೀಟ್ ಅವರು ಆಸ್ಟ್ರೇಲಿಯಾ ದೇಶದ ಸಿಡ್ನಿಯಲ್ಲಿ ನಡೆಯುತ್ತಿರುವ 67ನೇ ಕಾಮನ್ ವೆಲ್ತ್ ಸಂಸದೀಯ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದರು. ಅಸ್ಸಾಂ ರಾಜ್ಯದ ವಿಧಾನ ಸಭೆಯ ಸಭಾಧ್ಯಕ್ಷರಾದ ಬಿಸ್ವಜಿತ್ ಡೈಮರಿ, ಸಂಸದರಾದ ದಗ್ಗುಬಾಟಿ ಪುರಂದೇಶ್ವರಿ, ಸಂಸದ ಡಾ. ಕೆ. ಸುಧಾಕರ್ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.**

# ಸಂಜೆ ಟಿಪ್ಸ್

## ಮೊಟೊರೊಲಾ ಎಡ್ಜ್ 50 ಖರೀದಿಸಲು ಇದುವೇ ಬೆಸ್ಟ್ ಟೈಮ್



ಜನಪ್ರಿಯ ಮೊಟೊರೊಲಾ ಸಂಸ್ಥೆಯ ಎಡ್ಜ್ ಸರಣಿಯ ಕೆಲವು ಮೊಬೈಲ್ಗಳ ಆ ಪೈಕಿ ಮೊಟೊರೊಲಾ ಎಡ್ಜ್ 50 ಅತ್ಯುತ್ತಮ ಫೀಚರ್ಸ್ಗಳ ಮೂಲಕ ಮಾರುಕಟ್ಟೆಯಲ್ಲಿ ಸದ್ದು ಮಾಡಿದೆ. ಈ ಮೊಬೈಲ್ ಸ್ನ್ಯಾಪ್ಡ್ರಾಗನ್ 7 ಜೆನ್ 1 ಪ್ರೊಸೆಸರ್ ಸೌಲಭ್ಯ ಒಳಗೊಂಡಿದ್ದು, ಕರ್ವ್ಡ್ ಡಿಸ್ಪ್ಲೇ ಪಡೆದಿದೆ. ಇದೀಗ ಈ ಮೊಬೈಲ್ ಫ್ಲಿಪ್ಕಾರ್ಟ್ ಇ ಕಾಮರ್ಸ್ ತಾಣದಲ್ಲಿ ಗಮನಾರ್ಹ ಬೆಲೆ ಕಡಿತ ಪಡೆದಿದ್ದು, ಖರೀದಿದಾರರು ಅಚ್ಚರಿ ಪಡುವಂತೆ ಆಗಿದೆ. ಹೌದು, ಫ್ಲಿಪ್ಕಾರ್ಟ್ ಇ ಕಾಮರ್ಸ್ ತಾಣದಲ್ಲಿ ಸದ್ಯ 'ಸ್ಮಾರ್ಟ್ಫೋನ್ ಫೆಸ್ಟಿವಲ್ ಸೇಲ್' ಲೈವ್ ಇದೆ. ಈ ಸೇಲ್ನಲ್ಲಿ ಮೊಟೊರೊಲಾ ಎಡ್ಜ್ 50 ಮೊಬೈಲ್ ಶೇ. 18% ರಷ್ಟು ನೇರ ಡಿಸ್ಕೌಂಟ್ ಬೆಲೆಯಲ್ಲಿ ಕಾಣಿಸಿಕೊಂಡಿದೆ. ಇನ್ನು ಈ ಸ್ಮಾರ್ಟ್ಫೋನಿನ 8 GB RAM + 256 GB ಸ್ಟೋರೇಜ್ ವೇರಿಯಂಟ್ ಆಫರ್ನಲ್ಲಿ 26,999ರೂ. ಗಳ ಬೆಲೆಯಲ್ಲಿ ಖರೀದಿಗೆ ಸಿಗಲಿದೆ. ಹಾಗೆಯೇ ಹೆಚ್ಚುವರಿಯಾಗಿ ಕೆಲವು ಆಯ್ದ ಬ್ಯಾಂಕ್ಗಳಿಂದ ರಿಯಾಯಿತಿ ಸಹ ಪಡೆಯಬಹುದಾಗಿದೆ. ಮೊಟೊರೊಲಾ ಎಡ್ಜ್ 50 ಮೊಬೈಲ್ 50 ಮೆಗಾ ಪಿಕ್ಸೆಲ್ ಸೆನ್ಸಾರ್ನ ಪ್ರಾಥಮಿಕ ಕ್ಯಾಮೆರಾ ಒಳಗೊಂಡಿದ್ದು, ಜೊತೆಗೆ 32 ಮೆಗಾ ಪಿಕ್ಸೆಲ್ ಸೆನ್ಸಾರ್ನ ಸೆಲ್ಫಿ ಕ್ಯಾಮೆರಾ ಪಡೆದಿದೆ. ಇದರ ಜೊತೆಗೆ 5,000 ಟಿಯ ಸಾಮರ್ಥ್ಯದ ಬ್ಯಾಟರಿ ಬ್ಯಾಕ್ಅಪ್ ಅನ್ನು ಪಡೆದುಕೊಂಡಿದೆ. ಮೊಟೊರೊಲಾ ಎಡ್ಜ್ 50 ಫೋನ್ 6.7 ಇಂಚಿನ ಫುಲ್ ಹೆಚ್ಡಿ ಪ್ಲಸ್ ಡಿಸ್ಪ್ಲೇ ಹೊಂದಿದ್ದು, ಈ ಡಿಸ್ಪ್ಲೇಯು 1200X2780 ಪಿಕ್ಸೆಲ್ ಸ್ಕ್ರೀನ್ ರೆಸಲ್ಯೂಶನ್ ಸಪೋರ್ಟ್ ಮಾಡಲಿದೆ. ಇದಲ್ಲದೆ ಡಿಸ್ಪ್ಲೇ 144 ಟ್ರೂ ಕಲರ್ ಡಿಸ್ಪ್ಲೇ ಸೌಲಭ್ಯ ಪಡೆದಿದ್ದು, ಇದರ ಜೊತೆಗೆ ಡಿಸ್ಪ್ಲೇ 2500 ನಿಟ್ಸ್ ಬ್ರೈಟ್ನೆಸ್ ಸಪೋರ್ಟ್ ಮಾಡಲಿದೆ. ಇದಲ್ಲದೇ 3ಆ ಕರ್ವ್ ಡಿಸ್ಪ್ಲೇ ರಚನೆ ಅನ್ನು ಪಡೆದಿದೆ. ಇದು 1,900 ನಿಟ್ಸ್ ಪೀಕ್ ಬ್ರೈಟ್ನೆಸ್ ಮತ್ತು ಕಾರ್ನಿಂಗ್ ಗೊರಿಲ್ಲಾ ಗ್ಲಾಸ್ 5 ರಕ್ಷಣೆಯನ್ನು ಪಡೆದಿದೆ.

## ಬಾರ್ಲಿ ಸೂಪ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಶುಂಠಿ 1 ಇಂಚು, ಬೆಳ್ಳುಳ್ಳಿ 10 ಎಸಳು, ಈರುಳ್ಳಿ 1/2, ಕ್ಯಾರೆಟ್, ಬೀನ್ಸ್, ಕ್ಯಾಪ್ಸಿಕಂ, ಕೋಸು ಎಲ್ಲಾ ಸೇರಿ 1 ಕಪ್, ಕೊತ್ತಂಬರಿ ಸೊಪ್ಪು ಸ್ವಲ್ಪ, ಎಣ್ಣೆ/ಬೆಣ್ಣೆ 2 ಚಮಚ, ರುಚಿಗೆ ತಕ್ಕಷ್ಟು ಉಪ್ಪು, ಪಾವ್ ಬಾಜಿ ಮಸಾಲೆ 1 ಚಮಚ. ಕಾಳುಮೆಣಸಿನ ಪುಡಿ 1/2 ಚಮಚ. ಬಾರ್ಲಿ 100 ಗ್ರಾಂ, ನೀರು 1 ಲೀಟರ್.

### ಮಾಡುವ ವಿಧಾನ

**ಮೊದಲು ಬಾರ್ಲಿಯನ್ನು ಕುಕ್ಕರಿನಲ್ಲಿ ಹಾಕಿ ನೀರನ್ನು ಸೇರಿಸಿ 10 ವಿಷಲ್ ಕೂಗಿಸಬೇಕು. ನಂತರ ಬಾಣಲೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಿ ಅದರಲ್ಲಿ ಶುಂಠಿ, ಬೆಳ್ಳುಳ್ಳಿ, ಈರುಳ್ಳಿಯನ್ನು ಹಾಕಿ ಹುರಿದ ಬಳಿಕ ತರಕಾರಿಗಳನ್ನು ಸೇರಿಸಿ ಬೇಯಿಸಬೇಕು. ನಂತರ ಬೆಂದ ಬಾರ್ಲಿ ಮತ್ತು ಅದರ ನೀರನ್ನು ಹಾಕಿ ತದನಂತರ ಉಪ್ಪನ್ನು ಸೇರಿಸಿ ಕುದಿಸಬೇಕು. ಅದಕ್ಕೆ ಪಾವ್ ಬಾಜಿ ಮಸಾಲೆ ಮತ್ತು ಕಾಳುಮೆಣಸಿನ ಪುಡಿಯನ್ನು ಸೇರಿಸಿ ಸಣ್ಣ ಉರಿಯಲ್ಲಿ ಕುದಿಸಿ ಕೊನೆಯಲ್ಲಿ ಕೊತ್ತಂಬರಿ ಸೊಪ್ಪನ್ನು ಸೇರಿಸಿದರೆ ರುಚಿಕರವಾದ ಆರೋಗ್ಯಕರವಾದ ಬಾರ್ಲಿ ಸೂಪ್ ಸವಿಯಲು ಸಿದ್ಧ.**

## ಇಮ್ಯೂನಿಟಿ ಹೆಚ್ಚಿಸಲಿದೆ ಸೋಯಾಬೀನ್



### ಹೆಲ್ತ್ ಟಿಪ್ಸ್

ಸೋಯಾಬೀನ್ ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಸೋಯಾಬೀನ್ ನಲ್ಲಿರುವ ಪೋಷಕಾಂಶಗಳು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ. ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ಕೂಡ ಇದನ್ನು ಒಪ್ಪಿಕೊಂಡಿದೆ. ಸೋಯಾಬೀನ್ನಲ್ಲಿ ಪ್ರೋಟೀನ್, ಫೈಬರ್ ಮತ್ತು ಒಮೆಗಾ -3 ಅಂಶಗಳಿವೆ.

ಈ ಪೋಷಕಾಂಶಗಳು ಹೃದಯವನ್ನು ಆರೋಗ್ಯವಾಗಿರಿಸಲು ಸಹಾಯ ಮಾಡುತ್ತವೆ. ಇಷ್ಟೇ ಅಲ್ಲ ಸೋಯಾಬೀನ್ನ ಗುಣಲಕ್ಷಣಗಳು ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವಲ್ಲಿ ಸಹ ಪರಿಣಾಮಕಾರಿಯಾಗಿವೆ. ನೀವು ಹೃದ್ರೋಗಗಳಿಂದ ದೂರವಿರಲು ಮತ್ತು ನಿಮ್ಮ ರೋಗ ನಿರೋಧಕ ಶಕ್ತಿಯನ್ನು ಬಲಪಡಿಸಲು ಬಯಸಿದರೆ, ನಿಮ್ಮ ದೈನಂದಿನ ಉಪಹಾರದಲ್ಲಿ ಸೋಯಾ ಚಂಕ್ಸ್, ಸೋಯಾ ಹಾಲು, ಸೋಯಾ ಹಿಟ್ಟು, ಸೋಯಾ ನಟ್ಸ್ ಮತ್ತು ತೋಫುಗಳಂತಹ ಆಹಾರಗಳನ್ನು ಸೇರಿಸಿಕೊಳ್ಳಬಹುದು.

ಹೃದಯಕ್ಕೆ ಪ್ರಯೋಜನಕಾರಿ: ಸಸ್ಯಾಹಾರದಲ್ಲಿ ಸೋಯಾಬೀನ್ ಅತ್ಯಧಿಕ ಪ್ರೋಟೀನ್ ಹೊಂದಿರುವ ಪದಾರ್ಥವಾಗಿದೆ. ಇದರಲ್ಲಿ ಸ್ಯಾಚುರೇಟೆಡ್ ಕೊಬ್ಬಿನ ಪ್ರಮಾಣವೂ ತುಂಬಾ ಕಡಿಮೆ. ಸೋಯಾ ದೇಹದಲ್ಲಿನ ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುವ ಮೂಲಕ ಒಳ್ಳೆಯ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಸೋಯಾಬೀನ್ಗಳು ಅರ್ಜಿನೈನ್ ಅಮಿನೊ ಆಸಿಡ್ ಮತ್ತು ಐಸೊಫ್ಲಾವೊನ್ಗಳನ್ನು ಒಳಗೊಂಡಿದ್ದು, ಅದು ನಿಮ್ಮ ರಕ್ತದೊತ್ತಡವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದರಲ್ಲಿರುವ ಗುಣಲಕ್ಷಣಗಳು ರಕ್ತನಾಳಗಳನ್ನು ಆರೋಗ್ಯವಾಗಿಡುವ ಕೆಲಸ ಮಾಡುತ್ತವೆ. ಇದರಿಂದಾಗಿ ಹೃದಯದ ಕಾಯಿಲೆಗಳ ಅಪಾಯವಿರುವುದಿಲ್ಲ.

ರೋಗ ನಿರೋಧಕ ಶಕ್ತಿ ಹೆಚ್ಚಳ: ಸೋಯಾಬೀನ್ನಲ್ಲಿರುವ ಪ್ರೋಟೀನ್ಗಳು, ಆಂಟಿಒಕ್ಸಿಡೆಂಟ್ಗಳು ಮತ್ತು ಫೈಬರ್ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವಲ್ಲಿ ಪರಿಣಾಮಕಾರಿಯಾಗಿದೆ. ಸೋಯಾಬೀನ್ ಸೇವನೆಯಿಂದ ರೋಗಗಳ ವಿರುದ್ಧ ಹೋರಾಡುವ ಶಕ್ತಿ ಬರುತ್ತದೆ. ಈ ಕಾರಣಕ್ಕಾಗಿಯೇ ಕೋವಿಡ್ ಸಮಯದಲ್ಲಿ ಸೋಯಾವನ್ನು ಸೇವಿಸುವಂತೆ ಪ್ರಾಧಿಕಾರ ಸಲಹೆ ನೀಡಿತ್ತು. ಸೋಯಾದಿಂದ ಮಾಡಿದ ತಿನಿಸುಗಳನ್ನು ನಿಯಮಿತವಾಗಿ ಸೇವನೆ ಮಾಡುವುದರಿಂದ ನಮ್ಮ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ. ಜ್ವರ, ನೆಗಡಿ ಮುಂತಾದ ಸಮಸ್ಯೆಗಳು ಹೆಚ್ಚಾಗಿ ಕಾಡುವುದಿಲ್ಲ. ಕಾಯಿಲೆಗಳನ್ನು ತಡೆಗಟ್ಟಲು ಪ್ರಯೋಜನಕಾರಿ: ಸೋಯಾಬೀನ್ ಸಕ್ಕರೆಯ ಮಟ್ಟವನ್ನು ಸಹ ನಿಯಂತ್ರಣದಲ್ಲಿಡುತ್ತದೆ. ಇದು ಜೀರ್ಣಾಂಗ ವ್ಯವಸ್ಥೆಗೂ

## ತುಟಿಯ ಅಂದಕ್ಕೆ ಟಿಪ್ಸ್

### ಬ್ಯೂಟಿ ಟಿಪ್ಸ್



ಕಪ್ಪಾದ ತುಟಿಯನ್ನು ಮರೆಮಾಚಲು ಮೇಕಪ್ ಮಾಡಿದರೆ ತುಟಿ ಮತ್ತಷ್ಟು ಕಪ್ಪಾಗುತ್ತದೆ. ಆದ್ದರಿಂದ ತುಟಿಯ ಕಪ್ಪು ಬಣ್ಣವನ್ನು ಹೋಗಲಾಡಿಸಲು ನೈಸರ್ಗಿಕವಾದ ವಿಧಾನಗಳನ್ನು ಅನುಸರಿಸುವುದು ಒಳ್ಳೆಯದು. ಇಲ್ಲಿರುವ ಕೆಲ ಟಿಪ್ಸ್ ತುಟಿಯ ರಂಗನ್ನು ಹೆಚ್ಚಿಸುವಲ್ಲಿ ಡೌಟೇ ಬೇಡ.

- ಗುಲಾಬಿ ಎಸಳುಗಳನ್ನು ಜಜ್ಜಿ ಅದಕ್ಕೆ ಒಂದು ಚಮಚ ಹಾಲು ಹಾಕಬೇಕು. ದಿನದಲ್ಲಿ ಮೂರು ಬಾರಿ ಇದರಿಂದ ತುಟಿಗಳನ್ನು ತೊಳೆಯಬೇಕು. ಇದು ತುಟಿಗೆ ಒಳ್ಳೆಯ ಬಣ್ಣ ನೀಡುವುದು.
- ಒಂದು ಚಮಚ ಹಾಲಿನ ಕೆನೆಗೆ ಕೆಲವು ಹನಿ ಗ್ಲಿಸರಿನ್ ಹಾಕಬೇಕು. ಇದನ್ನು ತುಟಿಗೆ ಹಚ್ಚಿಕೊಂಡು ಹತ್ತು ನಿಮಿಷ ಕಾಲ ಹಾಗೆಯೇ ಬಿಡಬೇಕು ಬಳಿಕ ತಣ್ಣೀರಿನಿಂದ ತೊಳೆಯಬೇಕು.
- ಮಲಗುವ ಮೊದಲು ತುಟಿಗಳಿಗೆ ಜೇನುತುಪ್ಪ ಹಚ್ಚಿಕೊಳ್ಳಬೇಕು. ರಾತ್ರಿಯಿಡೀ ಹಾಗೆಯೇ ಬಿಡಬೇಕು. ಇದು ತುಟಿಗಳಿಗೆ ಗುಲಾಬಿ ಬಣ್ಣ ನೀಡುವುದು ಮಾತ್ರವಲ್ಲದೆ ಮೃದುವಾಗಿಸುತ್ತದೆ.
- ಆಲಿವ್ ಆಯಿಲ್, ಜೇನುಮೇಣ, ಐದು ಹನಿ ರೋಸ್ಮೆರಿ ಎಣ್ಣೆ, ಐದು ಹನಿ ವಿಟಮಿನ್ ಇ ಆಯಿಲ್ ಮತ್ತು ಒಂದು ಚಮಚ ಗ್ರೇಪ್ ಸೀಡ್ ಆಯಿಲ್ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಬೇಕು. ಇದನ್ನು ಪ್ರತಿದಿನ ತುಟಿಗಳಿಗೆ ಹಚ್ಚಿಕೊಂಡರೆ ಒಳ್ಳೆಯ ಫಲಿತಾಂಶ ಸಿಗುವುದು.
- ಜೇನುತುಪ್ಪ, ನಿಂಬೆರಸ ಮತ್ತು ವಿಟಮಿನ್ ಇ ಆಯಿಲ್ ಅನ್ನು ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಬೇಕು. ಇದನ್ನು ತುಟಿಗಳಿಗೆ ಹಚ್ಚಿಕೊಂಡು ಒಣಗಲು ಬಿಡಬೇಕು. ಬಳಿಕ ತಣ್ಣೀರಿನಿಂದ ತೊಳೆಯಬೇಕು. ಇದು ಕೂಡ ತುಟಿಗಳಿಗೆ ಬಣ್ಣ ನೀಡುತ್ತದೆ.

## ನಟಿ ಅನುಷ್ಕಾ ಹೊಸ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಅನಾವರಣ






ಕರಾವಳಿ ಬೆಡಗಿ ಅನುಷ್ಕಾ ಶೆಟ್ಟಿ ಅಭಿನಯದ ಬಹುನಿರೀಕ್ಷಿತ ಎರಡು ಸಿನಿಮಾದ ಫಸ್ಟ್ ಲುಕ್ ಪೋಸ್ಟರ್ ಅನಾವರಣಗೊಂಡಿದೆ. ವಿಭಿನ್ನ ಗೆಟಪ್ನಲ್ಲಿ ಕಾಣಿಸಿಕೊಂಡಿರುವ ಅನುಷ್ಕಾ ಲುಕ್ಗೆ ಫ್ಯಾನ್ಸ್ ಭಾರೀ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಅನುಷ್ಕಾ ಶೆಟ್ಟಿ ಹುಟ್ಟುಹಬ್ಬ ಹಿನ್ನೆಲೆ ಅವರ ಅಭಿಮಾನಿಗಳಿಗೆ ಡಬಲ್ ದಮಾಕ ಸಿಕ್ಕಿದೆ. ಘಾಟಿ ಸಿನಿಮಾದಲ್ಲಿ ಅನುಷ್ಕಾ ಫಸ್ಟ್ ಲುಕ್ ನೋಡಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ. ರಕ್ತ ಮೆತ್ತಿದ ಕೈಗಳಲ್ಲಿ ಚುಟ್ಟಾ ಹಿಡಿದು ಸೇದುತ್ತಾ ರಗಡ್ ಲುಕ್ನಲ್ಲಿ ಅನುಷ್ಕಾ ಕಾಣಿಸಿಕೊಂಡಿದ್ದಾರೆ.

ಇದರ ಜತೆಗೆ ಅನುಷ್ಕಾ ಶೆಟ್ಟಿ ನಟನೆಯ ಮಲಯಾಳ ಸಿನಿಮಾ ಕತನಾರ್ ಚಿತ್ರದ ಲುಕ್ ಕೂಡಾ ರಿವೀಲ್ ಆಗಿದೆ. ಈ ಸಿನಿಮಾದಲ್ಲಿ ಅನುಷ್ಕಾ ಅವರು ನೀಲ ಎಂಬ ಪಾತ್ರಕ್ಕೆ ಜೀವ ತುಂಬಿದ್ದಾರೆ. ಈ ಸಿನಿಮಾದ ಮೂಲಕ ಮೊದಲ ಬಾರು ಅನುಷ್ಕಾ ಮಾಲಿವುಡ್ಗೆ ಪಾದಾರ್ಪಣೆ ಮಾಡುತ್ತಿದ್ದಾರೆ.

ಘಾಟಿ ಸಿನಿಮಾಗೆ ಕ್ರಿಶ್ ಆಯಕ್ಷನ್ ಕಟ್ ಹೇಳಿದ್ದಾರೆ. ಈ ಸಿನಿಮಾವನ್ನು ನಟ ಪ್ರಭಾಸ್ ಸಹಭಾಗಿತ್ವದ ಯುವಿ ಕ್ರಿಯೇಶನ್ಸ್ ನಿರ್ಮಾಣ ಮಾಡಿದೆ.. ಸದ್ಯ ನಟಿಯ ಲುಕ್ಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಕ್ವೀನ್ ಈಸ್ ಬ್ಯಾಕ್ ಎನ್ನುತ್ತಾ ಫ್ಯಾನ್ಸ್ ಸಂಭ್ರಮಿಸುತ್ತಿದ್ದಾರೆ.

ನಟಿ ಅನುಷ್ಕಾ ಶೆಟ್ಟಿಯನ್ನು ಸೌತ್ ಸಿನಿರಂಗದ ಪ್ರೇಕ್ಷಕರು ಸ್ವೀಟಿ ಅಂತ ಕ್ಯೂಟಾಗಿ ಕರೆಯುತ್ತಾರೆ. ಹೆಸರಿಗೆ ತಕ್ಕಂತೆ ಈಕೆ ನಿಜವಾಗಿಯೂ ಸ್ವೀಟಿ.. ಪರ್ಸನಲ್ ಲೈಫ್ ನಲ್ಲಿ ತುಂಬಾ ಸ್ಲೋ ಆಗಿರುವ ಈ ಹೀರೋಯಿನ್ ಸಿನಿಮಾಗಳಲ್ಲಿ ತುಂಬಾ ಪವರ್ ಫುಲ್ ಪಾತ್ರಗಳಲ್ಲಿ ನಟಿಸುತ್ತಾರೆ..

ಈ ಕ್ರಮದಲ್ಲಿ ಈಗ ಅನುಷ್ಕಾ ತಮ್ಮ ಮುಂಬರುವ ಚಿತ್ರದಲ್ಲಿ ಹಿಂದೆಂದೂ ಮಾಡದ ಪಾತ್ರದಲ್ಲಿ ಕಾಣಿಸಿಕೊಳ್ಳಲು ಸಿದ್ಧರಾಗಿದ್ದಾರೆ. ಹೌದು.. ಇಂದು ಸ್ವೀಟಿ ಹುಟ್ಟುಹಬ್ಬ.. ಈ ಸಂದರ್ಭದಲ್ಲಿ ಅವರ ಮುಂಬರುವ ಘಾಟಿ ಸಿನಿಮಾದ ಪವರ್ ಫುಲ್ ಪೋಸ್ಟರ್ ಬಿಡುಗಡೆಯಾಗಿದೆ. ಯುವಿ ಕ್ರಿಯೇಷನ್ಸ್ ಮತ್ತು ಫಸ್ಟ್ ಫ್ರೇಮ್ ಎಂಟರ್ಟೈನ್ಮೆಂಟ್ ಜಂಟಿಯಾಗಿ ಈ ಸಿನಿಮಾವನ್ನು ನಿರ್ಮಿಸುತ್ತಿದೆ.

ಈ ಹಿಂದೆ ಅನುಷ್ಕಾ ಕ್ರಿಶ್ ನಿರ್ದೇಶನದಲ್ಲಿ ವೇದಂ ಸಿನಿಮಾ ಮಾಡಿದ್ದು ಗೊತ್ತೇ ಇದೆ. ಈ ಚಿತ್ರದಲ್ಲಿ ವೇಶ್ಯೆಯ ಪಾತ್ರದಲ್ಲಿ ಕಾಣಿಸಿಕೊಂಡು ಎಲ್ಲರನ್ನು ಅಚ್ಚರಿಗೊಳಿಸಿದ್ದರು. ಈಗ.. ತಮ್ಮ ಮುಂಬರುವ ಚಿತ್ರದಲ್ಲಿ ಇನ್ನಷ್ಟು ವಿಭಿನ್ನವಾಗಿ ನಟಿಸಲು ರೆಡಿಯಾಗಿರುವ ಸ್ವೀಟಿ.. ?ಘಾಟಿ? ಪೋಸ್ಟರ್ನಲ್ಲಿ ಸಿಗರೇಟ್ ಸೇದುತ್ತಾ.. ಕೆಂಡಾಮಂಡಲವಾಗಿ ಕಾಣಿಸಿಕೊಂಡಿದ್ದಾರೆ..

ಸಾಕಷ್ಟು ದಿನಗಳ ನಂತರ ವಿಭಿನ್ನ ಸಿನಿಮಾದ ಮೂಲಕ ಅನುಷ್ಕಾ ತೆರೆ ಮೇಲೆ ಕಾಣಿಸಿಕೊಳ್ಳಲು ರೆಡಿಯಾಗಿದ್ದ ಅವರ ಅಭಿಮಾನಿಗಳಿಗೆ ಖುಷಿ ನೀಡಿದೆ. ಸಧ್ಯ ಪೋಸ್ಟರ್ ಸೋಷಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗಿದ್ದು, ಅನುಷ್ಕಾ ಅಭಿಮಾನಿಗಳಲ್ಲಿ ಸಂತಸ ಮೂಡಿಸಿದೆ. ಒಟ್ಟಾರೆಯಾಗಿ ಈ ಚಿತ್ರ ಅನುಷ್ಕಾ ವೃತ್ತಿ ಜೀವನದಲ್ಲಿ ಎಷ್ಟರಮಟ್ಟಿಗೆ ಯಶಸ್ವಿಯಾಗುತ್ತದೆ ಎಂಬುದನ್ನು ಕಾದು ನೋಡಬೇಕಿದೆ.

## ಅಂಬೇಡ್ಕರ್ ಭವನದಲ್ಲಿ ಡಿಸ್ನಿಯ ಅಲ್ಲಾದೀನ್ ಜೂನಿಯರ್ ಪ್ರದರ್ಶನ



ಡಿಸ್ನಿಯ ಅಲಾದಿನ್ ಜೂನಿಯರ್ 1992 ರ ಅಕಾಡೆಮಿ ಪ್ರಶಸ್ತಿ ವಿಜೇತ ಚಿತ್ರ ಮತ್ತು 2014 ರ ಜನಪ್ರಿಯ ಬ್ರಾಡ್ವೇ ಶೋ ಆಧಾರಿತವಾಗಿದೆ, ಇದು ಡೈಮಂಡ್ ಇನ್ ದಿ ರಫ್ ಒಂದು ಹುಡುಗನ ಬಗ್ಗೆ ಕಥೆಯನ್ನು ಹೇಳುತ್ತದೆ, ಅವನ ನಿಜವಾದ ಮೌಲ್ಯವು ಆಳದಲ್ಲಿ ಅಡಗಿದೆ ಎಂಬುದನ್ನು ಆತನು ಕಲಿಯುತ್ತಾನೆ.

ನೀವು ಪರಿಚಯವಿರುವ ಮತ್ತು ಇಷ್ಟಪಡುವ ಈ ಕಥೆಯನ್ನು ರಾಜಮರ್ಯಾದೆಯೊಂದಿಗೆ ಸಿದ್ಧಪಡಿಸಲಾಗಿದೆ! ಅಲಾದಿನ್ ಮತ್ತು ಅವನ ಮೂವರು ಸ್ನೇಹಿತರು ಬಬ್ಕಾಕ್, ಓಮರ್, ಮತ್ತು ಕಾಸಿಂ ಅವರ ಭಾಗ್ಯ ತಗ್ಗಿದಾಗ, ಅಲಾದಿನ್ ಒಂದು ಮಾಂತ್ರಿಕ ದೀಪವನ್ನು ಮತ್ತು ಮೂರು ಆಸೆಗಳನ್ನು ಪೂರೈಸುವ ಶಕ್ತಿಯಿರುವ ಜೀನಿಯನ್ನು ಕಂಡುಹಿಡಿಯುತ್ತಾನೆ. ಮಹಾರಾಣಿ ಜಾಸ್ಮಿನ್ನ ಗೌರವವನ್ನು ಗಳಿಸಲು ಬಯಸುವ ಅಲಾದಿನ್ ತನ್ನ ಉತ್ಸಾಹ ಮತ್ತು ನೈತಿಕತೆಯನ್ನು ಪರೀಕ್ಷಿಸುವ ಒಂದು ಸಾಹಸವನ್ನು ಪ್ರಾರಂಭಿಸುತ್ತಾನೆ. ಹೆಚ್ಚಿದ ಪಾತ್ರಗಳು, ಹೊಸ ಹಾಡುಗಳು ಮತ್ತು ಹೆಚ್ಚು ರೋಮಾಂಚನದೊಂದಿಗೆ, ಈ ಪ್ರಿಯ ಕಥೆಯ ಹೊಸ ಅನುವಾದವು ಕಿರಿಯ ಪ್ರೇಕ್ಷಕರಿಗೆ ಒಂದು ಹೊಸ ಜಗತ್ತನ್ನು ತೆರೆದಿಡುತ್ತದೆ!

ಜೆಪಿ ನಗರದಲ್ಲಿರುವ ಬ್ರಿಗೇಡ್ ಶಾಲೆಯ ವಿದ್ಯಾರ್ಥಿಗಳು ಪ್ರದರ್ಶಿಸಿದ ಮತ್ತು ತಮ್ಮ 10ನೇ ವರ್ಷವನ್ನು ಆಚರಿಸುತ್ತಿರುವ ಬೆಂಗಳೂರಿನ ಇಂಬ್ರೊಗ್ಲಿಯೋ ಪ್ರೊಡಕ್ಷನ್ಸ್ ಸಂಸ್ಥೆಯವರಿಂದ ಪರಿಕಲ್ಪನೆ ಮಾಡಲಾಗಿರುವ ಈ ಶಾಶ್ವತ ಕಥೆಯು ಕಣ್ತುಂಬ ಸೌಂದರ್ಯದ ಮನರಂಜನೆ ನೀಡುತ್ತದೆ ಮತ್ತು ಇದು ತಪ್ಪದೇ ನೋಡಬೇಕಾದ ಪ್ರದರ್ಶನವಾಗಿದೆ!

### ಯುವಸ್ಪಿಗಳು

**ಭಾರತದಲ್ಲಿ ಮೊಟ್ಟಮೊದಲ ಅಧಿಕೃತ ಅನುಮೋದನೆಯೊಂದಿಗೆ ಅಲಾದಿನ್ ಜೂನಿಯರ್, ಅದ್ಭುತ ದೃಶ್ಯಗಳು, ವಸ್ತ್ರಸಾಮಾನುಗಳು ಮತ್ತು ಸೆಟ್ಗಳನ್ನು ಅನುಭವಿಸಲು ಸಿದ್ಧವಾಗಿರಿ! ಆಧುನಿಕ ಸಂದೇಶವಿರುವ ಶಾಶ್ವತ ಕಥೆ! 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೇರವಾಗಿ ವೇದಿಕೆಯ ಮೇಲೆ!ಈ ವರ್ಷ, ಶಿಕ್ಷಣ ಕ್ಷೇತ್ರದಲ್ಲಿ ನಮ್ಮ ಸೇವೆಯನ್ನು ಸ್ಮರಿಸಲು, ನಮ್ಮ ವಿದ್ಯಾರ್ಥಿಗಳು ಭಾರತದಲ್ಲಿ ಮೊದಲ ಬಾರಿಗೆ ಮೂಡಿಬರಲಿರುವ ಡಿಸ್ನಿಯ ಅಲಾದಿನ್ ಜೂನಿಯರ್ನ ಅದ್ಭುತ ಪ್ರದರ್ಶನವನ್ನು ಪ್ರತ್ಯಕ್ಷವಾಗಿ ತೋರಿಸಲು ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದಾರೆ! ಇಂಬ್ರೊಗ್ಲಿಯೋ ಪ್ರೊಡಕ್ಷನ್ಸ್ ನಿರ್ದೇಶಿಸಿರುವ ಈ ಪ್ರೊಡಕ್ಷನ್ ನಮ್ಮ ಇಂದ್ರಿಯಗಳಿಗೆ ದೃಶ್ಯಮಾಧುರ್ಯವನ್ನು ಒದಗಿಸುತ್ತದೆ; ಅದ್ಭುತ ಅಭಿನಯ, ನೃತ್ಯ, ಗಾಯನ, ವಸ್ತ್ರಸಾಮಾನು, ಸೆಟ್ಗಳು, ಪ್ರಾಪ್ಸ್ಗಳು ಮತ್ತು ಇನ್ನಷ್ಟು ಮಿಸೆಸ್ ಗೀತಾ ಶಂಕರ (ಸ್ಥಾಪಕಿ, ಬ್ರಿಗೇಡ್ ಶಾಲೆ) ''ಡಿಸ್ನಿಯ ಅಲಾದಿನ್ ಜೂನಿಯರ್ ಆಯ್ಕೆ ಮಾಡುವುದು ನಮ್ಮ ವಿದ್ಯಾರ್ಥಿಗಳಿಗೆ ದೇಹದ ಅರಿವನ್ನು ಮೀರಲು ಮತ್ತು ಆತ್ಮಜ್ಞಾನದ ಮಹತ್ವವನ್ನು ಮತ್ತೆ ಅರಿಯಲು ಸಹಾಯ ಮಾಡುವ ಉದ್ದೇಶವಿತ್ತು. ನಾವು ಎಲ್ಲರೂ, ಧರ್ಮ ಅಥವಾ ಜಾತಿಯನ್ನು ಮೀರಿ, ಒಬ್ಬ ದೇವರ ಮಕ್ಕಳು ಎಂಬ ಅಂಶವನ್ನು ನೆನಪಿಸಲು ಇದು ಏರ್ಪಡಿಸಲಾಯಿತು! ಪ್ರೇಕ್ಷಕರು ಈ ಸಂಗೀತ ನಾಟಕವನ್ನು ಆನಂದಿಸಿ, ಅದ್ಭುತ, ಸಾಹಸ, ಮತ್ತು ಮನಸ್ಸನ್ನು ಮುಟ್ಟುವ ಉಜ್ವಲ ಜಗತ್ತಿಗೆ ಪ್ರವೇಶಿಸುವರು ಎಂಬುದರಲ್ಲಿ ನನಗೆ ಖಚಿತತೆ ಇದೆ. ನಮ್ಮ ಪ್ರತಿಭಾವಂತ ಕಲಾವಿದರು ಮತ್ತು ತಂಡ ಈ ಪ್ರಿಯ ಕಥೆಯನ್ನು ಜೀವಂತವಾಗಿ ಮೂಡಿಸಲು ಹೃದಯಸ್ಪರ್ಶಿಯಾಗಿ ಶ್ರಮಿಸಿದ್ದಾರೆ. ಈ ಮನಮೋಹಕ ಸಂಗೀತ ನಾಟಕವು ಪ್ರೇಕ್ಷಕರಿಗೆ ಹಳೆಯ ಸ್ಮೃತಿಗಳನ್ನು ಪುನರ್ಜೀವನಗೊಳಿಸಿ, ಕಲ್ಪನೆಯ ಶಕ್ತಿ, ಧೈರ್ಯ ಮತ್ತು ಪ್ರೀತಿಯ ಬಾಂಧವ್ಯಗಳಲ್ಲಿ ನಿಜವಾದ ಮಾಯೆ ಅಡಗಿದೆ ಎಂಬುದನ್ನು ನೆನಪಿಸಲಿದೆ. ಈ ಸಂಗೀತ ನಾಟಕದ ಪ್ರತಿ ಭಾಗವನ್ನು ಪರಿಕಲ್ಪನೆ ಮತ್ತು ಅನುಷ್ಠಾನ ಪ್ರಕ್ರಿಯೆ ತಾರತಮ್ಯವಿಲ್ಲದ ಸೃಜನಶೀಲತೆಯನ್ನು ಪ್ರತಿಬಿಂಬಿಸುತ್ತದೆ ದಿವ್ಯೇಶ್ ಭಂಡಾರಿ (ಶೋ ನಿರ್ದೇಶಕ)**



## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಕೃಷಿಕರಿಗೆ ಅನುಕೂಲ, ತಾಯಿಯಿಂದ ಸಹಕಾರ, ಗೃಹ ನಿರ್ಮಾಣ, ವಿದ್ಯಾಭ್ಯಾಸದಲ್ಲಿ ಆಸಕ್ತಿ.

**ವೃಷಭ:** ದೂರ ಪ್ರಯಾಣ, ಸಂಬಂಧಿಕರಿಂದ ಸಹಾಯ ನಿರೀಕ್ಷೆ, ಮಾನಸಿಕ ತೊಳಲಾಟ, ಮಾತಿನಿಂದ ಸಮಸ್ಯೆ.

**ಮಿಥುನ:** ಅನಿರೀಕ್ಷಿತ ಧನಾಗಮನ, ಕುಟುಂಬ ಕಲಹಗಳು, ಬಂಧುಗಳಿಂದ ನಷ್ಟ, ಪ್ರಯಾಣದಲ್ಲಿ ವಿಘ್ನ.

**ಕಟಕ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಪಾಲುದಾರಿಕೆಯಲ್ಲಿ ಕಲಹ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಉದ್ಯೋಗದಲ್ಲಿ ಚಟುವಟಿಕೆ.

**ಸಿಂಹ:** ಸಾಲದ ಚಿಂತೆ, ಅವಮಾನ ಮತ್ತು ಅಪವಾದಗಳು, ದಾಂಪತ್ಯದಲ್ಲಿ ನಿರಾಸಕ್ತಿ, ಕಷ್ಟದ ದಿನಗಳ ನೆನಪು.

**ಕನ್ಯಾ:** ಮಕ್ಕಳಿಂದ ಲಾಭ, ವಿದ್ಯಾಭ್ಯಾಸದಲ್ಲಿ ಅನುಕೂಲ, ಮಿತ್ರರಿಂದ ಸಹಕಾರ, ಉತ್ತಮ ಹೆಸರು ಮತ್ತು ಪ್ರಶಂಸೆ.

**ತುಲಾ:** ಕೃಷಿ ಕ್ಷೇತ್ರದವರಿಗೆ ಅನುಕೂಲ, ಧಾರ್ಮಿಕ ಆಲೋಚನೆ, ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ, ಆರ್ಥಿಕ ಸಮತೋಲನ.

**ವೃಶ್ಚಿಕ:** ಹತ್ತಿರದ ಪ್ರಯಾಣ, ತಂದೆಯಿಂದ ಸಹಕಾರ, ಸ್ಥಿರಾಸ್ತಿ ವಾಹನದಿಂದ ತೊಂದರೆ, ಆರ್ಥಿಕವಾಗಿ ಅಲ್ಪ ಚೇತರಿಕೆ.

**ಧನಸ್ಸು:** ಆಕಸ್ಮಿಕ ಧನಾಗಮನ, ಕುಟುಂಬ ಕಲಹಗಳು, ಮಕ್ಕಳ ಭವಿಷ್ಯದ ಚಿಂತೆ, ಕೋರ್ಟ್ ವ್ಯಾಜ್ಯಗಳ ಆತಂಕ.

**ಮಕರ:** ಆರ್ಥಿಕ ಬೆಳವಣಿಗೆ, ಕೌಟುಂಬಿಕ ಸಮಸ್ಯೆಗಳ ಚಿಂತೆ, ಅವಿವೇಕದ ಆಲೋಚನೆ, ಅಧಿಕ ಕೋಪ.

**ಕುಂಭ:** ಸಾಲದ ಚಿಂತೆ, ಶತ್ರು ಕಾಟ, ವ್ಯಾಪಾರದಲ್ಲಿ ನಷ್ಟ, ಅನಾರೋಗ್ಯದ ಭಯ, ಉದ್ಯೋಗ ನಷ್ಟ.

**ಮೀನ:** ವಿದ್ಯಾಭ್ಯಾಸದಲ್ಲಿ ಪ್ರಗತಿ, ಮಕ್ಕಳಿಂದ ಅನುಕೂಲ ಲಾಭದಲ್ಲಿ ಚೇತರಿಕೆ, ದೂರ ಪ್ರದೇಶದ ಉದ್ಯೋಗ.

## ವಿಶ್ವ ರೇಡಿಯೊಗ್ರಫಿ

ವಿಶ್ವ ರೇಡಿಯಾಗ್ರಫಿ ದಿನವನ್ನು ಪ್ರತಿ ವರ್ಷ ನವೆಂಬರ್ 8 ರಂದು ಎಕ್ಸ್-ಕಿರಣಗಳ ಜನ್ಮ ವಾರ್ಷಿಕೋತ್ಸವದಂದು ಆಚರಿಸಲಾಗುತ್ತದೆ. ನಾವೆಲ್ಲರೂ ಒಂದನ್ನು ಮಾಡಿದ್ದೇವೆ ಆದರೆ ನಾವೆಲ್ಲರೂ ಈ ಅದ್ಭುತ ತಂತ್ರಜ್ಞಾನವನ್ನು ಲಘುವಾಗಿ ತೆಗೆದುಕೊಳ್ಳುತ್ತೇವೆ. ಕ್ಷ-ಕಿರಣಗಳು ಅಸ್ತಿತ್ವದಲ್ಲಿಲ್ಲದ ಜಗತ್ತನ್ನು ಕಲ್ಪಿಸಿಕೊಳ್ಳುವುದು ಕಷ್ಟ. ಅವು ಅನೇಕ ವೈದ್ಯಕೀಯ ರೋಗನಿರ್ಣಯ ಸಾಧನಗಳ ಅಡಿಪಾಯವಾಗಿದೆ ಮತ್ತು ವೈದ್ಯರಿಗೆ ಹಲವಾರು ಸಮಸ್ಯೆಗಳನ್ನು ಕಂಡುಹಿಡಿಯಲು ಸಹಾಯ ಮಾಡುತ್ತದೆ. ಅದ್ಭುತವಾದ ಸಂಗತಿಯೆಂದರೆ ಅವರು ಇದನ್ನು ಕೆಲವೇ ನಿಮಿಷಗಳಲ್ಲಿ ಮತ್ತು ಸಂಪೂರ್ಣವಾಗಿ ನೋವುರಹಿತವಾಗಿ ಮಾಡುತ್ತಾರೆ! ಕ್ಷ-ಕಿರಣಗಳನ್ನು ಸಾಧ್ಯವಾಗಿಸುವ ಕಷ್ಟಪಟ್ಟು ದುಡಿಯುವ ರೇಡಿಯೋಗ್ರಾಫರ್ಗಳು ಮತ್ತು ವಿಕಿರಣಶಾಸ್ತ್ರಜ್ಞರನ್ನು ಸಹ ಈ ದಿನ ಆಚರಿಸುತ್ತದೆ. 1895 ರಲ್ಲಿ ಜರ್ಮನಿಯ ವೂರ್ಜ್ಬರ್ಗ್ ವಿಶ್ವವಿದ್ಯಾಲಯದ ಪ್ರೊಫೆಸರ್ ವಿಲ್ಹೆಲ್ಮ್ ಕಾನ್ರಾಡ್ ರಾಂಟ್ಜೆನ್ ಅವರು ಆಕಸ್ಮಿಕವಾಗಿ ಎಕ್ಸ್-ಕಿರಣಗಳನ್ನು ಕಂಡುಹಿಡಿದರು. ರಾಂಟ್ಜೆನ್ ತನ್ನ ಪ್ರಯೋಗಾಲಯದಲ್ಲಿ ಕ್ಯಾಥೋಡ್-ರೇ ಟ್ಯೂಬ್ನೊಂದಿಗೆ ಕೆಲಸ ಮಾಡುತ್ತಿದ್ದಾಗ, ತನ್ನ ಟ್ಯೂಬ್ನ ಹತ್ತಿರ ಮೇಜಿನ ಮೇಲೆ ಹರಳುಗಳ ಪ್ರತಿದೀಪಕ ಹೊಳಪನ್ನು ಗಮನಿಸಿದನು. ಋಣಾತ್ಮಕ ಮತ್ತು ಧನಾತ್ಮಕ ವಿದ್ಯುದ್ವಾರಗಳೊಂದಿಗೆ ಬಲ್ಬ್. ಟ್ಯೂಬ್ನಲ್ಲಿನ ಗಾಳಿಯನ್ನು ಸ್ಥಳಾಂತರಿಸಿದಾಗ ಮತ್ತು ಹೆಚ್ಚಿನ ವೋಲ್ಟೇಜ್ ಅನ್ನು ಅನ್ವಯಿಸಿದಾಗ, ಟ್ಯೂಬ್ ಪ್ರತಿದೀಪಕ ಹೊಳಪನ್ನು ಉತ್ಪಾದಿಸಲು ಪ್ರಾರಂಭಿಸಿತು. ಟ್ಯೂಬ್ ಅನ್ನು ಕಪ್ಪು ಕಾಗದದಿಂದ ರಕ್ಷಿಸಿ, ಟ್ಯೂಬ್ನಿಂದ ಕೆಲವು ಅಡಿಗಳಷ್ಟು ದೂರದಲ್ಲಿರುವ ವಸ್ತುವು ಹಸಿರು ಪ್ರತಿದೀಪಕ ಬೆಳಕನ್ನು ಉತ್ಪಾದಿಸುತ್ತದೆ ಎಂದು ಅವರು ಕಂಡುಕೊಂಡರು.

ಈ ಅವಲೋಕನಗಳೊಂದಿಗೆ, ಟ್ಯೂಬ್ ಹೊಸ ರೀತಿಯ ಕಿರಣವನ್ನು ಹೊರಸೂಸುತ್ತಿದೆ ಎಂದು ಅವರು ತೀರ್ಮಾನಿಸಿದರು, ಅದು ಕಾಗದದ ಹೊದಿಕೆಯ ಮೂಲಕ ಹಾದುಹೋಗುವ ಮತ್ತು ಫಾಸ್ಫೊರೆಸೆಂಟ್ ವಸ್ತುಗಳನ್ನು ಪ್ರಚೋದಿಸುವ ಸಾಮರ್ಥ್ಯವನ್ನು ಹೊಂದಿದೆ. ಈ ಹೊಸ ಕಿರಣವು ಹಲವಾರು ವಸ್ತುಗಳ ಮೂಲಕ ಹಾದುಹೋಗುತ್ತದೆ, ಘನ ವಸ್ತುಗಳ ಮೇಲೆ ನೆರಳುಗಳನ್ನು ಬೀಳಿಸುತ್ತದೆ ಎಂದು ಅವರು ಕಂಡುಹಿಡಿದರು. ಕಿರಣವು ಮಾನವ ಅಂಗಾಂಶಗಳ ಮೂಲಕ ಹಾದುಹೋಗಬಹುದು ಆದರೆ ಮೂಳೆಗಳು ಮತ್ತು ಲೋಹದ ಮೂಲಕ ಅಲ್ಲ ಎಂದು ರಾಂಟ್ಜೆನ್ ಅರಿತುಕೊಂಡರು. ಅವನ ಮೊದಲ ಪ್ರಯೋಗಗಳಲ್ಲಿ ಒಂದಾದ ಅವನ ಹೆಂಡತಿಯ ಕೈಯ ಚಿತ್ರವು ಅವಳ ಮೂಳೆಗಳು ಮತ್ತು ಉಂಗುರವು ಗೋಚರಿಸುತ್ತದೆ. ಈ ಆವಿಷ್ಕಾರವು ವೈಜ್ಞಾನಿಕ ಪ್ರಗತಿಯಾಗಿದೆ ಮತ್ತು ವಿಜ್ಞಾನಿಗಳು ಮತ್ತು ಎಲ್ಲರೂ ಉತ್ಸಾಹದ ಆಸಕ್ತಿಯಿಂದ ಸರಿಯಾಗಿ ಸ್ವೀಕರಿಸಿದರು! ಕ್ಯಾಥೋಡ್ ಟ್ಯೂಬ್ ಆಗ ಬಹಳ ಪ್ರಸಿದ್ಧವಾಗಿದ್ದ ಕಾರಣ ಇತರ ವಿಜ್ಞಾನಿಗಳು ಅವರ ಪ್ರಯೋಗವನ್ನು ಸುಲಭವಾಗಿ ನಕಲು ಮಾಡಬಹುದು. ಹಲವಾರು ವಿಜ್ಞಾನಿಗಳು ಈ ಹೊಸದಾಗಿ ಕಂಡುಹಿಡಿದ ಕಿರಣಗಳನ್ನು ಅನುಸರಿಸಲು ಸಂಶೋಧನೆಯ ಇತರ ಮಾರ್ಗಗಳನ್ನು ಕೈಬಿಟ್ಟರು, ಆವಿಷ್ಕಾರವು ಭಾರೀ ಮಾಧ್ಯಮ ಪ್ರಸಾರವನ್ನು ಪಡೆಯಿತು. ಆವಿಷ್ಕಾರದ ಕೇವಲ ಒಂದು ತಿಂಗಳ ನಂತರ ಯುರೋಪ್ ಮತ್ತು ಗ.ಖ. ನಲ್ಲಿ ಹಲವಾರು ವೈದ್ಯಕೀಯ ಸಿಬ್ಬಂದಿ ರೇಡಿಯೋಗ್ರಾಫ್ಗಳನ್ನು ಬಳಸಲಾರಂಭಿಸಿದರು. ಆರು ತಿಂಗಳ ನಂತರ, ಗಾಯಗೊಂಡ ಸೈನಿಕರಿಗೆ ಸಹಾಯ ಮಾಡಲು ರೇಡಿಯೋಗ್ರಾಫ್ಗಳು ಯುದ್ಧಭೂಮಿಗೆ ತಮ್ಮ ಮಾರ್ಗವನ್ನು ಕಂಡುಕೊಂಡವು.



# ಟ್ರಂಪ್ ಅಧಿಕಾರ ವಹಿಸಿಕೊಂಡ ಎರಡೇ ಸೆಕೆಂಡಲ್ಲಿ ಜಾಕ್ ಸ್ಮಿತ್ ವಜಾ

ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಎರಡೇ ಸೆಕೆಂಡುಗಳಲ್ಲಿ ವಿಶೇಷ ಸರ್ಕಾರಿ ವಕೀಲ ಜಾಕ್ ಸ್ಮಿತ್ ಅವರನ್ನು ವಜಾ ಮಾಡುವುದಾಗಿ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬೆನ್ನಲ್ಲೇ ತಾವು ನೀಡಿರುವ ಸಂದರ್ಶನವೊಂದರಲ್ಲಿ ಟ್ರಂಪ್ ಈ ವಿಷಯ ಪ್ರಸ್ತಾಪಿಸಿದ್ದಾರೆ ನಿಮ್ಮ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯನ್ನು ತಪ್ಪಿಸಲು ಸ್ಮಿತ್ ಅವರನ್ನು ವಜಾಗೊಳಿಸುವಿರಾ ಎಂಬ ಪ್ರಶ್ನೆಗೆ, 'ಅಧಿಕಾರ ವಹಿಸಿಕೊಂಡ ಎರಡೇ ಸೆಕೆಂಡುಗಳಲ್ಲಿ ಅವರನ್ನು ವಜಾಗೊಳಿಸುವೆ. ಅದು ತುಂಬಾ ಸುಲಭ' ಎಂದು ಉತ್ತರಿಸಿದ್ದಾರೆ. 2020ರ ಅಮೆರಿಕದ ಅಧ್ಯಕ್ಷೀಯ ಚುನಾವಣೆಯ ಫಲಿತಾಂಶವನ್ನು ತಿರುಚಲು ಯತ್ನಿಸಿದ ಮತ್ತು ಶ್ವೇತಭವನದ ರಹಸ್ಯ ದಾಖಲೆಗಳನ್ನು ತಮ್ಮ ಖಾಸಗಿ ನಿವಾಸಕ್ಕೆ ಕೊಂಡೊಯ್ದ ಆರೋಪಗಳಡಿ ಟ್ರಂಪ್ ವಿರುದ್ಧ ಪ್ರಕರಣಗಳು ದಾಖಲಾಗಿವೆ. ಈ ಪ್ರಕರಣಗಳಲ್ಲಿ ವಿಶೇಷ ಸರ್ಕಾರಿ ವಕೀಲ ಜಾಕ್ ಸ್ಮಿತ್ ವಾದಿಸಿದ್ದರು.

ಸ್ಮಿತ್ ವಿರುದ್ಧ ಟೀಕೆ ಮಾಡುತ್ತಾ ಬಂದಿರುವ ಟ್ರಂಪ್, 'ಈ ಬಾರಿಯ ಚುನಾವಣೆಯಲ್ಲಿ ಗೆದ್ದು ಅಧಿಕಾರ ಸ್ವೀಕರಿಸಿದ ನಂತರ ಅವರನ್ನು ಕಿತ್ತೊಗೆಯುವೆ' ಎಂದಿದ್ದರು. ಸ್ಮಿತ್ ಒಬ್ಬ 'ಮೋಸಗಾರ' ಎಂದು ಜರೆದಿದ್ದರು. ಅಟಾರ್ನಿ ಜನರಲ್ ಮೆರಿಕ್ ಗಾರ್ಲಂಡ್ ಅವರು 2022ರಲ್ಲಿ ಸ್ಮಿತ್ ಅವರನ್ನು ವಿಶೇಷ ಸರ್ಕಾರಿ ವಕೀಲರಾಗಿ ನೇಮಕ ಮಾಡಿದ್ದರು.

## 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಸೋಶಿಯಲ್ ಮೀಡಿಯಾ ಬ್ಯಾನ್!



ಮಾನಸಿಕ ಆರೋಗ್ಯವನ್ನು ಸುರಕ್ಷಿತವಾಗಿಡುವ ಉದ್ದೇಶದಿಂದ 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಆಸ್ಟ್ರೇಲಿಯಾದಲ್ಲಿ ಸಾಮಾಜಿಕ ಮಾಧ್ಯಮ ಬಳಸಲು ಅನುಮತಿ ನೀಡಲಾಗುವುದಿಲ್ಲ ಎಂದು ಪ್ರಧಾನಿ ಆಂಥೋನಿ ಅಲ್ಬನೀಸ್ ಘೋಷಣೆ ಮಾಡಿದ್ದಾರೆ.

ಇದಕ್ಕಾಗಿ ಸಂಬಂಧಪಟ್ಟ ಕಂಪನಿಗಳು ಹೊಸ ನಿಯಮಗಳನ್ನು ಜಾರಿಗೆ ತರಬೇಕಾಗುತ್ತದೆ. ನಿಯಮ ಉಲ್ಲಂಘಿಸಿದ್ರೆ, ಭಾರೀ ಪ್ರಮಾಣದಲ್ಲಿ ಕಂಪನಿಗಳು ದಂಡ ಕಟ್ಟಬೇಕಾಗುತ್ತದೆ. ಶೀಘ್ರದಲ್ಲೇ ಸಂಸತ್ತಿನಲ್ಲಿ ಮಸೂದೆಯನ್ನು ಮಂಡಿಸಲಾಗುವುದು ಎಂದು ಪ್ರಧಾನಿ ಹೇಳಿದ್ದಾರೆ. ಮಕ್ಕಳು ಸೋಶಿಯಲ್ ಮೀಡಿಯಾ ಬಳಸಿದರೆ ಅದಕ್ಕೆ ಆಯಾ ಕಂಪನಿಗಳೇ ನೇರ ಹೊಣೆ. ಇಲ್ಲಿ ಪಾಲಕರನ್ನು, ಯುವಕರನ್ನು ನಾವು ಹೊಣೆ ಮಾಡುತ್ತಿಲ್ಲ. ಮಕ್ಕಳ ಸೋಶಿಯಲ್ ಮೀಡಿಯಾ ಪ್ರವೇಶವನ್ನು ತಡೆಗಟ್ಟಲು ಸೋಶಿಯಲ್ ಮೀಡಿಯಾ ವೇದಿಕೆಗಳು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು. ಸಾಮಾಜಿಕ ಮಾಧ್ಯಮಗಳು ನಮ್ಮ ಮಕ್ಕಳಿಗೆ ಹಾನಿ ಮಾಡುತ್ತಿವೆ. 15 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿವೆ ಅನ್ನೋದು ಅನೇಕ ಸಂಶೋಧನೆಯಿಂದ ದೃಢಪಟ್ಟಿದೆ ಎಂದು ತಿಳಿಸಿದ್ದಾರೆ. ಫ್ರಾನ್ಸ್‌ನಲ್ಲಿ 15 ವರ್ಷಕ್ಕಿಂತ ಕಡಿಮೆ ವಯಸ್ಸಿನ ಸಾಮಾಜಿಕ ಮಾಧ್ಯಮ ಬಳಕೆದಾರರು ಪೋಷಕರ ಅನುಮತಿಯನ್ನು ತೆಗೆದುಕೊಳ್ಳಬೇಕಾಗುತ್ತದೆ. ಕೆಲವು ದೇಶಗಳಲ್ಲಿ 13 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ TikTokಮತ್ತು Instagram ನಂತಹ ಪ್ಲಾಟ್‌ಫಾರ್ಮ್‌ಗಳನ್ನು ಬಳಸಲು ರೂಲ್ಸ್ ಮಾಡಲಾಗಿದೆ.

### ಗಾಝಾದಲ್ಲಿ ಇಸ್ರೇಲ್ ದಾಳಿ

## 22 ಫೆಲೆಸ್ತೀನೀಯರ ಸಾವು

**ಗಾಝಾ:** ಗಾಝಾ ಪಟ್ಟಿಯ ವಿವಿಧ ಪ್ರದೇಶಗಳ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ಕನಿಷ್ಠ 22 ಫೆಲೆಸ್ತೀನೀಯರು ಸಾವನ್ನಪ್ಪಿದ್ದಾರೆ ಎಂದು ಫೆಲೆಸ್ತೀನ್ ಮೂಲಗಳು ತಿಳಿಸಿವೆ

ಉತ್ತರ ಗಾಝಾದಲ್ಲಿ ಇಸ್ರೇಲ್ ಸೇನೆಯು ತೀವ್ರ ಬಾಂಬ್ ದಾಳಿ ಮತ್ತು ಫಿರಂಗಿ ಶೆಲ್ ದಾಳಿಯನ್ನು ಮುಂದುವರಿಸಿದೆ ಎಂದು ಫೆಲೆಸ್ತೀನ್ ಭದ್ರತಾ ಮೂಲಗಳು ಗುರುವಾರ ತಿಳಿಸಿವೆ

ಜಬಾಲಿಯಾ ನಿರಾಶ್ರಿತರ ಶಿಬಿರದ ಪಶ್ಚಿಮದಲ್ಲಿರುವ ಪ್ಯಾಲೆಸ್ಟೀನಿಯರ ಸಭೆಯನ್ನು ಗುರಿಯಾಗಿಸಿಕೊಂಡು ಇಸ್ರೇಲಿ ಫಿರಂಗಿ ದಾಳಿ ನಡೆಸಿದ ಪರಿಣಾಮ ಆರು ಮಂದಿ ಸಾವನ್ನಪ್ಪಿದ್ದು, ಡಜನ್ಗಟ್ಟಲೆ ಮಂದಿ ಗಾಯಗೊಂಡಿದ್ದು, ಅವರನ್ನು ನಾಗರಿಕ ವಾಹನಗಳಲ್ಲಿ ಆಸ್ಪತ್ರೆಗಳಿಗೆ ಸಾಗಿಸಲಾಗಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಮತ್ತೊಂದು ದಾಳಿಯಲ್ಲಿ, ಬೀಟ್ ಲಾಹಿಯಾ ಪಟ್ಟಣದಲ್ಲಿ ಇಸ್ರೇಲಿ ವಿಮಾನಗಳು ಮನೆ ಮತ್ತು ಸಭೆಯ ಮೇಲೆ ಬಾಂಬ್ ದಾಳಿ ನಡೆಸಿದ ಪರಿಣಾಮ ಎಂಟು ಫೆಲೆಸ್ತೀನೀಯರು ಸಾವನ್ನಪ್ಪಿದ್ದಾರೆ ಎಂದು ವೈದ್ಯರು ವರದಿ ಮಾಡಿದ್ದಾರೆ.

ಇದಲ್ಲದೆ, ಮಧ್ಯ ಗಾಝಾದ ನುಸೆರಾತ್ ಶಿಬಿರದ ಪಶ್ಚಿಮಕ್ಕೆ ಜನರ ಗುಂಪನ್ನು ಗುರಿಯಾಗಿಸಿಕೊಂಡು



ನಡೆದ ಬಾಂಬ್ ದಾಳಿಯಲ್ಲಿ ಮೂವರು ಫೆಲೆಸ್ತೀನೀಯರು ಸಾವನ್ನಪ್ಪಿದ್ದಾರೆ ಎಂದು ಗಾಝಾದಲ್ಲಿನ ಫೆಲೆಸ್ತೀನ್ ಸಿವಿಲ್ ಡಿಫೆನ್ಸ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದೆ.

ದಕ್ಷಿಣ ಗಾಝಾ ಪಟ್ಟಿಯ ಪೂರ್ವ ರಫಾದಲ್ಲಿ ಸಭೆಯನ್ನು ಗುರಿಯಾಗಿಸಿಕೊಂಡು ಡ್ರೋನ್ ದಾಳಿ ನಡೆಸಿದಾಗ ಐವರು ಯುವಕರು ಸಾವನ್ನಪ್ಪಿದ್ದಾರೆ ಎಂದು ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ.

## ಸೌದಿ ಅರೇಬಿಯಾದಲ್ಲಿ ಹಿಮಪಾತ!

**ಸೌದಿ ಅರೇಬಿಯಾ:** ಇತಿಹಾಸದಲ್ಲಿ ಮೊದಲ ಬಾರಿಗೆ ಸೌದಿ ಅರೇಬಿಯಾದ ಅಲ್ಜಾಫ್ ಪ್ರದೇಶದಲ್ಲಿ ಭಾರಿ ಪ್ರಮಾಣದಲ್ಲಿ ಹಿಮಪಾತವಾಗಿದೆ. ಮರಭೂಮಿ ಪ್ರದೇಶ ಹಾಗೂ ರಸ್ತೆಗಳಲ್ಲಿ ಹಿಮ ಬೀಳುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿವೆ. ಸೌದಿ ಅರೇಬಿಯಾದ ಕೆಲವು ಭಾಗಗಳು ಮೊದಲ ಬಾರಿಗೆ ಭಾರೀ ಮಳೆ ಮತ್ತು ಹಿಮಪಾತವನ್ನು ಕಾಣುತ್ತಿವೆ. ಅಲ್-ಜಾವ್ಫ್ ವರ್ಷವಿಡೀ ಶುಷ್ಕ ಹವಾಮಾನಕ್ಕೆ ಹೆಸರುವಾಸಿಯಾಗಿದೆ. ಆದರೆ ಅಲ್-ಜಾವ್ಫ್ ಪ್ರದೇಶವು ಭಾರೀ ಹಿಮಪಾತವನ್ನು ಅನುಭವಿಸುತ್ತಿದ್ದು, ಸ್ಥಳೀಯ ನಿವಾಸಿಗಳಿಗೆ ಆಘಾತವನ್ನು ನೀಡಿದೆ. ಮುಂದಿನ ದಿನಗಳಲ್ಲಿ ಈ ಪ್ರದೇಶದಲ್ಲಿ ಭಾರೀ ಮಳೆ ಮತ್ತು ಆಲಿಕಲ್ಲು ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ತಜ್ಞರು ಎಚ್ಚರಿಸಿದ್ದಾರೆ. ಹವಾಮಾನ ವೈಪರೀತ್ಯದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.



## ಆಸ್ಟ್ರೇಲಿಯಾ ಟುಡೇ ಪ್ರಸಾರಕ್ಕೆ ನಿಷೇಧ

**ನವದೆಹಲಿ:** ಈಗಾಗಲೇ ಭಾರತ ಮತ್ತು ಕೆನಡಾ ನಡುವಿನ ದ್ವಿಪಕ್ಷೀಯ ಸಂಬಂಧ ಹದಗೆಟ್ಟಿದ್ದು ಈ ಮಧ್ಯೆ ಮೇಲಿಂದ ಮೇಲೆ ಕೆನಡಾ ತನ್ನ ಉದ್ಧಟತನ ಮುಂದುವರೆಸಿದೆ. ಭಾರತ-ಕೆನಡಾ ನಡುವಿನ ರಾಜತಾಂತ್ರಿಕ ಬಿಕ್ಕಟ್ಟಿನ ಕುರಿತು ಭಾರತದ ವಿದೇಶಾಂಗ ಸಚಿವ ಜೈಶಂಕರ್ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ್ದನ್ನು ಪ್ರಸಾರ ಮಾಡಿದ್ದಕ್ಕೆ ಅಸ್ಟ್ರೇಲಿಯಾ ಟುಡೇಯನ್ನು ಕೆನಡಾ ನಿಷೇಧಿಸಿದೆ.

ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ಜೈಶಂಕರ್ ಮತ್ತು ಆಸ್ಟ್ರೇಲಿಯಾದ ವಿದೇಶಾಂಗ ವ್ಯವಹಾರಗಳ ಖಾತೆಯ ಸಚಿವೆ ಪೆನ್ನಿ ವಾಂಗ್ ಜಂಟಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡುವಾಗ ಎಸ್.ಜೈಶಂಕರ್ , ಯಾವುದೇ ಪುರಾವೆಗಳಿಲ್ಲದೆ ಭಾರತದ ಮೇಲೆ ಕೆನಡಾ ಆರೋಪ ಮಾಡುತ್ತಿದೆ ಎಂದು ಹೇಳಿದ್ದನ್ನು ಆಸ್ಟ್ರೇಲಿಯಾ ಟುಡೇ ಪ್ರಸಾರ ಮಾಡಿತ್ತು. ಇದಾದ ಕೆಲವೇ ಗಂಟೆಗಳಲ್ಲಿ ಕೆನಡಾ ಸರ್ಕಾರ ಆಸ್ಟ್ರೇಲಿಯಾ ಟುಡೇ ಪ್ರಸಾರವನ್ನು ನಿಷೇಧಿಸಿದೆ. ಈ ಬಗ್ಗೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಪ್ರತಿಕ್ರಿಯಿಸಿದ್ದು, ಆಸ್ಟ್ರೇಲಿಯಾ ಟುಡೇಯನ್ನು ನಿಷೇಧಿಸಿದ ಕೆನಡಾ ನಿರ್ಧಾರ ಖಂಡನೀಯ. ವಾಕ್ ಸ್ವಾತಂತ್ರ್ಯದ ಬಗ್ಗೆ ಮಾತನಾಡುವ ಕೆನಡಾ ಕೇವಲ ಬೂಟಾಟಿಕೆ ಮಾತುಗಳನ್ನಾಡುತ್ತದೆ ಎಂದಿದ್ದಾರೆ.



## ಇಬ್ಬರು ಗ್ರಾಮ ರಕ್ಷಣಾ ಸಿಬ್ಬಂದಿ ಅಪಹರಿಸಿ ಹತ್ಯೆಗೈದ ಭಯೋತ್ಪಾದಕರು

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯಲ್ಲಿ ಇಬ್ಬರು ವಿಲೇಜ್ ಡಿಫೆನ್ಸ್ ಗಾರ್ಡ್‌ಗಳನ್ನು (ವಿಡಿಜಿ) ಅಪಹರಿಸಿದ ಭಯೋತ್ಪಾದಕರು ಗಲ್ಲಿಗೇರಿಸಿದ್ದಾರೆ.

ನಜೀರ್ ಅಹ್ಮದ್ ಮತ್ತು ಕುಲದೀಪ್ ಕುಮಾರ್ ಹತ್ಯೆಯಾದ ಸಿಬ್ಬಂದಿ. ಅವರು ಸ್ಥಳೀಯ ಸಮುದಾಯಗಳನ್ನು ಭಯೋತ್ಪಾದಕರಿಂದ ರಕ್ಷಿಸಲು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಸ್ಥಾಪಿಸಿದ ಗ್ರಾಮ ರಕ್ಷಣಾ ಸಮಿತಿಯ ಸದಸ್ಯರಾಗಿದ್ದರು.



ಇಬ್ಬರು ವ್ಯಕ್ತಿಗಳು ಅಧ್ವಾರಿ ಪ್ರದೇಶದ ಮುಂಜ್ಲಾ ಧಾರ್ ಅರಣ್ಯದಲ್ಲಿ ದನ ಮೇಯಿಸಲು ಹೋಗಿದ್ದರು ಆದರೆ ವಾಪಸಾಗಿರಲಿಲ್ಲ, ಹೀಗಾಗಿ ಅವರನ್ನು ಅಪಹರಿಸಿದ್ದಾರೆ ಎಂಬ ಅನುಮಾನ ಮೂಡಿತು. ಸಂತ್ರಸ್ತರ ಕುಟುಂಬ ಸದಸ್ಯರು ಅಪಹರಣವನ್ನು ದೃಢಪಡಿಸಿದರು, ಕುಲದೀಪ್ ಕುಮಾರ್ ಅವರ ಸಹೋದರ ಪೃಥ್ವಿ, ಅವರ ಸಹೋದರ ಮತ್ತು ಅಹ್ಮದ್ ಅವರನ್ನು ಭಯೋತ್ಪಾದಕರು ಕರೆದೊಯ್ದಿದ್ದಾರೆ ಎಂದು ಹೇಳಿದ್ದಾರೆ. ನನ್ನ ಸಹೋದರ ಮತ್ತು ಅಹ್ಮದ್ ಅವರನ್ನು ಭಯೋತ್ಪಾದಕರು ಅಪಹರಿಸಿ ಕೊಂದಿದ್ದಾರೆ ಎಂದು ನಮಗೆ ಮಾಹಿತಿ ಬಂದಿದೆ ಎಂದು ಪೃಥ್ವಿ ಸುದ್ದಿ ಸಂಸ್ಥೆ ಪಿಟಿಐಗೆ ತಿಳಿಸಿದ್ದಾರೆ. ದಟ್ಟ ಅರಣ್ಯ ಪ್ರದೇಶದಲ್ಲಿ ಪೊಲೀಸರು ಮತ್ತು ಸೇನೆಯಿಂದ ದೊಡ್ಡಮಟ್ಟದಲ್ಲಿ ಜಂಟಿ ಶೋಧ ಕಾರ್ಯಾಚರಣೆಯನ್ನು ಆರಂಭಿಸಲಾಯಿತು. ಪಾಕಿಸ್ತಾನ ಮೂಲದ ಜೈಶ್-ಎ-ಮೊಹಮ್ಮದ್ (ಜೆಇಎಂ) ಭಯೋತ್ಪಾದಕ ಗುಂಪಿನ ಒಂದು ಶಾಖೆಯಾದ ಕಾಶ್ಮೀರ ಟೈಗರ್ಸ್ ಹತ್ಯೆಯ ಹೊಣೆ ಹೊತ್ತುಕೊಂಡಿತು. ಅವರು ಸಂತ್ರಸ್ತರ ದೇಹಗಳ ಫೋಟೋಗಳನ್ನು ಬಿಡುಗಡೆ ಮಾಡಿದ್ದಾರೆ.

ಶ್ರೀನಗರದ ಸಂಡೇ ಮಾರ್ಕೆಟ್‌ನಲ್ಲಿ ಗ್ರೆನೇಡ್ ದಾಳಿ ನಡೆದ ಕೆಲವು ದಿನಗಳ ನಂತರ ಈ ಕ್ರೂರ ಹತ್ಯೆಗಳು ನಡೆದಿದೆ. ಗ್ರೆನೇಡ್ ದಾಳಿಯಲ್ಲಿ ಕನಿಷ್ಠ 12 ಜನರು ಗಾಯಗೊಂಡಿದ್ದಾರೆ. ಕಿಶ್ತ್ವಾರ್ ದಾಳಿಯ ದುಷ್ಕರ್ಮಿಗಳನ್ನು ಪತ್ತೆಹಚ್ಚಲು ಅಧಿಕಾರಿಗಳು ತಮ್ಮ ಪ್ರಯತ್ನಗಳನ್ನು ಮುಂದುವರೆಸಿದ್ದಾರೆ, ಸ್ಥಳೀಯ ಪೊಲೀಸರು ಭಯೋತ್ಪಾದಕರನ್ನು ಪತ್ತೆಹಚ್ಚಲು ಕಾರ್ಯಾಚರಣೆಯನ್ನು ತೀವ್ರಗೊಳಿಸಿದ್ದಾರೆ.

## ಐದೇ ತಿಂಗಳಲ್ಲಿ 50 ಟಿಎಂಸಿ ಕಾವೇರಿ ನೀರು ಸಮುದ್ರ ಪಾಲು!

**ಚೆನ್ನೈ:** ಕಳೆದ ಐದು ತಿಂಗಳಲ್ಲಿ ಕಾವೇರಿ ನದಿಯಿಂದ ಸುಮಾರು 50 ಟಿಎಂಸಿ ನೀರು ಸಮುದ್ರ ಸೇರಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಈ ವರ್ಷ ಜೂನ್ ಮತ್ತು ಅಕ್ಟೋಬರ್ ನಡುವೆ ಕರ್ನಾಟಕದಿಂದ 244.52 ಟಿಎಂಸಿ ಅಡಿ ಕಾವೇರಿ ನೀರನ್ನು ತಮಿಳುನಾಡು ಪಡೆದಿದೆ. ಇದು ಅಗತ್ಯ ಪ್ರಮಾಣವಾದ 143.36 ಟಿಎಂಸಿ ಅಡಿಯನ್ನೂ ಮೀರಿದ್ದು, ಹೆಚ್ಚುವರಿ ಒಳಹರಿವು ರಾಜ್ಯಕ್ಕೆ 101.16 ಟಿಎಂಸಿ ಅಡಿಯಷ್ಟಿದೆ.

ಈ ಪೈಕಿ ಸುಮಾರು 50 ಟಿಎಂಸಿ ಅಡಿ ನೀರನ್ನು ಸಮುದ್ರಕ್ಕೆ ಹರಿಸಲಾಗಿದೆ ಎಂದು ತಮಿಳುನಾಡಿನ ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ಬಹಿರಂಗಪಡಿಸಿದ್ದಾರೆ.

ತಮಿಳುನಾಡು ಜಲಸಂಪನ್ಮೂಲ ಇಲಾಖೆಯ ದತ್ತಾಂಶದ ಪ್ರಕಾರ, 'ರಾಜ್ಯದ ಬಹುವಾರ್ಷಿಕ ನೀರಿನ ಮೂಲವಾದ ಮೆಟ್ಟೂರು ಜಲಾಶಯವು ಬುಧವಾರದವರೆಗೆ 74,100 ಟಿಎಂಸಿ ನೀರನ್ನು (79.28%) ಹೊಂದಿದೆ. ಇದು 93,470 ಟಿಎಂಸಿ



ನೀರು ಸಂಗ್ರಹ ಸಾಮರ್ಥ್ಯ ಹೊಂದಿದೆ.

ಅಂತೆಯೇ ಜನವರಿ ಮಧ್ಯದವರೆಗೆ ಈಶಾನ್ಯ ಮಾನ್ಸೂನ್ ಸಮಯದಲ್ಲಿ ಸಾಕಷ್ಟು ಮಳೆಯಾಗುವ ನಿರೀಕ್ಷೆ ಇದ್ದು ಇದು ಮುಂಬರುವ ಬೇಸಿಗೆ ಕಾಲದಲ್ಲಿ ತಮಿಳುನಾಡಿನ ನೀರಿನ ಅವಶ್ಯಕತೆಗಳನ್ನು ಪೂರೈಸುವ ಸಾಧ್ಯತೆಯಿದೆ.

ಏತನ್ಮಧ್ಯೆ, ಡೆಲ್ಟಾ ಪ್ರದೇಶಗಳಲ್ಲಿನ ಆಯಕಟ್ ಭೂಮಿಗೆ ಅನುಕೂಲವಾಗುವಂತೆ ನೀರು ಸಂಗ್ರಹಣಾ ಸೌಲಭ್ಯಗಳನ್ನು ವಿಸ್ತರಿಸಬೇಕೆಂದು ರೈತರು ತಮಿಳುನಾಡು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಆದಾಗ್ಯೂ, ರಾಜ್ಯ ಸರ್ಕಾರವು ಅನುಷ್ಠಾನಕ್ಕಾಗಿ ಡಬ್ಲ್ಯೂಆರ್‌ಡಿ ಫಖಆ (ಜಲ ಸಂಪನ್ಮೂಲ ಅಭಿವೃದ್ಧಿ ಇಲಾಖೆ) ಗೆ ಹಣವನ್ನು ಮಂಜೂರು ಮಾಡಿದರೆ ಮಾತ್ರ ಶಾಶ್ವತ ಪರಿಹಾರವನ್ನು ಒದಗಿಸಲು ಹೊಸ ಯೋಜನೆಗಳು ಕಾರ್ಯಸಾಧ್ಯವಾಗುತ್ತವೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಹಿರಿಯ ಫಖಆ ಅಧಿಕಾರಿಯೊಬ್ಬರು ಮಾತನಾಡಿ, ''ನಾವು ಬ್ಯಾರೇಜ್‌ಗಳನ್ನು ನಿರ್ಮಿಸಲು ಕಾವೇರಿ ಮತ್ತು ಕೊಲ್ಲಿಡಂ ನದಿಗಳ ಉದ್ದಕ್ಕೂ ಸುಮಾರು 10 ಸ್ಥಳಗಳನ್ನು ಗುರುತಿಸಿದ್ದೇವೆ. ಇದರಿಂದ ಹೆಚ್ಚುವರಿಯಾಗಿ 10 ಟಿಎಂಸಿ ನೀರು ಸಂಗ್ರಹಿಸಬಹುದು. ಈ ಉದ್ದೇಶಕ್ಕಾಗಿ ನಾವು ವಿವರವಾದ ಯೋಜನಾ ವರದಿಗಳನ್ನು ಸಿದ್ಧಪಡಿಸಿದ್ದೇವೆ ಮತ್ತು ಸರ್ಕಾರಕ್ಕೆ ಸಲ್ಲಿಸಿದ್ದೇವೆ ಎಂದು ಮಾಹಿತಿ ನೀಡಿದ್ದಾರೆ.

## ಕೆನಡಾದಲ್ಲಿ ಕಾನ್ಸುಲರ್ ಶಿಬಿರ ಸ್ಥಗಿತಕ್ಕೆ ಭಾರತದ ನಿರ್ಧಾರ

**ಒಟ್ಟಾವ :** ಕೆನಡಾದ ಭದ್ರತಾ ಏಜೆನ್ಸಿಗಳಿಂದ ಕನಿಷ್ಠ ಭದ್ರತಾ ರಕ್ಷಣೆಯೂ ನಿರಾಕರಿಸಲಾಗಿರುವುದರಿಂದ ಯೋಜಿತ ಕಾನ್ಸುಲರ್ ಶಿಬಿರಗಳನ್ನು ರದ್ದುಗೊಳಿಸಲು ಕೆನಡಾದಲ್ಲಿನ ಭಾರತೀಯ ಹೈಕಮಿಷನ್ ನಿರ್ಧರಿಸಿದೆ. ನವೆಂಬರ್ 2 ಮತ್ತು 3ರಂದು ಸರ್ರೆ ಹಾಗೂ ಬ್ರಾಂಪ್ಟನ್ ನಲ್ಲಿ ನಡೆದಿದ್ದ ಕಾನ್ಸುಲರ್ ಶಿಬಿರದ ಮೇಲೆ ಖಾಲಿಸ್ತಾನ್ ಪರ ಗುಂಪು ದಾಳಿ ಮಾಡಿ ದಾಂಧಲೆ ನಡೆಸಿತ್ತು. 'ಸಮುದಾಯ ಶಿಬಿರ ಸಂಘಟಕರಿಗೆ ಕನಿಷ್ಠ ಭದ್ರತೆಯನ್ನೂ ಒದಗಿಸಲು ಸಾಧ್ಯವಿಲ್ಲ ಎಂದು ಭದ್ರತಾ ಏಜೆನ್ಸಿಗಳು ತಿಳಿಸಿರುವ ಹಿನ್ನೆಲೆಯಲ್ಲಿ ಕೆಲವು ನಿಗದಿತ ಕಾನ್ಸುಲರ್ ಶಿಬಿರಗಳನ್ನು ರದ್ದುಗೊಳಿಸಲು ಕಾನ್ಸುಲೇಟ್ ನಿರ್ಧರಿಸಿದೆ' ಎಂದು ಟೊರಂಟೊದಲ್ಲಿನ ಭಾರತೀಯ ಕಾನ್ಸುಲೇಟ್ ಜನರಲ್ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ. ಇಂತಹ ಶಿಬಿರಗಳಲ್ಲಿ ಭಾರತೀಯ ಕಾನ್ಸುಲರ್ ಸಿಬ್ಬಂದಿ ಪಾಲ್ಗೊಳ್ಳುವುದನ್ನು ಖಾಲಿಸ್ತಾನ್ ಪರ ಗುಂಪು ವಿರೋಧಿಸುತ್ತಿದೆ. ಕೆನಡಿಯನ್ ಭಾರತೀಯರಿಗೆ ಅಗತ್ಯದ ಸೇವೆಗಳನ್ನು ಹಾಗೂ ಜೀವ ವಿಮಾ ಸರ್ಟಿಫಿಕೇಟ್ಗಳನ್ನು ಕಾನ್ಸುಲರ್ ಶಿಬಿರಗಳಲ್ಲಿ ಒದಗಿಸಲಾಗುತ್ತದೆ. ಸರ್ರೆಯಲ್ಲಿ ನವೆಂಬರ್ 3ರಂದು ಆಯೋಜಿಸಲಾಗಿದ್ದ ಶಿಬಿರದಲ್ಲಿ 750 ಜೀವ ವಿಮಾ ಸರ್ಟಿಫಿಕೇಟ್ ಒದಗಿಸಲಾಗಿದೆ ಎಂದು ಭಾರತೀಯ ಅಧಿಕಾರಿಗಳು ಹೇಳಿದ್ದಾರೆ.



## ಡೊನಾಲ್ಡ್ ಟ್ರಂಪ್ ಗೆಲುವಿನ ಬಳಿಕ ಕಣ್ಣೀರಿಟ್ಟ ಎಡ ಪಂಥೀಯರು

ಅಮೆರಿಕಾದ ನೂತನ ಅಧ್ಯಕ್ಷರಾಗಿ ಡೋನಾಲ್ಡ್ ಟ್ರಂಪ್ ಎರಡನೇ ಬಾರಿಗೆ ಆಯ್ಕೆಯಾಗಿದ್ದಾರೆ. ಅವರು ತಮ್ಮ ಎದುರಾಳಿ ಕಮಲಾ ಹ್ಯಾರಿಸ್ ಅವರನ್ನು ಪರಾಭವಗೊಳಿಸಿ ಮತ್ತೊಮ್ಮೆ ಶ್ವೇತ ಭವನ ಪ್ರವೇಶಿಸುತ್ತಿದ್ದಾರೆ. ಇದರ ಮಧ್ಯೆ ಬಲಪಂಥೀಯರಾದ ಡೋನಾಲ್ಡ್ ಟ್ರಂಪ್ ಅವರ ಗೆಲುವು ಎಡ ಪಂಥೀಯರನ್ನು ತೀವ್ರ ನಿರಾಸೆಗೊಳಿಸಿದೆ. ಅವರುಗಳು ತಮ್ಮ ನೋವನ್ನು ಕಣ್ಣೀರಿಡುತ್ತಾ ಹೊರ ಹಾಕಿರುವ ವಿಡಿಯೋವನ್ನು ಟ್ರಂಪ್ ಅಭಿಮಾನಿಗಳು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಳ್ಳುತ್ತಿದ್ದು, ಅವು ಈಗ ವೈರಲ್ ಆಗಿವೆ. ಯುಎಸ್ ಚುನಾವಣಾ ಫಲಿತಾಂಶಗಳು ಟ್ರಂಪ್ ಪರವಾಗಿ ಬಂದ ನಂತರ ಅನೇಕರು ದುಃಖಭರಿತರಾಗಿ ಅಳುತ್ತಿರುವುದು ಕಂಡುಬರುತ್ತದೆ. ಇಂತಹ ವೀಡಿಯೊಗಳ ಸಂಕಲನವು ಫಿ ನಲ್ಲಿ ಭಾರೀ ವೈರಲ್ ಆಗಿವೆ.ಸಾಮಾಜಿಕ ಮಾಧ್ಯಮ ಪ್ಲಾಟ್ಫಾರ್ಮ್ನಲ್ಲಿ 3 ಮಿಲಿಯನ್ ಅನುಯಾಯಿಗಳನ್ನು ಹೊಂದಿರುವ ಬಲಪಂಥೀಯ ರೇಡಿಯೊ ಶೋ ಹೋಸ್ಟ್ ಅಲೆಕ್ಸ್ ಜೋನ್ಸ್, ''ಬೆಸ್ಟ್ ಆಫ್ ಲೆಫ್ಟಿಸ್ಟ್, ಟ್ರಂಪ್ ವಿಕ್ಟರಿ ಮೆಲ್ಟ್‌ಡೌನ್ಸ್'' ಎಂಬ ಶೀರ್ಷಿಕೆಯೊಂದಿಗೆ ವೀಡಿಯೊವನ್ನು ಹಂಚಿಕೊಂಡಿದ್ದಾರೆ. ಸುಮಾರು 34 ಮಿಲಿಯನ್ ಜನರು ವೀಡಿಯೊವನ್ನು ವೀಕ್ಷಿಸಿದ್ದು, ಈಗಲೂ ಇದರ ನಾಗಾಲೋಟ ಮುಂದುವರೆದಿದೆ.

## ಅಮೆರಿಕಾ ಅಧ್ಯಕ್ಷೀಯ ಚುನಾವಣೆಯ ಸೋಲು - ಭಾವುಕರಾದ ಕಮಲಾ ಹ್ಯಾರಿಸ್ !

**ಅಮೆರಿಕಾ:** ನಿನ್ನೆಯಷ್ಟೇ ವಿಶ್ವದ ದೊಡ್ಡಣ್ಣ ಅಮೆರಿಕಾ ಅಧ್ಯಕ್ಷೀಯ ಚುನಾವಣೆಯ ಫಲಿತಾಂಶ ಹೊರಬಿದ್ದಿದ್ದು, ಅಮೆರಿಕದ 47ನೇ ಅಧ್ಯಕ್ಷರಾಗಿ ರಿಪಬ್ಲಿಕನ್ ಪಕ್ಷದ ಡೊನಾಲ್ಡ್ ಟ್ರಂಪ್ ಆಯ್ಕೆಯಾಗಿದ್ದಾರೆ. ಆದ್ರೆ ತೀವ್ರ ಪೈಪೋಟಿ ನೀಡಿದ್ದ ಡೆಮೋಕ್ರೆಟಿಕ್ ಪಕ್ಷದ ಕಮಲಾ ಹ್ಯಾರಿಸ್ ಪರಾಭವಗೊಂಡಿದ್ದಾರೆ.



ಅಮೆರಿಕಾ ಅಧ್ಯಕ್ಷೀಯ ಚುನಾವಣೆಯ ಫಲಿತಾಂಶದ ನಂತರ, ಸೋಲನ್ನು ಒಪ್ಪಿಕೊಂಡ ಕಮಲಾ ಹ್ಯಾರಿಸ್ ಅಮೆರಿಕದ ಜನರನ್ನುದ್ದೇಶಿಸಿ ಮಾತನಾಡಿದ್ದು, ಭಾವುಕ ಭಾಷಣ ಮಾಡಿದ್ದು, ಅಧಿಕಾರ ಹಸ್ತಾಂತರದ ಪ್ರಕ್ರಿಯೆಗಳಿಗೆ ತಮ್ಮ ಪಕ್ಷದ ಎಲ್ಲಾ ಸದಸ್ಯರು ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ. ನಾವು ಈ ಸೋಲನ್ನು ಒಪ್ಪಿಕೊಳ್ಳುತ್ತೇವೆ. ಆದ್ರೆ ನಮ್ಮ ಹೋರಾಟವನ್ನು ಎಂದಿಗೂ ನಿಲ್ಲಿಸುವುದಿಲ್ಲ. ಜನರ ತೀರ್ಪಿಗೆ ತಲೆಬಾಗುವುದು ನಮ್ಮ ಕರ್ತವ್ಯ. ಆದ್ರೆ ಮುಂದಿನ ಚುನಾವಣೆಯ ವರೆಗೂ ಡೆಮೋಕ್ರೆಟಿಕ್ ಪಕ್ಷದ ಹೋರಾಟ ನಿರಂತರವಾಗಿ ಮುಂದುವರೆಯಲಿದೆ ಎಂದು ಹೇಳಿದ್ದಾರೆ.

## ಗುಜರಾತ್‌ನಲ್ಲಿ ಝಿಕಾ ವೈರಸ್ ಪತ್ತೆ

**ಅಹಮದಾಬಾದ್:** ಗಾಂಧಿನಗರದ 70 ವರ್ಷದ ವ್ಯಕ್ತಿಯೊಬ್ಬರಿಗೆ ಝಿಕಾ ವೈರಸ್ ಪಾಸಿಟಿವ್ ದೃಢಪಟ್ಟಿದ್ದು, ಅವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿ ಡಿಸ್ಚಾರ್ಜ್ ಮಾಡಲಾಗಿದೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ. ನಾಲ್ಕು ದಿನಗಳ ಹಿಂದೆ ಝಿಕಾ ವೈರಸ್ ಸೋಂಕಿತ ವ್ಯಕ್ತಿ ಆಸ್ಪತ್ರೆಗೆ ದಾಖಲಾಗಿದ್ದು, ಸಂಪೂರ್ಣ




ಚೇತರಿಸಿಕೊಂಡ ನಂತರ ಅವರನ್ನು ಡಿಸ್ಚಾರ್ಜ್ ಮಾಡಲಾಗಿದೆ ಎಂದು ಗುಜರಾತ್ ಆರೋಗ್ಯ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ. ಅಕ್ಟೋಬರ್ 24ರಂದು ನೆಗಡಿ, ಜ್ವರ, ಕೀಲು ನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಈ ವ್ಯಕ್ತಿ ಗಾಂಧಿನಗರದ ಆಸ್ಪತ್ರೆಗೆ ದಾಖಲಾಗಿದ್ದರು. ಅವರ ದೇಹದ ಕೆಲ ದ್ರವರೂಪದ ಮಾದರಿಯನ್ನು ಪುಣೆಯಲ್ಲಿನ ರಾಷ್ಟ್ರೀಯ ವೈರಾಣು ಸಂಸ್ಥೆಗೆ ಪರೀಕ್ಷೆಗಾಗಿ ಕಳುಹಿಸಲಾಗಿತ್ತು. ಅದರ ವರದಿ ನಾಲ್ಕು ದಿನಗಳ ಹಿಂದೆ ಬಂದಿದ್ದು, ಅವರಿಗೆ ಝಿಕಾ ವೈರಸ್ ಪಾಸಿಟಿವ್ ದೃಢಪಟ್ಟಿದೆ. ಝಿಕಾ ವೈರಸ್ ಪ್ರಾಥಮಿಕವಾಗಿ ಈಡಿಸ್ ಸೊಳ್ಳೆಗಳಿಂದ ಹರಡುತ್ತದೆ.

## ಸರ್ಕಾರದ ವಿರುದ್ಧ ಲಾಹೋರ್ ಹೈಕೋರ್ಟ್‌ಗೆ 3 ವರ್ಷದ ಬಾಲಕಿ ಅರ್ಜಿ!



**ಇಸ್ಲಾಮಾಬಾದ್ :** ಪಾಕಿಸ್ತಾನದಲ್ಲಿ, ವಿಶೇಷವಾಗಿ ಲಾಹೋರ್ ನಲ್ಲಿ ವಾಯು ಗುಣಮಟ್ಟ ಅಪಾಯಕಾರಿ ಮಟ್ಟಕ್ಕೆ ಕುಸಿದಿರುವ ಹಿನ್ನೆಲೆಯಲ್ಲಿ ಸರಕಾರದ ವಿರುದ್ಧ 3 ವರ್ಷದ ಬಾಲಕಿ ಗುರುವಾರ ಲಾಹೋರ್ ಹೈಕೋರ್ಟ್ಗೆ ಅರ್ಜಿ ಸಲ್ಲಿಸಿರುವುದಾಗಿ ವರದಿಯಾಗಿದೆ.

'ವಾಯು ಮಾಲಿನ್ಯದಿಂದಾಗಿ ಸಣ್ಣ ಮಕ್ಕಳು ಹಾಗೂ ಹಿರಿಯರು ತೀವ್ರ ಸಮಸ್ಯೆಗೆ ಒಳಗಾಗಿದ್ದಾರೆ. ಸಂವಿಧಾನದ ಆರ್ಟಿಕಲ್ 99-ಎ ಪ್ರಕಾರ ನಾಗರಿಕರಿಗೆ ಶುದ್ಧ ಮತ್ತು ಆರೋಗ್ಯಯುತ ಪರಿಸರವನ್ನು ಒದಗಿಸುವುದಕ್ಕೆ ಸರಕಾರ ಬದ್ಧವಾಗಿದೆ. ಆದರೆ ಪಂಜಾಬ್ ಸರಕಾರ ದೇಶದ ಸಂವಿಧಾನ ಒದಗಿಸಿರುವ ಮೂಲಭೂತ ಹಕ್ಕುಗಳನ್ನು ರಕ್ಷಿಸಲು ವಿಫಲವಾಗಿದೆ. ಆದ್ದರಿಂದ ತನಗೆ, ತನ್ನ ಸ್ನೇಹಿತರಿಗೆ ಮತ್ತು ಮುಂದಿನ ಪೀಳಿಗೆಗೆ ನ್ಯಾಯ ಒದಗಿಸಿಕೊಡಬೇಕು' ಎಂದು 3 ವರ್ಷದ ಬಾಲಕಿ ಅಮಲ್ ಸುಖೇರಾ ತನ್ನ ವಕೀಲರ ಮೂಲಕ ಲಾಹೋರ್ ಹೈಕೋರ್ಟ್ಗೆ ಸಲ್ಲಿಸಿರುವ ಅರ್ಜಿಯಲ್ಲಿ ಮನವಿ ಮಾಡಿದ್ದಾಳೆ. ಗುರುವಾರ ಬೆಳಿಗ್ಗೆ ಲಾಹೋರ್ ನಲ್ಲಿ ವಾಯು ಗುಣಮಟ್ಟ ಸೂಚ್ಯಂಕದಲ್ಲಿ ವಾಯುಮಾಲಿನ್ಯ ಮಟ್ಟ 800ರ ಗಡಿಯನ್ನು ಮೀರಿದ್ದು ಜಾಗತಿಕವಾಗಿ ಗರಿಷ್ಠ ಮಟ್ಟದಲ್ಲಿತ್ತು.

### ಹೊಸ ದಾಖಲೆ ನಿರ್ಮಿಸಿದ ಭಾರತೀಯ ರೈಲ್ವೆ

## ಒಂದೇ ದಿನ 3 ಕೋಟಿಗೂ ಹೆಚ್ಚು ಜನರ ಪ್ರಯಾಣ

ನವದೆಹಲಿ: ರೈಲ್ವೆ ಸಚಿವಾಲಯದ ಪ್ರಕಾರ ನವೆಂಬರ್ 4, 2024 ರಂದು ಭಾರತೀಯ ರೈಲ್ವೇ ಒಂದೇ ದಿನದಲ್ಲಿ 3 ಕೋಟಿ ಪ್ರಯಾಣಿಕರನ್ನು ಸಾಗಿಸುವ ಮೂಲಕ ಗಮನಾರ್ಹ ದಾಖಲೆಯನ್ನು ಮಾಡಿದೆ. ಈ ಅಭೂತಪೂರ್ವ ಮೈಲಿಗಲ್ಲು ಭಾರತದ ಸಾರಿಗೆ ಅಗತ್ಯಗಳನ್ನು ಪೂರೈಸಲು ವಿಶೇಷವಾಗಿ ಹಬ್ಬದ ಋತುಗಳಲ್ಲಿ ಭಾರತೀಯ ರೈಲ್ವೇಯ ಸಾಮರ್ಥ್ಯ ಮತ್ತು ಬದ್ಧತೆಯನ್ನು ತಿಳಿಸುವಂತಿದೆ.



### ನವೆಂಬರ್ 4ರ ಪ್ರಯಾಣಿಕರ ಸಂಖ್ಯೆಗಳು

**ಉಪನಗರವಲ್ಲದ ಪ್ರಯಾಣಿಕರು: 120.72 ಲಕ್ಷ, 19.43 ಲಕ್ಷ ಟಿಕೆಟ್ ಕಾಯ್ದಿರಿಸಲಾಗಿದೆ ಮತ್ತು 101.29 ಲಕ್ಷ ಟಿಕೆಟ್ ಕಾಯ್ದಿರಿಸಲಾಗಿಲ್ಲ.**

**ಉಪನಗರ ಪ್ರಯಾಣಿಕರು: 180 ಲಕ್ಷ**

**ಒಟ್ಟು ಪ್ರಯಾಣಿಕರ ಸಂಖ್ಯೆ: 3 ಕೋಟಿಗೂ ಹೆಚ್ಚು. ಇದು 2024 ರ ಅತಿ ಹೆಚ್ಚು ಏಕದಿನ ಪ್ರಯಾಣಿಕರ ಸಂಖ್ಯೆಯಾಗಿದೆ.**

**ಬಿಹಾರ, ಪೂರ್ವ ಉತ್ತರ ಪ್ರದೇಶ ಮತ್ತು ಜಾರ್ಖಂಡ್ಗೆ ಭಾರಿ ಪ್ರಯಾಣದ ಬೇಡಿಕೆ**

**ಅಕ್ಟೋಬರ್ 1 ಮತ್ತು ನವೆಂಬರ್ 5 ರ ನಡುವೆ ಸುಮಾರು 6.85 ಕೋಟಿ ಪ್ರಯಾಣಿಕರು ಭಾರತೀಯ ರೈಲ್ವೆಯಲ್ಲಿ ಬಿಹಾರ, ಪೂರ್ವ ಉತ್ತರ ಪ್ರದೇಶ ಮತ್ತು ಜಾರ್ಖಂಡ್ನಂತಹ ರಾಜ್ಯಗಳಿಗೆ ಪ್ರಯಾಣಿಸಿದ್ದಾರೆ. ಈ ಬೃಹತ್ ಅಂಕಿ-ಅಂಶವು ಪ್ರಮುಖ ಹಬ್ಬಗಳ ಸಮಯದಲ್ಲಿ ರೈಲ್ವೆಯ ನಿರ್ಣಾಯಕ ಪಾತ್ರವನ್ನು ಪ್ರತಿಬಿಂಬಿಸುತ್ತದೆ ಮತ್ತು ಭಾರತೀಯ ರೈಲ್ವೆ ಒದಗಿಸಿದ ಸಾರಿಗೆಯ ಪ್ರಮಾಣವನ್ನು ಎತ್ತಿ ತೋರಿಸುತ್ತದೆ.**

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಅದ್ದೂರಿಯಾಗಿ 2ನೇ ಮದುವೆಯಾದ 'ಜೊತೆ ಜೊತೆಯಲಿ' ನಟಿ ಮಾನಸ



ಜೊತೆ ಜೊತೆಯಲಿ, ಲಕ್ಷ್ಮಿ ನಿವಾಸ ಖ್ಯಾತಿಯ ಮಾನಸ ಮನೋಹರ್ ಅವರು ಅದ್ದೂರಿಯಾಗಿ 2ನೇ ಮದುವೆಯಾಗಿದ್ದಾರೆ. ಗ್ರ್ಯಾಂಡ್ ವೆಡ್ಡಿಂಗ್‌ನ ಸುಂದರ ಫೋಟೋಗಳನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ಪ್ರೀತಂ ಚಂದ್ರ, ಜೊತೆ ಮಾನಸ ಮದುವೆ ಕುಟುಂಬಸ್ಥರು, ಆಪ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆದಿದೆ. ಇದೀಗ ನವಜೋಡಿಗೆ ಫ್ಯಾನ್ಸ್ ಶುಭಹಾರೈಸುತ್ತಿದ್ದಾರೆ.

ಅಂದಹಾಗೆ, ಇತ್ತೀಚೆಗೆ ನಟಿ ನಿಶ್ಚಿತಾರ್ಥದ ಸಂಭ್ರಮದಲ್ಲಿ ಅಭಿಮಾನಿಗಳೊಂದಿಗೆ ಹಂಚಿಕೊಂಡಿದ್ದರು. ಆಗ 2ನೇ ಮದುವೆನಾ? ಎಂದು ಅಭಿಮಾನಿಗಳು ಪ್ರಶ್ನೆ ಮಾಡಿದ್ದರು. ಅದಕ್ಕೆ ನಟಿ ಖಡಕ್ ಆಗಿ ಉತ್ತರ ನೀಡಿದರು.

ಎಲ್ಲರ ಸಂದೇಹಗಳಿಗೆ ಉತ್ತರ ಇದೆ. ಇದು ನನ್ನ ಎರಡನೇ ಮದುವೆ. ಕೆಲವು ಬಾರಿ ದೈಹಿಕವಾಗಿ ಮದುವೆಯಾಗುತ್ತೇವೆ ಆದರೆ ಯಾವುದೇ ಭಾವನಾತ್ಮಕ ಸಂಬಂಧವನ್ನು ಹೊಂದಿರುವುದಿಲ್ಲ. ನಾವು ಎಲ್ಲರ ಒಳಿತಿಗಾಗಿ ಮುಂದುವರಿಯಬೇಕು. ನಾವು ಮದುವೆಯಾಗುತ್ತಿದ್ದೇವೆ. ನನಗೆ ಯಾವುದೇ ಅಪರಾಧ ಎನಿಸುತ್ತಿಲ್ಲ. ಆದರೆ ಕೃತಜ್ಞತೆ ಮಾತ್ರ ಇದೆ. ಆದ್ದರಿಂದ ಅದನ್ನು ವ್ಯಕ್ತಪಡಿಸುತ್ತಿದ್ದೇನೆ ಎಂದು ನೆಟ್ಟಿಗರೊಬ್ಬರ ಕಾಮೆಂಟ್‌ಗೆ ನಟಿ ಸ್ಪಷ್ಟನೆ ಕೊಟ್ಟಿದ್ದರು. ಇನ್ನೂ ಮಾನಸ ಭಾವಿ ಪತಿ ಪ್ರೀತಮ್ ಚಂದ್ರ ಅವರು ಫುಟ್ ಬಾಲ್ ಪ್ಲೇಯರ್ ಆಗಿದ್ದಾರೆ. ಅವರು ಫುಟ್ ಬಾಲ್ ಅಕಾಡೆಮಿ ಕೂಡ ನಡೆಸುತ್ತಿದ್ದಾರೆ.



# ತಮ್ಮನಿಗೆ ಪ್ರೀತಿಯಿಂದ ವಿಶ್ ಮಾಡಿದ ರಾಧಿಕಾ ಪಂಡಿತ್

ನಟಿ ರಾಧಿಕಾ ಪಂಡಿತ್ ಅವರ ಸಹೋದರ ಗೌರಂಗ್ ಅವರಿಗೆ ಇಂದು (ನವೆಂಬರ್ 8) ಜನ್ಮದಿನ. ಈ ಹಿನ್ನೆಲೆಯಲ್ಲಿ ರಾಧಿಕಾ ಪಂಡಿತ್ ಅವರು ಸೋಶಿಯಲ್ ಮೀಡಿಯಾದಲ್ಲಿ ಕೆಲವ ಫೋಟೋಗಳನ್ನು ಹಂಚಿಕೊಂಡಿದ್ದಾರೆ.

'ಆತ್ಮೀಯ ಗೌರಂಗ್ ನಿನ್ನಂತ ಸಹೋದರ ಪಡೆದ ನಾನು ಅದೃಷ್ಟವಂತೆ' ಎಂದು ಬರೆದುಕೊಂಡಿರುವ ರಾಧಿಕಾ ಪಂಡಿತ್ ಅವರು, 'ಹುಟ್ಟು ಹಬ್ಬದ ಶುಭಾಶಯಗಳು ಗೊಲ್ಲು, ಲವ್ ಯೂ' ಎಂದಿದ್ದಾರೆ. ಈ ಫೋಟೋಗೆ ಫ್ಯಾನ್ಸ್ ಕಡೆಯಿಂದ ಲೈಕ್ಸ್ ಸಿಕ್ಕಿದೆ.

ಸೋಶಿಯಲ್ ಮೀಡಿಯಾದಲ್ಲಿ ರಾಧಿಕಾ ಪಂಡಿತ್ ಅವರ ಸಹೋದರನಿಗೆ ಎಲ್ಲರೂ ಶುಭಾಶಯ ಕೋರಿದ್ದಾರೆ. ಈ ಫೋಟೋಗಳನ್ನು ಫ್ಯಾನ್ಸ್ ತಮ್ಮ ಪೇಜ್ ಗಳಲ್ಲಿ ಹಂಚಿಕೊಂಡಿದ್ದಾರೆ.

ಪ್ರತಿ ವರ್ಷವೂ ತಪ್ಪದೇ ತಮ್ಮನಿಗೆ ರಾಧಿಕಾ ಪಂಡಿತ್ ಅವರು ಜನ್ಮದಿನದ ಶುಭಾಶಯ ಕೋರುತ್ತಾರೆ. ಈ ಮೊದಲು ರಕ್ಷಾ ಬಂಧನದ ಸಂದರ್ಭದಲ್ಲೂ ರಾಧಿಕಾ ಅವರು ತಮ್ಮನ ಫೋಟೋ ಹಂಚಿಕೊಂಡು ವಿಶ್ ಮಾಡಿದ್ದರು.

ರಾಧಿಕಾ ಪಂಡಿತ್ ಅವರು ಸದ್ಯ ಯಾವುದೇ ಸಿನಿಮಾ ಮಾಡುತ್ತಿಲ್ಲ. ಈ ಬಗ್ಗೆ ಫ್ಯಾನ್ಸ್ ಗೆ ಬೇಸರ ಇದೆ. ಅವರು ಪತಿ ಯಶ್ ಅವರ ಬೆಂಬಲಕ್ಕೆ ನಿಂತಿದ್ದಾರೆ. ಅವರು ಸೋಶಿಯಲ್ ಮೀಡಿಯಾದಲ್ಲಿ ಆ ಯಕ್ಟೀವ್ ಆಗಿದ್ದಾರೆ.



'ಹುಟ್ಟುಹಬ್ಬದ ಶುಭಾಶಯ ಗೊಲ್ಲು'

# ಮಾಸ್ ಆಗಿ ಎಂಟ್ರಿ ಕೊಟ್ಟ ಕಮಲ್ ಹಾಸನ್ 'ಥಗ್ ಲೈಫ್' ಚಿತ್ರದ ಟೀಸರ್ ಔಟ್

ತಮಿಳಿನ ಸ್ಟಾರ್ ನಟ ಕಮಲ್ ಹಾಸನ್ ನಟನೆಯ 'ಥಗ್ ಲೈಫ್' ಸಿನಿಮಾದ ಮೊದಲ ಟೀಸರ್ ರಿಲೀಸ್ ಆಗಿದೆ. ಪಕ್ಕಾ ಮಾಸ್ ಆಗಿ ನಟ ಎಂಟ್ರಿ ಕೊಟ್ಟಿದ್ದಾರೆ. ಕಮಲ್ ಹಾಸನ್ ಹುಟ್ಟುಹಬ್ಬದಂದು ಚಿತ್ರದ ಟೀಸರ್ ರಿವೀಲ್ ಮಾಡುವ ಮೂಲಕ ಅವರ ಅಭಿಮಾನಿಗಳಿಗೆ ಚಿತ್ರತಂಡ ಸರ್ಪ್ರೈಸ್ ಗಿಫ್ಟ್ ಕೊಟ್ಟಿದೆ.

ರಿಲೀಸ್ ಆಗಿರುವ ಟೀಸರ್‌ನಲ್ಲಿ ಕಮಲ್ ಹಾಸನ್ ಮಾಸ್ ಕ್ಲಾಸ್ ಆಗಿ ಎಂಟ್ರಿ ಕೊಟ್ಟಿದ್ದಾರೆ. ವಿಕ್ರಮ್ ಸಿನಿಮಾದ ನಂತರ ಮತ್ತೆ ಖಡಕ್ ಅವತಾರ ತಾಳಿದ್ದಾರೆ. ಈ ಚಿತ್ರದಲ್ಲಿ ಸಿಂಬು, ತ್ರಿಷಾ ಕೂಡ ನಟಿಸಿದ್ದಾರೆ. 'ಥಗ್ ಲೈಫ್' ಚಿತ್ರವನ್ನು ಮಣಿರತ್ನಂ ನಿರ್ದೇಶನ ಮಾಡಿದ್ದಾರೆ.

'ಥಗ್ ಲೈಫ್' ಚಿತ್ರ ತಮಿಳು, ಕನ್ನಡ ಸೇರಿದಂತೆ ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. ಮುಂದಿನ ವರ್ಷ ಜೂನ್ 5ರಂದು ರಿಲೀಸ್ ಆಗಲಿದೆ. ಹಲವು ವರ್ಷಗಳ ಬಳಿಕ ಕಮಲ್ ಮತ್ತು ಮಣಿರತ್ನಂ ಜೊತೆಯಾಗಿ ಕೆಲಸ ಮಾಡಿರುವ ಥಗ್ ಲೈಫ್ ಚಿತ್ರದ ಮೇಲೆ ಅಭಿಮಾನಿಗಳಿಗೆ ಬೆಟ್ಟದಷ್ಟು ನಿರೀಕ್ಷೆಯಿದೆ.



### 3ನೇ ಆವೃತ್ತಿಗೆ ಭರ್ಜರಿ ತಯಾರಿ

# ರೀಟೆನ್ ಪಟ್ಟಿ ರಿಲೀಸ್

ವಿಶ್ವದ ಶ್ರೀಮಂತ ಕ್ರಿಕೆಟ್ ಲೀಗ್ ಇಂಡಿಯನ್ ಪ್ರೀಮಿಯರ್ ಲೀಗ್‌ನ 2025ರ ಆವೃತ್ತಿಗೆ ಮೆಗಾ ಹರಾಜು ನಡೆಸಲು ಕೆಲವೇ ದಿನಗಳು ಬಾಕಿಯಿದೆ. ಈ ಹೊತ್ತಿನಲ್ಲೇ ಮಹಿಳಾ ಪ್ರೀಮಿಯರ್ ಲೀಗ್ ತನ್ನ 3ನೇ ಆವೃತ್ತಿಗೆ ಕಾಲಿಡಲು ಭರ್ಜರಿ ತಯಾರಿ ಮಾಡಿಕೊಳ್ಳುತ್ತಿದೆ.

ಐಪಿಎಲ್ ಮೆಗಾ ಹರಾಜಿಗೆ ರೀಟೆನ್ ಆಟಗಾರರ ಪಟ್ಟಿ ಬಿಡುಗಡೆ ಮಾಡಿದಂತೆ, ಮಹಿಳಾ ಪ್ರೀಮಿಯರ್ ಲೀಗ್‌ನ ಮಿನಿ ಹರಾಜಿಗೆ 5 ಫ್ರಾಂಚೈಸಿಗಳು ರೀಟೆನ್ ಆಟಗಾರ್ತಿಯರ ಪಟ್ಟಿ ಬಿಡುಗಡೆ ಮಾಡಿವೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು 13 ಆಟಗಾರ್ತಿಯರನ್ನು ಉಳಿಸಿಕೊಂಡಿದ್ದು, ಕಳೆದ ಆವೃತ್ತಿಯಲ್ಲಿ ಕಳಪೆ ಪ್ರದರ್ಶನ ನೀಡಿದ 6 ಆಟಗಾರ್ತಿಯರನ್ನು ಹೊರದಬ್ಬಿದೆ. ಮುಂಬೈ ಇಂಡಿಯನ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿ ತಲಾ 14 ಆಟಗಾರ್ತಿಯರನ್ನ ಉಳಿಸಿಕೊಂಡಿದ್ದು, ನಾಲ್ವರನ್ನ ಬಿಡುಗಡೆಗೊಳಿಸಿವೆ. ಇನ್ನುಳಿದಂತೆ ಯುಪಿ ವಾರಿಯರ್ಸ್ 15 ಹಾಗೂ ಗುಜರಾತ್ ಜೈಂಟ್ಸ್ ಫ್ರಾಂಚೈಸಿ 14 ಆಟಗಾರ್ತಿಯರನ್ನು ರೀಟೆನ್ ಮಾಡಿಕೊಂಡಿವೆ.

ಒಟ್ಟಾರೆ 5 ತಂಡಗಳು ಒಟ್ಟು 71 ಮಂದಿಯನ್ನು ತಂಡದಲ್ಲಿ ಉಳಿಸಿಕೊಂಡಿದ್ದು, 19 ಸ್ಥಾನಗಳು ಬಾಕಿಯಿವೆ. ಸ್ಮೃತಿ ಮಂಧಾನ, ಹರ್ಮನ್ ಪ್ರೀತ್ ಕೌರ್, ಮೆಗ್ ಲ್ಯಾನಿಂಗ್, ಹಲಿಸ್ಸಾ ಹೀಲಿ, ಬೆತ್ ಮೂನಿ ಕ್ಯಾಪ್ಟನ್‌ಗಳಾಗಿ ಮುಂದುವರಿದಿದ್ದಾರೆ.

**ಪರ್ಸ್‌ನಲ್ಲಿ ಉಳಿದಿರುವುದೆಷ್ಟು?**




- **ಆರ್‌ಸಿಬಿ : 3.25 ಕೋಟಿ ರೂ.**
- **ಡೆಲ್ಲಿ ಕ್ಯಾಪಿಟಲ್ಸ್ : 2.50 ಕೋಟಿ ರೂ.**
- **ಮುಂಬೈ ಇಂಡಿಯನ್ಸ್ : 2.65 ಕೋಟಿ ರೂ.**
- **ಯುಪಿ ವಾರಿಯರ್ಸ್ : 3.90 ಕೋಟಿ ರೂ.**
- **ಗುಜರಾತ್ ಜೈಂಟ್ಸ್ : 4.40 ಕೋಟಿ ರೂ.**

**ಮಂಧಾನ ದುಬಾರಿ:** ಮಹಿಳಾ ಪ್ರೀಮಿಯರ್ ಲೀಗ್‌ನ ಕಳೆದ ಎರಡೂ ಆವೃತ್ತಿಗಳಲ್ಲೂ ಸ್ಮೃತಿ ಮಂಧಾನ ಅತ್ಯಂತ ದುಬಾರಿ ಆಟಗಾರ್ತಿಯಾಗಿದ್ದಾರೆ. ಮೊದಲ 2023ರಲ್ಲಿ ನಡೆದ ಮೊದಲ ಆವೃತ್ತಿಗೆ ಆರ್‌ಸಿಬಿ ಫ್ರಾಂಚೈಸಿ ಮಂಧಾನರನ್ನ 3.40 ಕೋಟಿ ರೂ.ಗೆ ಖರೀದಿ ಮಾಡಿತ್ತು.

**ಚೊಚ್ಚಲ ಚಾಂಪಿಯನ್ ಆರ್‌ಸಿಬಿ:** ಮಹಿಳಾ ಪ್ರೀಮಿಯರ್ ಲೀಗ್‌ನ (ಫಾಕಐ 2024) ಮೊದಲ ಆವೃತ್ತಿಯಲ್ಲಿ ಸತತ ಹೀನಾಯ ಸೋಲುಗಳೊಂದಿಗೆ ಲೀಗ್ ಸುತ್ತಿನಲ್ಲೇ ಹೊರಬಿದ್ದಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಹಿಳಾ ತಂಡ 2ನೇ ಆವೃತ್ತಿಯಲ್ಲೇ ಚಾಂಪಿಯನ್ ಕಿರೀಟ ಮುಡಿಗೇರಿಸಿಕೊಂಡಿತು. ಈ ಮೂಲಕ ಹೆಣ್ಮಕ್ಕಳೇ ಸ್ಟ್ರಾಂಗು ಗುರು ಎಂಬ ಮಾತನ್ನು ಮತ್ತೊಮ್ಮೆ ಸಾಬೀತು ಮಾಡಿದರು.

**ಕನ್ನಡತಿಯ ಕೈಚಳಕ:** ಟಫ್ ಫೈಟ್ ನೀಡುತ್ತಿದ್ದ ಡೆಲ್ಲಿ ಕ್ಯಾಪಿಟಲ್ಸ್ ಬ್ಯಾಟರ್‌ಗಳನ್ನ ಕಟ್ಟಿಹಾಕುವಲ್ಲಿ ಅಂದು ಕನ್ನಡತಿ ಶ್ರೇಯಾಂಕ ಪಾಟೀಲ್ ಯಶಸ್ವಿಯಾಗಿದ್ದರು. ಆರ್‌ಸಿಬಿ ಪರ ಬೌಲಿಂಗ್ ಕೈಚಳಕ ತೋರಿ 3.3 ಓವರ್‌ಗಳಲ್ಲಿ ಕೇವಲ 12 ರನ್ ಬಿಟ್ಟುಕೊಟ್ಟು 4 ವಿಕೆಟ್ ಕಿತ್ತರು. ಇದರೊಂದಿಗೆ ಸೋಫಿ ಮೊಲಿನೆಕ್ಸ್ 3 ವಿಕೆಟ್ ಹಾಗೂ ಆಶಾ ಸೋಭನಾ 2 ವಿಕೆಟ್ ಪಡೆದು ಮಿಂಚಿದ್ದರು.

# ಬೆಂಗಳೂರೇನು ನಿಮ್ಮ ಜಹಗೀರೇ



**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರಗಳಿಗೆ ಅನುದಾನ ನೀಡುವಾಗ ಜಯನಗರವನ್ನು ಹೊರಗಿಟ್ಟಿರುವ ವಿಚಾರ ರಾಜಕೀಯವಾಗಿ ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಈ ವಿಚಾರವಾಗಿ ಡಿಸಿಎಂ ಡಿಕೆ ಶಿವಕುಮಾರ್ ಬಳಿ ಸಂಸದ ತೇಜಸ್ವಿ ಸೂರ್ಯ ಪ್ರಸ್ತಾಪಿಸಿದ್ದರು. ಆ ಸಂದರ್ಭದಲ್ಲಿ ಡಿಸಿಎಂ ನೀಡಿದ್ದ ತಗ್ಗಿ-ಬಗ್ಗಿ ನಡೆಯಬೇಕೆಂಬ ಹೇಳಿಕೆ ಈಗ ಆಕ್ಷೇಪಕ್ಕೆ ಗುರಿಯಾಗಿದೆ. ಈ ವಿಚಾರವಾಗಿ ಖಂಡಿಸಿ ಪ್ರತಿಪಕ್ಷ ನಾಯಕ ಆರ್ ಅಶೋಕ್ ಟ್ವೀಟ್ ಮಾಡಿದ್ದು, ಹಾಗೆ ಹೇಳಲು ಬೆಂಗಳೂರೇನು ನಿಮ್ಮ ಜಹಗೀರೇ ಎಂದು ಡಿಕೆ ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.

**» ಅಶೋಕ್ ಕೌಂಟರ್**

ಡಿಕೆ ಶಿವಕುಮಾರ್ ಅವರೇ, ನಿಮ್ಮ ಬಳಿ ತಗ್ಗಿ-ಬಗ್ಗಿ ಇರಬೇಕು ಅನ್ನುವುದಕ್ಕೆ ಬೆಂಗಳೂರು ನಗರವನ್ನು ನಿಮ್ಮ ಜಹಗೀರು ಅಂದುಕೊಡಿದ್ದೀರಾ? ಅಧಿಕಾರ ಎನ್ನುವುದು ಮತದಾರರು ಕೊಟ್ಟಿರುವ ಭಿಕ್ಷೆ, ಸಂವಿಧಾನ ಕೊಟ್ಟಿರುವ ಜವಾಬ್ದಾರಿಯೇ ಹೊರತು ಪಾಳೆಗಾರಿಕೆ ಅಲ್ಲ. ಪ್ರಜಾಪ್ರಭುತ್ವದಲ್ಲಿ ನಾವು ತಗ್ಗಿ-ಬಗ್ಗಿ ನಡೆಯಬೇಕಿರುವುದು ಮತಭಿಕ್ಷೆ ನೀಡಿರುವ ಮತದಾರ ಪ್ರಭುಗಳಿಗೆ, ಪ್ರಜಾಪ್ರಭುತ್ವ ವ್ಯವಸ್ಥೆ ನೀಡಿರುವ ಸಂವಿಧಾನಕ್ಕೆ ಹೊರತು ಯಾವ ದೊಣ್ಣೆ ನಾಯಕನಿಗೂ ಅಲ್ಲ' ಎಂದು ಅಶೋಕ್ ತಿರುಗೇಟು ನೀಡಿದ್ದಾರೆ. ಮುಂದುವರಿದು, ಈ ನಿಮ್ಮ (ಡಿಕೆ ಶಿವಕುಮಾರ್ ಉದ್ದೇಶಿಸಿ) ಒಣ ಪ್ರತಿಷ್ಠೆ, ಧಿಮಾಕು, ದರ್ಬಾರು ಎಲ್ಲ ಬಿಟ್ಟು ಜನರ ಸೇವೆ ಮಾಡುವ ಮನೋಭಾವನೆ ಬೆಳೆಸಿಕೊಳ್ಳಿ. ಯಾವುದೇ ಕ್ಷೇತ್ರದ ಬಗ್ಗೆ ತಾರತಮ್ಯ ಮಾಡದೆ ಸಚಿವರಾಗಿ ನಿಮ್ಮ ಕರ್ತವ್ಯ ನಿರ್ವಹಿಸಿ' ಎಂದು ಟ್ವಿಟರ್‌ನಲ್ಲಿ ಅಶೋಕ್ ಕಿಡಿಕಾರಿದ್ದಾರೆ.

**ಡಿಕೆ ಶಿವಕುಮಾರ್ ಸ್ಪಷ್ಟನೆ ಏನು?:** ಅಶೋಕ್ ಟ್ವೀಟ್ ವಿಚಾರವಾಗಿ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯಿಸಿದ ಡಿಸಿಎಂ ಡಿಕೆ ಶಿವಕುಮಾರ್, ನಾನು ಆ ರೀತಿಯಾಗಿ ಹೇಳಿದ್ದು ಸಂಸದ ತೇಜಸ್ವಿ ಸೂರ್ಯ ಬಳಿ ಶಾಸಕ ಸಿಕೆ ರಾಮಮೂರ್ತಿ ಬಗ್ಗೆ. ನಾನು ಎಂಎಲ್‌ಎ ಆದ ಮೇಲೆ ಬೆಂಗಳೂರು ಅಧೋಗತಿಗೆ ಹೋಗಿದೆ ಎಂದಿದ್ದರು. ಅದಕ್ಕೆ ಹಾಗೆ ಹೇಳಿದ್ದೆ. ಅಲ್ಲದೆ, ಏನು ಅಗತ್ಯವಿದೆಯೋ ಲೆಕ್ಕ ಕೊಡಿ ಅಂತ ಹೇಳಿದ್ದೆ ಎಂದು ಹೇಳಿದರು.

ನಮ್ಮ ಮೆಟ್ರೋ ನಾಗಸಂದ್ರ, ಮಾದಾವರ ವಿಸ್ತರಿತ ಮಾರ್ಗದ ಮೆಟ್ರೋ ರೈಲಿನಲ್ಲಿ ಮಾತನಾಡಿದ್ದ ಸಂದರ್ಭ ಸಂಸದ ತೇಜಸ್ವಿ ಸೂರ್ಯ ಜಯನಗರಕ್ಕೆ ಅನುದಾನ ನೀಡದಿರುವ ಬಗ್ಗೆ ಡಿಕೆ ಶಿವಕುಮಾರ್ ಬಳಿ ಪ್ರಸ್ತಾಪಿಸಿದ್ದರು. ಆಗ ಡಿಕೆ ಶಿವಕುಮಾರ್ ತಗ್ಗಿ-ಬಗ್ಗಿ ನಡೆಯುವ ಹೇಳಿಕೆ ನೀಡಿದ್ದರು.

# ಆರ್‌ಸಿಬಿ ಖರೀದಿಸಲೇಬೇಕಾದ 4 ಆಟಗಾರರನ್ನು ಹೆಸರಿಸಿದ ಎಬಿಡಿ

ಐಪಿಎಲ್ ಇತಿಹಾಸದಲ್ಲೇ ಕಪ್ ಗೆಲ್ಲದ ಕೆಲವೇ ಕೆಲವು ತಂಡಗಳಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಕೂಡ ಒಂದು. ಕಳೆದ 17 ವರ್ಷಗಳಲ್ಲಿ ಆರ್‌ಸಿಬಿ ಕಪ್ ಗೆಲ್ಲದಿರಲು ಮುಖ್ಯ ಕಾರಣ ಬೌಲರ್‌ಗಳು ಎಂದರೆ ತಪ್ಪಾಗಲಾರದು. ಏಕೆಂಧರೆ ಪ್ರತಿ ಸೀಸನ್‌ನಲ್ಲೂ ಆರ್‌ಸಿಬಿ ಬಲಿಷ್ಠ ದಾಂಡಿಗರೊಂದಿಗೆ ಕಣಕ್ಕಿಳಿಯುವ ಆರ್ ಸಿಬಿ ಪಡೆಯಲ್ಲಿ ಉತ್ತಮ ಬೌಲರ್‌ಗಳ ಕೊರತೆ ಎದ್ದು ಕಾಣುತ್ತಿತ್ತು.



ಹೀಗಾಗಿಯೇ ಈ ಬಾರಿ ಆರ್‌ಸಿಬಿ ಪ್ರಮುಖ ಬೌಲರ್‌ಗಳ ಖರೀದಿಗೆ ಒತ್ತು ನೀಡಬೇಕೆಂದು ಮಾಜಿ ಆಟಗಾರ ಎಬಿ ಡಿವಿಲಿಯರ್ಸ್ ಅಭಿಪ್ರಾಯಪಟ್ಟಿದ್ದಾರೆ. ಅಲ್ಲದೆ ಐಪಿಎಲ್ ಮೆಗಾ ಹರಾಜಿನ ಮೂಲಕ ಆರ್‌ಸಿಬಿ ಖರೀದಿಸಲೇಬೇಕಾದ ನಾಲ್ವರು ಬೌಲರ್‌ಗಳನ್ನು ಸಹ ಎಬಿಡಿ ಹೆಸರಿಸಿದ್ದಾರೆ. ಅವರೆಂದರೆ...

**ಯುಜ್ವೇಂದ್ರ ಚಹಲ್:** ಐಪಿಎಲ್ ಮೆಗಾ ಹರಾಜಿನ ಮೂಲಕ ಆರ್‌ಸಿಬಿ ಯುಜ್ವೇಂದ್ರ ಚಹಲ್ ಅವರನ್ನು ಖರೀದಿಸಲೇಬೇಕು. ಏಕೆಂದರೆ ಐಪಿಎಲ್‌ನಲ್ಲಿ 160 ಪಂದ್ಯಗಳಿಂದ 205 ವಿಕೆಟ್ ಕಬಳಿಸಿರುವ ಚಹಲ್ ಆಯ್ಕೆಯಿಂದ ಆರ್‌ಸಿಬಿ ತನ್ನ ಸ್ಪಿನ್ ವಿಭಾಗವನ್ನು ಬಲಿಷ್ಠಗೊಳಿಸಬಹುದು ಎಂದು ಎಬಿ ಡಿವಿಲಿಯರ್ಸ್ ಅಭಿಪ್ರಾಯಪಟ್ಟಿದ್ದಾರೆ.

**ಕಗಿಸೊ ರಬಾಡ:** ಆರ್‌ಸಿಬಿ ತನ್ನ ವೇಗದ ಬೌಲಿಂಗ್ ವಿಭಾಗವನ್ನು ಬಲಪಡಿಸಲು ಸೌತ್ ಆಫ್ರಿಕಾ ವೇಗಿ ಕಗಿಸೊ ರಬಾಡ ಅವರನ್ನು ಆಯ್ಕೆ ಮಾಡಬೇಕು. ರಬಾಡ 80 ಐಪಿಎಲ್ ಪಂದ್ಯಗಳಿಂದ 117 ವಿಕೆಟ್ ಕಬಳಿಸಿದ್ದಾರೆ. ಹೀಗಾಗಿ ಅವರ ಆಯ್ಕೆಯು ಆರ್‌ಸಿಬಿ ತಂಡದ ಬಲವನ್ನು ಹೆಚ್ಚಿಸಲಿದೆ ಎಂದು ಎಬಿಡಿ ತಿಳಿಸಿದ್ದಾರೆ.

**ರವಿಚಂದ್ರನ್ ಅಶ್ವಿನ್:** ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಅನುಭವಿ ಬೌಲರ್‌ನ ಅವಶ್ಯಕತೆ ಕೂಡ ಇದೆ. ಇದಕ್ಕಾಗಿ ಅನುಭವಿ ಆಲ್‌ರೌಂಡರ್ ರವಿಚಂದ್ರನ್ ಅಶ್ವಿನ್ ಅವರನ್ನು ಖರೀದಿಸಬೇಕು. ಈ ಮೂಲಕ ಚಹಲ್-ಅಶ್ವಿನ್ ಜೋಡಿಯೊಂದಿಗೆ ಆರ್ ಸಿಬಿ ಸ್ಪಿನ್ ವಿಭಾಗವನ್ನು ಬಲಪಡಿಸಿಕೊಳ್ಳಬಹುದು ಎಂದು ಎಬಿಡಿ ಅಭಿಪ್ರಾಯಪಟ್ಟಿದ್ದಾರೆ.

**ಭುವನೇಶ್ವರ್ ಕುಮಾರ್:** ಕಗಿಸೊ ರಬಾಡಗೆ ಜೋಡಿಯಾಗಿ ಆರ್‌ಸಿಬಿ ಭಾರತೀಯ ಬೌಲರ್ ಆಗಿ ಭುವನೇಶ್ವರ್ ಕುಮಾರ್ ಅವರನ್ನು ಆಯ್ಕೆ ಮಾಡಬೇಕು. ಅನುಭವಿ ವೇಗಿಯಾಗಿರುವ ಭುವಿ ಐಪಿಎಲ್‌ನಲ್ಲಿ ಈಗಾಗಲೇ 181 ವಿಕೆಟ್ ಕಬಳಿಸಿದ್ದಾರೆ. ಹೀಗಾಗಿ ಅವರ ಆಗಮನದಿಂದಾಗಿ ಆರ್‌ಸಿಬಿ ಬೌಲಿಂಗ್ ಲೈನಪ್ ಮತ್ತಷ್ಟು ಬಲಿಷ್ಠವಾಗಲಿದೆ ಎಂದು ಎಬಿ ಡಿವಿಲಿಯರ್ಸ್ ತಿಳಿಸಿದ್ದಾರೆ.

ಅಂದರೆ ಎಬಿ ಡಿವಿಲಿಯರ್ಸ್ ಪ್ರಕಾರ, ಆರ್‌ಸಿಬಿ ತಂಡವು ಬೌಲಿಂಗ್ ಲೈನಪ್ ಬಲಿಷ್ಠಗೊಳಿಸಬೇಕಿದ್ದರೆ ಕಗಿಸೊ ರಬಾಡ, ಭುವನೇಶ್ವರ್ ಕುಮಾರ್, ಯುಜ್ವೇಂದ್ರ, ಚಹಲ್ ಹಾಗೂ ರವಿಚಂದ್ರನ್ ಅಶ್ವಿನ್ ಅವರನ್ನು ಖರೀದಿಸಲೇಬೇಕು. ಈ ಮೂಲಕ ಆರ್‌ಸಿಬಿ ಬಲಿಷ್ಠ ಪ್ಲೇಯಿಂಗ್ ಇಲೆವೆನ್ ರೂಪಿಸಿಕೊಳ್ಳಬಹುದು ಎಂದು ಎಬಿಡಿ ತಿಳಿಸಿದ್ದಾರೆ.

# ಭಾರತದ ವಕ್ಫ್ ಆಸ್ತಿ ಪಾಕಿಸ್ತಾನದಷ್ಟಿದೆ

**ವಿಜಯಪುರ:** ಭಾರತದಲ್ಲಿ ಈಗಲೇ ಒಂದು ಪಾಕಿಸ್ತಾನ ನಿರ್ಮಾಣ ಆಗಿದೆ. ಭಾರತದ ವಕ್ಫ್ ಆಸ್ತಿ ಪಾಕಿಸ್ತಾನದಷ್ಟಿದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿಕೆ ನೀಡಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಭಾರತದಲ್ಲಿ ಇನ್ನೊಂದು ಪಾಕಿಸ್ತಾನ ನಿರ್ಮಾಣ ಆಗಿದೆ. ದಿನದಿಂದ ದಿನಕ್ಕೆ ಆಸ್ತಿ ವಕ್ಫ್ ಪಾಲಾಗುತ್ತಿದೆ. ನಾಲಾಯಕ್ ಕಾಂಗ್ರೆಸ್ ಮಾಡಿದ ಕಾನೂನು ಇದಾಗಿದೆ. ವಕ್ಫ್ ವಿರುದ್ಧ ದೊಡ್ಡ ಸಂಗ್ರಾಮ ಆಗಬೇಕಿದೆ. ದೆಹಲಿಯಲ್ಲಿ ಮೌಲ್ವಿ ಚಂದ್ರಬಾಬು ನಾಯ್ಡು, ನಿತೇಶ್‌ಗೆ ಧಮ್ಕಿ ಹಾಕಿದ್ದಾನೆ. ಬಿಲ್‌ಗೆ ಬೆಂಬಲ ನೀಡಿದರೆ 5 ಲಕ್ಷ ಜನ ಸೇರಿಸುತ್ತೇನೆ ಎಂದಿದ್ದಾನೆ ಎಂದು ಹೇಳಿದರು.

**» ಯತ್ನಾಳ್ ಆರೋಪ**

ಅಂದು ಕುಂಕುಮ ಹಚ್ಚದ ಸಿಎಂ ಈಗ ಕುಂಕುಮ ಹಚ್ಚಿಕೊಳ್ಳುತ್ತಿದ್ದಾನೆ. ಚಾಮುಂಡೇಶ್ವರಿ ಬಳಿ ಹೋಗಿ ಈಗ ಕುಂಕುಮ ಹಚ್ಚಿ ಎನ್ನುತ್ತಿದ್ದಾನೆ. ವಿಜಯಪುರದ ವಾಗ್ದೇವಿ ದೇಗುಲದ ಒಳಗೆ ಸಿಎಂ ಹೋಗಲಿಲ್ಲ. ವಾಗ್ದೇವಿ ಶಾಪದಿಂದಲೇ ಮುಡಾದಲ್ಲಿ ಸಿಎಂ ಸಿಕ್ಕಿಹಾಕಿಕೊಂಡಿದ್ದಾನೆ. ಆದರೆ ವಿಜಯಪುದಲ್ಲಿ ಮತಾಂಧ ಮೌಲ್ವಿ ಮನೆಗೆ ಹಲ್ಲು ಕಿರಿಯುತ್ತಾ ಹೋಗುತ್ತಾನೆ ಎಂದು ಸಿದ್ದರಾಮಯ್ಯ ವಿರುದ್ಧ ಏಕವಚನದಲ್ಲಿ ವಾಗ್ದಾಳಿ ನಡೆಸಿದರು.



2029ಕ್ಕೆ ಭಾರತವನ್ನು ಮುಸ್ಲಿಂ ರಾಷ್ಟ್ರ ಮಾಡಲಿದ್ದಾರೆ. ಅದಕ್ಕೆ ನಾವು ಎಚ್ಚೆತ್ತುಕೊಳ್ಳಬೇಕಿದೆ. ನಾವು ಜಾತಿ ಎಂದು ಹೋದರೆ ಕಡಿದು ಹಾಕುತ್ತಾರೆ. ಬಾಂಗ್ಲಾದಲ್ಲಿ ಏನಾಗುತ್ತಿದೆ ಅದಕ್ಕೆ ನಾವು ಎಚ್ಚೆತ್ತುಕೊಳ್ಳಬೇಕಿದೆ. ಈಗ ಹೋರಾಟ ಶುರುವಾಗಿದೆ, ಮುಂದೆ ಹೋರಾಟ ದೊಡ್ಡದಾಗಬೇಕು ಎಂದರು.

ಕಾಂಗ್ರೆಸ್‌ನಲ್ಲೆ ಶಾಸಕರು ಜಮೀರ್ ವಿರುದ್ಧ ಅಸಮಾಧಾನಗೊಂಡಿದ್ದಾರೆ. ಜಮೀರ್ ಪ್ರವಾಸ ತಡೆಯಿರಿ ಎನ್ನುತ್ತಿದ್ದಾರೆ. ಜಮೀರ್ ನನಗೆ ನಿಮ್ಮ ಅಪ್ಪನ ಆಸ್ತಿಯಾ ಎಂದಿದ್ದ, ನಾ ಇದು ನಿಮ್ಮ ಅಪ್ಪಂದ ಎಂದು ಕೇಳಿದ್ದೆ. ಜಮೀರ್ ಅಶ್ವಮೇಧವನ್ನು ಕಲಬುರ್ಗಿ, ಬೀದರ್‌ನಲ್ಲಿ ಯಾರು ತಡೆಯಲಿಲ್ಲ. ನಾನು ಜಮೀರ್ ಅಶ್ವಮೇಧ ಕುದುರೆಯನ್ನ ವಿಜಯಪುರದಲ್ಲಿ ತಡೆದಿದ್ದೇನೆ ಎಂದು ಹರಿಹಾಯ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com